ಸಂಪುಟ: 13 Volume | ಸಂಚಿಕೆ: 359 Issue | ಪುಟಗಳು 08 Pages | ಗುರುವಾರ 26 ಮಾರ್ಚ್ 2026 | ₹6 | PRGINO.120927 (RNINO:KARKAN/2011/48371) | BDR/054/2026-2027 | www.mallammanudi.in | mallammanudi@gmail.com | 9448604450, 9845028349

ಬೀದರ | ಕಲ್ಬುರ್ಗಿ | ಯಾದಗಿರಿ | ರಾಯಚೂರು | ಕೊಪ್ಪಳ | ಬಳ್ಳಾರಿ | ಬಾಗಲಕೋಟೆ | ವಿಜಯನಗರ & ವಿಜಯಪುರ ಜಿಲ್ಲೆಗಳಲ್ಲಿ ಏಕಕಾಲಕ್ಕೆ ಪ್ರಕಟ

**ಬೆಳಗು**

ಧೈರ್ಯ ಅಂದರೆ ಭಯ ಇಲ್ಲದಿರುವುದಲ್ಲ, ಭಯದ ಮೇಲೆ ಜಯ ಸಾಧಿಸುವುದು.
–ನೆಲ್ಸನ್ ಮಂಡೇಲಾ

# ಮಲ್ಲಮ್ಮ ನುಡಿ

MN ಸತ್ಯಮೇವ ಜಯತೆ
ಕನ್ನಡ ಕಿರಣ
Mallammanudi Regional News Paper
ಪ್ರಾದೇಶಿಕ ಕನ್ನಡ ದೈನಿಕ
ಸಂಪಾದಕರು: ರಮೇಶ ರೆಡ್ಡಿ | ಪ್ರಧಾನ ಸಂಪಾದಕರು: ಮಾಣಿಕರೆಡ್ಡಿ , ಕೌಡಾಳೆ

ನಿಷೇಧಿತ ಪ್ಲಾಸ್ಟಿಕ್ ವಶ 10ಸಾವಿರ ರೂ ದಂಡ 6
ವಿಶ್ವ ಕ್ಷಯರೋಗ: ಜಾಗೃತಿ ಅಗತ್ಯ 7
ಆನೆ, ಕಾಡೆಮ್ಮೆ ಹಾವಳಿ ನಿಯಂತ್ರಣಕ್ಕೆ ಮನವಿ 8




ಮೈಸೂರು: ಪ್ರಜ್ಞಾಪ್ರವಾಹದ ವತಿಯಿಂದ ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾಲಯದಲ್ಲಿ ನಡೆಯುತ್ತಿರುವ ಏಕಾತ್ಮ ಮಾನವ ದರ್ಶನ ಕುರಿತು ಅಂತರರಾಷ್ಟ್ರೀಯ ಸಮ್ಮೇಳನವನ್ನು ರಾಜ್ಯಪಾಲ ಥಾವರಚಂದ್ ಗೆಹ್ಲೋತ್, ಸುತ್ತೂರು ಮಠದ ಪೂಜ್ಯ ಶ್ರೀ ಶಿವರಾತ್ರಿದೇಶಿಕೇಂದ್ರ ಮಹಾಸ್ವಾಮೀಜಿ, ಕುಲಪತಿ ಪ್ರೊ. ಶರಣಪ್ಪ ಹಲಸೆ, ಪ್ರಜ್ಞಾಪ್ರವಾಹದ ಕರ್ನಾಟಕ ದಕ್ಷಿಣ ಸಂಯೋಜಕ ಡಾ.ಪ್ರದೀಪ ಭಾರದ್ವಾಜ್ ಉದ್ಘಾಟಿಸಿದರು.

## ಯುದ್ಧ: ಮೋದಿ ಮಧ್ಯಸ್ಥಿಕೆ ವಹಿಸಬೇಕು

• ಮಲ್ಲಮ್ಮ ನುಡಿ ವಾರ್ತೆ ನವದೆಹಲಿ

ಪಶ್ಚಿಮ ಏಷ್ಯಾ ಬಿಕ್ಕಟ್ಟಿನ ಕುರಿತು ಸರ್ವಪಕ್ಷ ಸಭೆ ಕರೆಯುವ ಕೇಂದ್ರದ ನಿರ್ಧಾರದ ಬಗ್ಗೆ ಬಿಜೆಪಿ ಮತ್ತು ವಿರೋಧ ಪಕ್ಷಗಳ ನಡುವೆ ತೀವ್ರ ವಾಗ್ವಾದ ನಡೆದಿದೆ.

ಕಾಂಗ್ರೆಸ್ ಮತ್ತು ಅದರ ಮಿತ್ರಪಕ್ಷಗಳು ಈಗ ಸರ್ವಪಕ್ಷ ಸಭೆ ಕರೆದಿರುವುದು ತೀವ್ರ ವಿಳಂಬವಾದ ಕ್ರಮ ಎಂದು ಟೀಕಿಸಿದ್ದು, ಸರ್ಕಾರದ ವಿದೇಶಾಂಗ ನೀತಿ, ಪ್ರಧಾನಿ ನರೇಂದ್ರ ಮೋದಿ ನಿರ್ಣಾಯಕ ಚರ್ಚೆಯಲ್ಲಿ ಏಕೆ ಭಾಗವಹಿಸುತ್ತಿಲ್ಲ ಎಂದು ಪ್ರಶ್ನಿಸಿವೆ.

ಆದರೆ ಪ್ರತಿಪಕ್ಷಗಳು ಸೂಕ್ಷ್ಮ ವಿಷಯದಲ್ಲೂ ರಾಜಕೀಯ ಮಾಡುತ್ತಿವೆ ಎಂದು ಬಿಜೆಪಿ ತಿರುಗೇಟು ನೀಡಿದೆ. ರಕ್ಷಣಾ ಸಚಿವ ರಾಜನಾಥ್ ಸಿಂಗ್ ಬುಧವಾರ ಸಂಜೆ



ನಡೆಯುವ ಸರ್ವಪಕ್ಷ ಸಭೆಯ ಅಧ್ಯಕ್ಷತೆ ವಹಿಸುವ ಸಾಧ್ಯತೆಯಿದ್ದು, ವಿದೇಶಾಂಗ ಸಚಿವ ಎಸ್ ಜೈಶಂಕರ್ ಭಾಗವಹಿಸುವ ನಿರೀಕ್ಷೆಯಿದೆ. ಪಶ್ಚಿಮ ಏಷ್ಯಾ ಪರಿಸ್ಥಿತಿಯ ಕುರಿತು ಸಂಸತ್ತಿನಲ್ಲಿ ಪ್ರಧಾನಿ ನರೇಂದ್ರ ಮೋದಿ ಭಾಷಣ ಮಾಡಿದ ಬಳಿಕ ಈ ಸರ್ವಪಕ್ಷ ಸಭೆ ಕರೆಯಲಾಗಿದೆ.

## ಒಳಮೀಸಲು ಕುರಿತು ವಿಸ್ತೃತ ಚರ್ಚೆ

• ಮಲ್ಲಮ್ಮ ನುಡಿ ವಾರ್ತೆ ಬೆಂಗಳೂರು

ಒಳಮೀಸಲಾತಿಗೆ ಸಂಬಂಧಿಸಿದಂತೆ ರಾಜ್ಯ ಸರಕಾರವು ಸಂಬಂಧಿಸಿದ ಎಲ್ಲಾ ಒಳಪಂಗಡಗಳ ಹಿತಾಸಕ್ತಿಯನ್ನೂ ಪರಿಗಣನೆಗೆ ತೆಗೆದುಕೊಳ್ಳಲಿದೆ ಎಂದು ಬೃಹತ್ ಕೈಗಾರಿಕಾ ಸಚಿವ ಎಂ ಬಿ ಪಾಟೀಲ ಹೇಳಿದ್ದಾರೆ.

ಒಳಮೀಸಲಾತಿ ಇಲ್ಲದ ಹಳೆಯ ಮೀಸಲಾತಿ ಪದ್ಧತಿಯನ್ನೇ ಮುಂದುವರಿಸಬೇಕು ಎಂದು ಆಗ್ರಹಿಸಿ ಕರ್ನಾಟಕ ರಾಜ್ಯ ಬಲಗೈ ಸಮುದಾಯಗಳ ಒಕ್ಕೂಟವು ನಗರದ ಸ್ವಾತಂತ್ರ್ಯ ಉದ್ಯಾನದಲ್ಲಿ ಹೋರಾಟ ನಡೆಸುತ್ತಿದ್ದು, ಅದರ ಮನವಿ ಸ್ವೀಕರಿಸಿ ಮಾತನಾಡಿ,

ಶುಕ್ರವಾರ ಸಿದ್ದರಾಮಯ್ಯ ಅವರ ಅಧ್ಯಕ್ಷತೆಯಲ್ಲಿ ನಡೆಯುವ ಸಂಪುಟ ಸಭೆಯಲ್ಲಿ ಈ ವಿಚಾರವಾಗಿ ಪ್ರತಿಯೊಂದು ಸಾಧಕಬಾಧಕಗಳನ್ನು ವಿಸ್ತೃತವಾಗಿ ಚರ್ಚಿಸಲಾಗುವುದು.



ನಂತರ ಎಲ್ಲರಿಗೂ ನ್ಯಾಯ ಸಿಗುವಂತಹ ಸೂತ್ರವನ್ನು ರೂಪಿಸಲಾಗುವುದು ಎಂದು ಪುನರುಚ್ಚರಿಸಿದ್ದಾರೆ.ಾಂಗ್ರೆಸ್ ಸರಕಾರವು ಬುದ್ಧ, ಬಸವ ಮತ್ತು ಅಂಬೇಡ್ಕರ್ ತತ್ವಗಳಲ್ಲಿ ನಂಬಿಕೆ ಇಟ್ಟುಕೊಂಡಿದೆ. ಹೀಗಾಗಿ ನಾವು ಯಾವುದೇ ಸಮುದಾಯಕ್ಕೂ ಅನ್ಯಾಯವಾಗಲು ಬಿಡುವುದಿಲ್ಲ. ಯಾವುದೇ ಉಪಕ್ರಮವನ್ನು ಜಾರಿಗೆ ತರುವ ಮೊದಲು ಎಲ್ಲ ಮಗ್ಗುಲುಗಳಿಂದಲೂ ಚರ್ಚಿಸಬೇಕಾಗುತ್ತದೆ ಎಂದು ಅವರು ಪ್ರತಿಭಟನಾನಿರತರಿಗೆ ಆಶ್ವಾಸನೆ ನೀಡಿದ್ದಾರೆ.

## ದಿಲ್ಲಿಯಲ್ಲಿ ಡಿಕೆಶಿ ಭೋಜನಕೂಟ

**ಬೆಂಗಳೂರು:** ಕೆಪಿಸಿಸಿ ಅಧ್ಯಕ್ಷ ಹಾಗೂ ಉಪ ಮುಖ್ಯಮಂತ್ರಿ ಡಿಕೆ.ಶಿವಕುಮಾರ್ ಅವರು ದೆಹಲಿಗೆ ಭೇಟಿ ನೀಡಿದ್ದು, ತಮ್ಮ ಬೆಂಬಲಿಗರೊಂದಿಗೆ ಖಾಸಗಿ ಹೋಟೆಲ್‌ನಲ್ಲಿ ಭೋಜನಕೂಟದ ಸಭೆ ನಡೆಸಿದ್ದಾರೆ. ಇದರ ಬೆನ್ನಲ್ಲೇ ರಾಜ್ಯ ರಾಜಕೀಯದಲ್ಲಿ ನಾಯಕತ್ವ ಬದಲಾವಣೆ ಕುರಿತು ಮತ್ತೆ ಚರ್ಚೆಗಳು ಆರಂಭವಾಗಿವೆ. ಸಿದ್ಧರಾಮಯ್ಯ ಅವರು ಎರಡೂವರೆ ವರ್ಷಗಳ ಕಾಲ ಮುಖ್ಯಮಂತ್ರಿಯಾಗಿ ಸೇವೆ ಸಲ್ಲಿಸಿದ ನಂತರ ರಾಜೀನಾಮೆ ನೀಡಬೇಕು ಎಂಬ ಹೈಕಮಾಂಡ್ ಮಟ್ಟದಲ್ಲಿ ಆದ ಒಪ್ಪಂದಕ್ಕೆ ಅನುಗುಣವಾಗಿ, ಸಿಎಂ ಹುದ್ದೆ ಬದಲಾವಣೆಗಾಗಿ ಹೈಕಮಾಂಡ್ ಮೇಲೆ ಒತ್ತಡ ಹೇರುವ ಕುರಿತು ಚರ್ಚೆ ನಡೆದಿವೆ ಎನ್ನಲಾಗಿದೆ.

## ಗುತ್ತಿಗೆದಾರರ ವಿರುದ್ಧ ಎಫ್‌ಐಆರ್

**ಬೆಂಗಳೂರು:** ಬೆಂಗಳೂರಿನಲ್ಲಿ ಕಸ ಗುತ್ತಿಗೆದಾರರು ಕಡಿಮೆ ಮೌಲ್ಯದ ಪ್ಲಾಸ್ಟಿಕ್ ಅನ್ನು ವರ್ಗಾವಣೆ ಕೇಂದ್ರಕ್ಕೆ ಕಳುಹಿಸದೆ, ಮಾರ್ಷಲ್‌ಗಳ ಕ್ರಮದ ಬಳಿಕ ತ್ಯಾಜ್ಯವನ್ನು ಬೇರ್ಪಡಿಸಿ ಸೇವೆಯನ್ನು ನಿಲ್ಲಿಸುವುದಾಗಿ ಬೆದರಿಕೆ ಹಾಕುತ್ತಿದ್ದಾರೆ. ಈ ಹಿನ್ನೆಲೆಯಲ್ಲಿ ಗ್ರೇಟರ್ ಬೆಂಗಳೂರು ಪ್ರಾಧಿಕಾರ(ಜಿಬಿಎ) ವ್ಯಾಪ್ತಿಯಲ್ಲಿ 20ಕ್ಕೂ ಹೆಚ್ಚು ಗುತ್ತಿಗೆದಾರರ ವಿರುದ್ಧ ಎಫ್‌ಐಆರ್ ದಾಖಲಿಸಲಾಗಿದೆ. ಜಿಬಿಎ ಯಾವುದೇ ಬ್ಲ್ಯಾಕ್‌ಮೇಲಿಂಗ್ಗೆ ಅವಕಾಶ ನೀಡುವುದಿಲ್ಲ. ಹೀಗಾಗಿ ಎಫ್‌ಐಆರ್‌ಗಳನ್ನು ದಾಖಲಿಸಿದೆ ಎಂದು ಬೆಂಗಳೂರು ಘನತ್ಯಾಜ್ಯ ನಿರ್ವಹಣಾ ಲಿಮಿಟೆಡ್ ಸಿಇಒ ಕರೀಗೌಡ ತಿಳಿಸಿದ್ದಾರೆ.




## ಶಾಸಕರ ಫೋಟೋ ಶೂಟ್ ಚರ್ಚೆ..!

**ಬೆಂಗಳೂರು:** ವಿಧಾನಸೌಧದ ಗ್ರ್ಯಾಂಡ್ ಸ್ಟೆಪ್ ಮುಂಭಾಗದಲ್ಲಿ ಶಾಸಕರ ಫೋ–ಟೋ ಶೂಟ್ ಇದೀಗ ಕುತೂಹಲಕ್ಕೆ ಕಾರಣವಾಗಿದೆ. ಸಾಮಾನ್ಯವಾಗಿ ವಿಧಾನಸಭೆ ಅವಧಿ ಮುಕ್ತಾಯಗೊಳ್ಳುವ ಸಂದರ್ಭದಲ್ಲಿ ಸ್ಪೀಕರ್ ಸಮ್ಮುಖದಲ್ಲಿ ಶಾಸಕರ ಗ್ರೂಪ್ ಫೋ–ಟೋ ತೆಗೆದುಕೊಳ್ಳುವುದು ಸಂಪ್ರದಾಯವಾಗಿದೆ. ಆದರೆ ಸರ್ಕಾರಕ್ಕೆ ಎರಡೂವರೆ ವರ್ಷ ಪೂರ್ಣಗೊಂಡಿದ್ದಷ್ಟೇ. ಈ ನಡುವೆ ಗ್ರೂಪ್ ಫೋಟೋ ತೆಗೆಸಿಕೊಂಡಿರುವುದು ಚರ್ಚೆಗೆ ಎಡೆಮಾಡಿಕೊಟ್ಟಿದೆ.

# ಭರ್ತಿ ಚೊಂಬಿನ ಬಜೆಟ್

### ಖಾಲಿ ಚೊಂಬು ಎಂದ ಬಿಜೆಪಿಗೆ ಮುಖ್ಯಮಂತ್ರಿ ಟಾಂಗ್ | ಬಜೆಟ್ ಅಂದಾಜು ಕುರಿತ ಚರ್ಚೆ ಸ್ವಾರಸ್ಯ

• ಮಲ್ಲಮ್ಮ ನುಡಿ ವಾರ್ತೆ ಬೆಂಗಳೂರು

ವಿಧಾನಸಭೆಯಲ್ಲಿ 2026–27ನೇ ಸಾಲಿನ ಆಯವ್ಯಯ ಅಂದಾಜುಗಳ ಮೇಲೆ ಚರ್ಚೆ ನಡಯಿತು. ಈ ವೇಳೆ, ಕಾಗ್ರೆಸ್–ಬಿಜೆಪಿ ನಡುವೆ ಸ್ವಾರಸ್ಯಕರ ಚಕಮಕಿಗೂ ಸದನ ಸಾಕ್ಷಿಯಾಗಿತ್ತು. ಬಜೆಟ್ ಮಂಡನೆ ವೇಳೆ ಪ್ರತಿಪಕ್ಷಗಳು ಚೊಂಬು ತೋರಿಸಿ ಟೀಕಿಸಿದ್ದವು ಇದಕ್ಕೆ ಪ್ರತಿಕ್ರಿಯಿಸಿದ ಮುಖ್ಯಮಂತ್ರಿ ಸಿದ್ದರಾಮಯ್ಯ, ರಾಜ್ಯ ಮುಂಗಡಪತ್ರವು ತುಂಬಿದ ಕೊಡವೇ ಹೊರತು ಖಾಲಿ ಚೊಂಬು ಆಗಲು ಸಾಧ್ಯವಿಲ್ಲ ಎಂದು ಸಮರ್ಥಿಸಿಕೊಂಡಿದ್ದಾರೆ.

**ಭರ್ತಿ ಚೊಂಬು:** ವಿರೋಧ ಪಕ್ಷದವರು ಬಜೆಟ್‌ನ್ನು ಟೀಕಿಸುವಾಗ ಖಾಲಿ ಚೊಂಬು ಎಂದು ಹೇಳಿದ್ದಾರೆ.

**ಪ್ರತಿ ಪಕ್ಷ ಟೀಕೆ:** ಖಾಲಿ ಚೊಂಬಲ್ಲ. ಭರ್ತಿ ಚೊಂಬು ಎಂದು ಮುಖ್ಯಮಂತ್ರಿ ಪುನರುಚ್ಚರಿಸಿದ್ದಾರೆ. ಆಗ ಆಡಳಿತ ಪಕ್ಷದ ಶಾಸಕರು ಮೇಜು ಕುಟ್ಟಿ ಸ್ವಾಗತಿಸಿದ್ದು, ಕೇಂದ್ರದ ಬಜೆಟ್ ಬಗ್ಗೆ ಮಾತನಾಡುವಾಗ ನಾನು ಕರ್ನಾಟಕಕ್ಕೆ ಖಾಲಿ ಚೊಂಬು ಕೊಟ್ಟಿದ್ದಾರೆ ಎಂದು ಟೀಕಿಸಿದ್ದೆ. ಅದಕ್ಕೆ ಪ್ರತಿಯಾಗಿ ಬಿಜೆಪಿಯವರು ರಾಜ್ಯದ ಬಜೆಟ್ ಬಗ್ಗೆ ಖಾಲಿ ಚೆಂಬು ಎಂದಿದ್ದಾರೆಂದು ದೂರಿದ್ದಾರೆ.



**ಮಾವು ಬೇವಿನ ಸ್ವಾರಸ್ಯ..!**

ಪ್ರತಿ ಪಕ್ಷದವರು ಬಜೆಟ್ ಅನ್ನು ಟೀಕೆ ಮಾಡಿದ ಮಾತ್ರಕ್ಕೆ ಮಾವು ಬೇವಿನ ಹಣ್ಣಾಲ್ಲ. ಬೇವು ಮಾವಿನ ಹಣ್ಣಾಗಲು ಸಾಧ್ಯವಿಲ್ಲ. ಟೀಕಿಸಿದ ಮಾತ್ರಕ್ಕೆ ಬಜೆಟ್ ಗಾಂಭೀರ್ಯ ಹಾಳಾಗದು. ಬುದ್ಧಿವಂತ ಜನ ಮಾವನ್ನು ಮಾವಿನ ಹಣ್ಣೆಂದೇ ಭಾವಿಸುತ್ತಾರೆ. ಆರ್‌ಅಶೋಕ್ ಮಾತನಾಡಿ, ಮಾವಿನ ಹಣ್ಣಿನಲ್ಲಿ ಹುಳಿ ಬಂದಿದೆ ಎಂದಾಗ, ಇರಲಿ, ಸಾಲ ಹೇಳಿದ್ದೀರಾ? ಎಂದು ಪ್ರಶ್ನಿಸಿದ್ದು ಚರ್ಚೆಗೆ ಗ್ರಾಸವಾಗಿತ್ತು.

### ಕೇಂದ್ರಕ್ಕಿಂತ ನಾವ್ ಮುಂದೆ

2026–27ನೇ ಸಾಲಿನ ಮುಂಗಡಪತ್ರವು 4,48,04 ಕೋಟಿ ರೂ. ಗಾತ್ರದ ಬಜೆಟ್ ಆಗಿದೆ. 26ನೇ ಸಾಲಿನಲ್ಲಿ 4,09,549 ಕೋಟಿ ಆಗಿತ್ತು. 38,455 ಕೋಟಿ ಬಜೆಟ್ ಗಾತ್ರದಲ್ಲಿ ಹೆಚ್ಚಳ. ಶೇ.9.4 ಬೆಳವಣಿಗೆಯಾಗಿದೆ. ಆದರೆ ಕೇಂದ್ರ ಸರ್ಕಾರದ ಗಾತ್ರ ಶೇ.5.6ರಷ್ಟಿದೆ. 2025–26ನೇ ಸಾಲಿನಲ್ಲಿ ಕೇಂದ್ರದ ಬಜೆಟ್ 50.65 ಲಕ್ಷ ಕೋಟಿ ರೂ. ಆಗಿತ್ತು. ಪ್ರಸಕ್ತ ಸಾಲಿನಲ್ಲಿ 53.47 ಲಕ್ಷ ಕೋಟಿ ರೂ.ನಷ್ಟಾಗಿದೆ ಎಂದು ಅಂಕಿ ಅಂಶಗಳ ಸಹಿತ ಸಿಎಂ ವಿವರಿಸಿದ್ದಾರೆ.

### ಹೈ ಹೇಳುವವರೆಗೆ ನಾನೇ ಸಿಎಂ

ರಾಜ್ಯದ ಎಲ್ಲಾ 224 ಮಂದಿ ಶಾಸಕರು ಮುಖ್ಯಮಂತ್ರಿಯಾಗಲು ಅರ್ಹರಿದ್ದಾರೆ ಎನ್ನುವ ಮೂಲಕ ಸಿಎಂ ಅವರು, ಡಿಸಿಎಂ ಅವರು ಮುಖ್ಯಮಂತ್ರಿಯಾಗಲಿದ್ದಾರೆ ಎಂಬ ವಿಷಯದಲ್ಲಿ ಜಾರಿಕೊಂಡಿದ್ದು ವಿಶೇಷ. ಚರ್ಚೆ ವೇಳೆ ಸಿಎಂ ಅವರನ್ನು ಬಿಜೆಪಿಯ ಸುನೀಲ್‌ಕುಮಾರ್, ಡಿ.ಕೆ.ಶಿ ಅವರು ಸಿಎಂ ಆದರೂ ಖುಷಿ ಎನ್ನಲಿಲ್ಲ ಎಂದು ಛೇಡಿಸಿದ್ದಕ್ಕೆ ಹೈಕಮಾಂಡ್ ಹೇಳುವವರೆಗೂ ನಾನೇ ಸಿಎಂ ಸಿದ್ದರಾಮಯ್ಯ ಎಂದು ಪುನರುಚ್ಚರಿಸಿದ್ದಾರೆ.

182 ಪುಟಗಳ ಮುಂಗಡಪತ್ರಕ್ಕೆ ಸಮಾನವಾಗಿ ಪ್ರತಿಪಕ್ಷ ನಾಯಕರು 3 ಗಂಟೆ 6 ನಿಮಿಷ ಬಜೆಟ್ ಮೇಲೆ ಮಾತನಾಡಿದ್ದಾರೆ. ಬಜೆಟ್ ಬಗ್ಗೆ ಆಳವಾದ ಅಧ್ಯಯನ ಮಾಡಿಲ್ಲ. ಒಂದು ವೇಳೆ ಮಾಡಿದ್ದರೆ ಬಜೆಟ್‌ನ ತಿರುಳು ಗೊತ್ತಾಗುತ್ತದೆ. ರಾಜ್ಯ ಮತ್ತು ದೇಶದ ರಾಜಕೀ ಯವು ಆರ್ಥಿಕತೆ ಇಲ್ಲದೇ ಇಲ್ಲ. ಬಜೆಟ್ ಮೇಲೆ ಮಾತನಾಡಿರುವವರು ಉತ್ತಮ ಸಂಸದೀಯ ಪಟು ಆಗುತ್ತಾರೆ. –ಸಿದ್ದರಾಮಯ್ಯ, ಮುಖ್ಯಮಂತ್ರಿ

## ಚಾತುರ್ವರ್ಣ, ದಲಿತರಿಗೆ ನಿಕೃಷ್ಟ ಸ್ಥಾನ

• ಮಲ್ಲಮ್ಮ ನುಡಿ ವಾರ್ತೆ ಬೆಂಗಳೂರು

ಮನುವಿನ ಚಾತುರ್ವರ್ಣ ವ್ಯವಸ್ಥೆಯಲ್ಲಿ ದಲಿತರೆಲ್ಲರಿಗೂ ಒಂದೇ ಸ್ಥಾನ ನೀಡಲಾಗಿತ್ತು. ಅದು ನಿಕೃಷ್ಟ ಎಂದು ಸಚಿವ ಪ್ರಿಯಾಂಕ್ ಖರ್ಗೆ ಹೇಳಿದ್ದಾರೆ.



ಈ ಸಂಬಂಧ ತಮ್ಮ ಎಕ್ಸ್ ಖಾತೆಯಲ್ಲಿ ಬರೆದುಕೊಂಡಿರುವ ಪ್ರಿಯಾಂಕ್ ಖರ್ಗೆ , ಶೋಷಕ ಸಮುದಾಯದಿಂದ ಸಾವಿರಾರು ವರ್ಷಗಳಿಂದ ಅನ್ಯಾಯ, ತಿರಸ್ಕಾರಗಳನ್ನು ಅನುಭವಿಸಿರುವ ದಲಿತ ಸಮುದಾಯವು ಬಾಬಾ ಸಾಹೇಬ ಡಾ. ಬಿ ಆರ್ ಅಂಬೇಡ್ಕರ್ ವಿರಚಿತ ಭಾರತದಲ್ಲಿ ಭರವಸೆಯ ಬದುಕಿನ ಕನಸು ಕಾಣುತ್ತಿರುವಾಗ, ಈಗ ಮತ್ತೊಮ್ಮೆ ಅದೇ ಶೋಷಕರು ಹೊಸ ವೇಷದೊಂದಿಗೆ ದಲಿತರ ಒಗ್ಗಟ್ಟನ್ನು ಒಡೆಯುವ ಹುನ್ನಾರಕ್ಕೆ ಕೈ ಹಾಕಿ ಕೇಕೆಯಲ್ಲಿ ಬೀಗುತ್ತಿದ್ದಾರೆ ಎಂದಿದ್ದಾರೆ. ಚಾತುರ್ವರ್ಣವನ್ನೇ ತನ್ನ ಮುಖ್ಯ ಅಜೆಂಡಾ ಮಾಡಿಕೊಂಡು ಸ್ಥಾಪನೆಯಾದ RSSಗೆ ದಲಿತರ ಬಗ್ಗೆ ಈಗ ಏಕಾಏಕಿ ಇಷ್ಟೊಂದು ಆಸಕ್ತಿ ಹುಟ್ಟಿದ್ದೇಕೆ? ಎಂದು ತಿಳಿಸಿದ್ದಾರೆ.

## ಆಗಿರುವ ತಪ್ಪನ್ನು ಸಚಿವರು ಸರಿಪಡಿಸಿ

• ಮಲ್ಲಮ್ಮ ನುಡಿ ವಾರ್ತೆ ಬೆಂಗಳೂರು

ಶೈಕ್ಷಣಿಕ ಕ್ಷೇತ್ರದಲ್ಲೂ ರಾಜಕೀಯ ಹಸ್ತಕ್ಷೇಪ ಮಾಡುವುದು ರಾಜ್ಯ ಸರಕಾರಕ್ಕೆ ಶೋಭೆ ತರುವುದಿಲ್ಲ ಎಂದು ಬಿಜೆಪಿ ರಾಜ್ಯಾಧ್ಯಕ್ಷ ಮತ್ತು ಶಾಸಕ ಬಿ.ವೈ.ವಿಜಯೇಂದ್ರ ಆಕ್ಷೇಪಿಸಿದ್ದಾರೆ.



ಮಾಧ್ಯಮ ಪ್ರತಿನಿಧಿಗಳ ಜೊತೆ ಇಂದು ಮಾತನಾಡಿ, ರಾಜ್ಯ ಮುಕ್ತ ವಿವಿಯಲ್ಲಿ ಶ್ಯಾಮಪ್ರಸಾದ ಮುಖರ್ಜಿ ಫೌಂಡೇಶನ್ ವತಿಯಿಂದ 'ಏಕಾತ್ಮ ಮಾನವ ದರ್ಶನ' ಎಂಬ ಶೈಕ್ಷಣಿಕ ಅಂತಾರಾಷ್ಟ್ರೀಯ ಅಧಿವೇಶನ ಆಯೋಜಿಸಲಾಗಿತ್ತು. ಕೇಂದ್ರದ ಸಚಿವ ಧರ್ಮೇಂದ್ರ ಪ್ರಧಾನ್ ಅವರೂ ಆ ಕಾರ್ಯಕ್ರಮದಲ್ಲಿ ಭಾಗವಹಿಸಬೇಕಾಗಿತ್ತು. ಆದರೆ, ರಾಜ್ಯ ಸರಕಾರವು ಏಕಾಏಕಿ ಈ ಕಾರ್ಯಕ್ರಮವನ್ನು ರದ್ದು ಮಾಡಲು ಆದೇಶಿಸಿದೆ. ಉಪ ಕುಲಪತಿಗಳಿಗೆ ನೋಟಿಸನ್ನೂ ನೀಡಿದೆ ಎಂದು ಟೀಕಿಸಿದ್ದಾರೆ.

ಇದು ದ್ವೇಷದ ರಾಜಕಾರಣ. ವಿಶ್ವವಿದ್ಯಾನಿಲಯದಲ್ಲಿ ನಡೆಯುವ ಕಾರ್ಯಕ್ರಮಕ್ಕೂ ಇವರು ಕಲ್ಲು ಹಾಕುವ ಕೆಲಸ ಮಾಡುತ್ತಿದ್ದಾರೆ ಎಂದು ಟೀಕಿಸಿದ್ದಾರೆ.

## ವಾಲ್ ಬದಲಿಸುವ ಕಾರ್ಯ: ಹುಮನಾಬಾದ್‌ಗೆ ಒಂದು ವಾರ ಕಾರಂಜಾ ನೀರಿಲ್ಲ..!

• ಮಲ್ಲಮ್ಮ ನುಡಿ ವಾರ್ತೆ ಹುಮನಾಬಾದ್

ಕಾರಂಜಾ ಜಲಾಶಯದಿಂದ ಹುಮನಾಬಾದ್ ನಗರಕ್ಕೆ ನೀರು ಸರಬರಾಜು ಆಗುತ್ತಿತ್ತು.



ಅಮೃತ 2.0 ಯೋಜನೆಯಡಿ ಕಾರಂಜಾ ಜಾಕ್‌ವಾಲ್ ನಿಂದ ಕಬಿರಾಬಾದ ನೀರು ಶುದ್ಧೀಕರಣ ಘಟಕದವರೆಗೆ ಎಂ.ಎಸ್. ಕೊಳವೆ ಮಾರ್ಗದಲ್ಲಿನ ಏರ್ ವಾಲ್‌ಗಳನ್ನು ಬದಲಿಸುವ ಕಾರ್ಯವನ್ನು ಕೈಗೆತ್ತಿಕೊಳ್ಳಲಾಗಿದೆ. ಹುಮನಾಬಾದ್. ನಗರದ ನಿವಾಸಿಗಳಿಗೆ ಶುದ್ಧ ಕುಡಿಯುವ ನೀರು ಸರಬರಾಜು ಮಾಡಬೇಕಾಗಿರುವುದರಿಂದ ಈ ಕಾಮಗಾರಿಯು ಮಾ, 25 ಆರಂಭಿಸಿ ಮಾ.31 ಮುಕ್ತಾಯವಾಗಲಿದೆ. ಈ ಹಿನ್ನೆಲೆಯಲ್ಲಿ ನಗರಕ್ಕೆ ನೀರು ಸರಬರಾಜು ಮಾಡಲು ಆಗುವುದಿಲ್ಲ ಎಂದು ಹುಮನಾಬಾದ್ ಪುರಸಭೆಯ ಮುಖ್ಯಾಧಿಕಾರಿ ವನಿತಾಬಾಯಿ ಅವರು ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಿದ್ದಾರೆ. ಸಾರ್ವಜನಿಕರು ಒಂದು ವಾರ ಪುರಸಭೆಯ ಜೊತೆಗೆ ಸಹಕರಿಸಬೇಕಾಗಿ ಮುಖ್ಯಾಧಿಕಾರಿಗಳು ಮನವಿ ಮಾಡಿದ್ದಾರೆ.


## ಶ್ರೀ ಅಭಿನವ ಗವಿಸಿದ್ದೇಶ್ವರ ವಿವಿಧೋದ್ದೇಶ ಸೌಹಾರ್ದಿತ ಸಹಕಾರಿ ನಿ. ಗಂಗಾವತಿ

**ಆಕರ್ಷಕ ಠೇವು ಬಡ್ಡಿದರ**

10%24 ತಿಂಗಳಿಗೆ–
10.5% ಹಿರಿಯ ನಾಗರಿಕರಿಗೆ.
ಮುದ್ದತ್ತು /ಸ್ಥಿರ ಠೇವಣಿ (FD)
1 ವರ್ಷಕ್ಕೆ 8.5%
555 ದಿನಗಳಿಗೆ 9%
2 ವರ್ಷಕ್ಕೆ 10%
ಬಡ್ಡಿಯ ಮೇಲೆ TDS ಕಟ್ ಇರುವುದಿಲ್ಲ.ಆವರ್ತ ಠೇವಣಿ (RD)
1 ವರ್ಷಕ್ಕೆ 9%.2ವರ್ಷ ಮೇಲ್ಪಟ್ಟು 10%.

**ಇತರೆ ಸೇವೆಗಳು**

- ಉಳಿತಾಯ ಖಾತೆ ಸೌಲಭ್ಯ
- ಚಾಲ್ತಿ ಖಾತೆ ಸೌಲಭ್ಯ
- ಪಿಗ್ಮಿ ಸೇವೆಗಳು
- NEFT/RTGS ಸೇವೆಗಳು
- QR ಕೋಡ್ ಸೌಲಭ್ಯ
- ಬಿಜಿನೆಸ್ ಸಾಲ




- ಗೃಹ ಸಾಲ
- ಅಡಮಾನ ಸಾಲ
- ಮೆಂಬರ್ ಸಾಲ
- ಮುದ್ದತ್ತು ಠೇವಣಿ ಮೇಲೆ ಸಾಲ ವಾಹನ ಸಾಲ
- ವಿವಿಧ ಸಾಲ ಸೌಲಭ್ಯಗಳು

**ವಿಶೇಷ ಸೇವೆಗಳು**

- ಇ – ಸ್ಟ್ಯಾಂಪ್ ಸೇವೆ




- SBI ಸರ್ವಿಸ್ ಪಾಯಿಂಟ್ (ಎಲ್ಲಾ ಬ್ಯಾಂಕುಗಳ ಸೇವೆಗಳು ದೊರೆಯುತ್ತವೆ).
- ಹೂಡಿಕೆ ಹಾಗೂ ಷೇರು ಮಾರುಕಟ್ಟೆ ಸೇವೆಗಳು( ನುವಾಮ ಅಂಡ್ ಟ್ರಾಫಿಕ್ ಮಾರ್ಕೆಟ್ ಅಧಿಕೃತ ಡೀಲರ್ ).
- ಆರೋಗ್ಯವನ್ನು ವೃದ್ಧಿಸುವ ಸ್ವದೇಶಿ ಉತ್ಪನ್ನಗಳ ಸೇವೆಗಳು ಹಾಗೂ ಸೌಲಭ್ಯಗಳು ( ಕೇರಾಮೃತ್ ).
- ಈಜಿ ಮನಿ ಸೇವೆಗಳು.

**ಶಾಖೆ ವಿಳಾಸ**

ಎಸ್ ಬಿ ಎಸ್ ಕಾಂಪ್ಲೆಕ್ಸ್ ಮಲ್ಲಿಕಾರ್ಜುನ ಮಠದ ಹತ್ತಿರ ಗಂಗಾವತಿ–583227.

**ರಾಜ್ಯದಲ್ಲಿ ಖರ್ಚಿ ರಾಜಕೀಯ ಇನ್ನೂ ಜೋರಾಗ ತೊಡಗಿದೆ. ಅವರಿಗೆ ಅಭಿವೃದ್ಧಿ ಬೇಕಿಲ್ಲ: ಎಚ್‌ಡಿ ಕುಮಾರಸ್ವಾಮಿ**

# ಪೆಟ್ರೋಲ್, ಡಿಸೇಲ್: ಸಾರ್ವಜನಿಕರು ಆತಂಕಪಡುವ ಅಗತ್ಯವಿಲ್ಲ: ಜಿಲ್ಲಾಧಿಕಾರಿ

• ಮಲ್ಲಮ್ಮ ನುಡಿ ವಾರ್ತೆ ಬೀದರ



ಜಿಲ್ಲೆಯಲ್ಲಿ ಪೆಟ್ರೋಲ್, ಡಿಸೇಲ್ ಮತ್ತು ಎಲ್.ಪಿ.ಜಿ ಸಿಲಿಂಡರ್‌ಗಳ ಅಭಾವಉಂಟಾಗಿದೆಎಂದುಸಾಮಾಜಿಕ ಜಾಲತಾಣಗಳಲ್ಲಿಹರಿದಾಡುತ್ತಿರುವ ವದಂತಿಗಳಿಗೆ ಸಾರ್ವಜನಿಕರು ಕಿವಿಗೊಡಬಾರದು, ಜಿಲ್ಲೆಯಲ್ಲಿ ಪೆಟ್ರೋಲ್ ಮತ್ತು ಡಿಸೇಲ್‌ಗಳ ಯಾವುದೇ ಕೊರತೆಯಿಲ್ಲದ್ದರಿಂದ ಸಾರ್ವಜನಿಕರು ಆತಂಕಪಡುವ ಅಗತ್ಯವಿಲ್ಲ ಎಂದು ಜಿಲ್ಲಾಧಿಕಾರಿ ಶಿಲ್ಪಾ ಶರ್ಮಾ ಅವರು ತಿಳಿಸಿದ್ದಾರೆ.

ಜಿಲ್ಲೆಯಾದ್ಯಂತ ಎಲ್ಲಾ ತೈಲ ಕಂಪನಿ ಬಳಿ ಮತ್ತು ಪೆಟ್ರೋಲ್ ಬಂಕ್‌ಗಳಲ್ಲಿ ಸಾಕಷ್ಟು ಪ್ರಮಾಣದ ಇಂಧನ ದಾಸ್ತಾನು ಲಭ್ಯವಿದೆ.ಎಲ್ಲಾ ಪೆಟ್ರೋಲ್ ಬಂಕ್‌ಗಳಿಗೆ ನಿರಂತರವಾಗಿ ಇಂಧನ ಪೂರೈಕೆ ಮಾಡಲಾಗುತ್ತಿದೆ. ಪೂರೈಕೆಯಲ್ಲಿ ಯಾವುದೇ ರೀತಿಯ ವ್ಯತ್ಯಯ ಉಂಟಾಗಿಲ್ಲ.

ಜನರು ಗಾಬರಿಯಿಂದ ಅಗತ್ಯಕ್ಕಿಂತ ಹೆಚ್ಚಿನ ಇಂಧನವನ್ನು ಸಂಗ್ರಹಿಸಿಟ್ಟುಕೊಳ್ಳಬಾರದು ಎಂದು ಸೂಚಿಸಿದೆ. ಇಂಧನ ಅಭಾವದ ಬಗ್ಗೆ ಸುಳ್ಳು ಸುದ್ದಿ ಅಥವಾ ವದಂತಿ ಹಬ್ಬಿಸುವವರ ವಿರುದ್ಧ ಕಾನೂನು ರೀತ್ಯಾ ಕಠಿಣ ಕ್ರಮ ಜರುಗಿಸಲಾಗುವುದು. ಗೃಹ ಬಳಕೆಯ ಸಿಲಿಂಡರ್‌ಗಳಿಗೆ ಸಂಬಂಧಿಸಿದಂತೆ ಜಿಲ್ಲೆಯಲ್ಲಿ ಗೃಹಬಳಕೆ ಸಿಲಿಂಡರ್‌ಗಳ ಸರಬರಾಜು ಸಮರ್ಪಕವಾಗಿ ನಡೆಯುತ್ತಿದೆ. ಗೃಹ ಬಳಕೆ ಸಿಲಿಂಡರ್‌ನ್ನು 25 ದಿನಗಳ ಬಳಿಕವೇ ಬುಕ್ ಮಾಡಲು ಅವಕಾಶ ಕಲ್ಪಿಸಲಾಗಿರುತ್ತದೆ. ಸಾರ್ವಜನಿಕರುಆತಂಕಗೊಳಗಾಗಿ ಗ್ಯಾಸ್ ಏಜೆನ್ಸಿಗಳ ಮುಂದೆ ಜನಸಂದಣಿ ಆಗುತ್ತಿರುವುದು ಕಂಡುಬಂದಿರುತ್ತದೆ.

ಪ್ರಯುಕ್ತ ಜಿಲ್ಲೆಯಲ್ಲಿ ಎಲ್‌ಪಿಜಿ ಸಿಲಿಂಡರ್‌ಗಳ ಕೊರತೆ ಇರುವುದಿಲ್ಲ ಹಾಗೂ ಎಚ್‌ಪಿಸಿ, ಐಓಸಿ ಮತ್ತು ಬಿಪಿಸಿ ತೈಲ ಕಂಪನಿಗಳ ಜೊತೆ ಜಿಲ್ಲಾಡಳಿತ ಸಂಪರ್ಕದಲ್ಲಿದ್ದು,ಯಾವುದೇ ತೊಂದರೆ ಉಂಟಾಗದಂತೆ ಬೇಡಿಕೆಗೆ ಅನುಗುಣವಾಗಿ ಸಿಲಿಂಡರ್ ಸರಬರಾಜಿಗೆ ಕ್ರಮಕೈಗೊಳ್ಳಲಾಗುತ್ತಿದೆ.

ಸಾರ್ವಜನಿಕರು ಭಯಪಡುವ ಅಗತ್ಯವಿಲ್ಲ ಮತ್ತು ಹೆಚ್ಚುವರಿಯಾಗಿ ದಾಸ್ತಾನು ಮಾಡಿಟ್ಟುಕೊಳ್ಳಬಾರದು. ಸಾರ್ವಜನಿಕರು ಯಾವುದೇ ವದಂತಿಗಳಿಗೆ ಕಿವಿಗೊಡದೆ ಜಿಲ್ಲಾಡಳಿತದೊಂದಿಗೆ ಸಹಕರಿಸುವಂತೆ ಅವರು ತಿಳಿಸಿದ್ದಾರೆ

# ಭ್ರಷ್ಟಾಚಾರ ಪುರಸಭೆ ಮುಖ್ಯಾಧಿಕಾರಿ ವಿರುದ್ಧ ಕ್ರಮ ಜರುಗಿಸಿ: ಕನಸೆ

• ಮಲ್ಲಮ್ಮ ನುಡಿ ವಾರ್ತೆ ಬೀದರ್




2024ರಿಂದ ಅಕ್ರಮವಾಗಿ ಭಾಲ್ಕಿ ಪುರಸಭೆ ಮುಖ್ಯಾಧಿಕಾರಿ ಹುದ್ದೆಯಲ್ಲಿರುವ ಸಂಗಮೇಶ ಕಾರಬಾರಿ ಅವರು ವ್ಯಾಪಕ ಭ್ರಷ್ಟಾಚಾರ ಎಸಗಿದ್ದು, ಅವರ ವಿರೂದ್ಧ ಕ್ರಮ ಜರುಗಿಸಬೇಕೆಂದು ಪುರಸಭೆ ಸದಸ್ಯ ಪಾಂಡುರಂಗ ಕನಸೆ ಆಗ್ರಹಿಸಿದರು.

ಬುಧವಾರ ನಗರದ ಜಿಲ್ಲಾ ಪತ್ರಿಕಾ ಭವನದಲ್ಲಿ ಪತ್ರಿಕಾಗೋಷ್ಠಿಉದ್ದೇಶಿಸಿ ಮಾತನಾಡಿರುವ ಅವರು, ಕಳೆದ ಎರಡು ವರ್ಷಗಳಿಂದ ಪಟ್ಟಣದಲ್ಲಿ ಅಕ್ರಮವಾಗಿ ಲೆಔಟ್‌ಗಳ ಕಾಮಗಾರಿ ನಡೆಯುತ್ತಿದೆ. ಅದರಲ್ಲೂ ಸಹ ವ್ಯಾಪಕ ಭ್ರಷ್ಟಾಚಾರ ಜೋರಾಗಿ ನಡೆಯುತ್ತಿದೆ.

ಸಂಗಮೇಶ ಕಾರಬಾರಿ ನಿಜಕ್ಕೂ ಮುಖ್ಯಾಧಿಕಾರಿ ಕೆಟಗರಿಯಲ್ಲಿ ಬರುವುದಿಲ್ಲ. ಅವರೊಬ್ಬ ಪರಿಸರ ವಿಭಾಗದ ಇಂಜಿನಿಯರ್ ಆಗಿದ್ದಾರೆ. ಆಗಿನ ಜಿಲ್ಲಾಧಿಕಾರಿಗಳು ಇವರನ್ನು ಮುಖ್ಯಾಧಿಕಾರಿಗಳನ್ನಾಗಿ ಮಾಡಿರುವುದು ಖೇದಕರ ಸಂಗತಿ ಎಂದರು.

ನಮ್ಮ ಓಣಿಗೆ ಸುಮಾರು 2 ಲಕ್ಷ ವೆಚ್ಚದಲ್ಲಿ 2,000 ಕಸದ ಬಕೆಟ್‌ಗಳು ಕೊಡಬಹುದಿತ್ತು. ಅವು ಕೊಡಲಿಲ್ಲ. ಅದರ ಹಣದಲ್ಲೂ ಅವ್ಯವಹಾರ ನಡೆದಿದೆ. ನಮ್ಮ ಏರಿಯಾದಲ್ಲಿ ದೇವಸ್ಥಾನವೊಂದಕ್ಕೆ 3 ಲಕ್ಷ 39 ಸಾವಿರ ಹಣ ಕೊಡಬಹುದಿತ್ತು. ಪುರಸಭೆಯ ಇಂಜಿನಿಯರ್ ದುಹಾದೇವ ಕೂಡ ಬಂದು ಪೂಜೆ ನೆರವೇರಿಸಿದ್ದರು. ಆದರೆ ಅದಕ್ಕೂ ಹಣ ನೀಡಲಿಲ್ಲ. ಒಟ್ಟಾರೆ ಭಾಲ್ಕಿ ಪುರಸಭೆ ವ್ಯಾಪ್ತಿಯಲ್ಲಿ ಹಲವು ಕಾಮಗಾರಿಗಳಲ್ಲಿ ವ್ಯಾಪಕ ಭ್ರಷ್ಟಾಚಾರ ನಡೆದಿದ್ದು, ಕೂಡಲೇ ಮುಖ್ಯಾಧಿಕಾರಿ ಕಾರಬಾರಿ ಅವರನ್ನು ಸೇವೆಯಿಂದ ಅಮಾನತುಗೊಳಿಸಬೇಕು ಹಾಗೂ ಕಳೆದ ಎರಡು ವರ್ಷಗಳಿಂದ ಪುರಸಭೆ ವ್ಯಾಪ್ತಿಯಲ್ಲಿ ನಡೆದ ಹಗರಣಗಳ ಸಮಗ್ರ ತನಿಖೆ ನಡೆಸಿ ತಪ್ಪಿತಸ್ಥರ ವಿರೂದ್ಧ ಕ್ರಮ ಜರುಗಿಸಬೇಕೆಂದು ಕನಸೆ ಒತ್ತಾಯಿಸಿದರು.

ಯುವ ಕ್ರಾಂತಿ ಸಂಘಟನೆಯ ಅಧ್ಯಕ್ಷ ಸಂಗಮೇಶ ಭೂರೆ, ಭಾಲ್ಕಿ ಮುಖಂಡರಾದ ವೈಜಿನಾಥ ಚಿಂಚೋಳೆ, ಗಣಪತರಾವ ಕಳಸದಾಳ ಹಾಗೂ ಇತರರು ಪತ್ರಿಕಾಗೋಷ್ಠಿಯಲ್ಲಿದ್ದರು.

# ಸಂಪಾದಕೀಯ

ಮಾಣಿಕರೆಡ್ಡಿ ಕೌಡಾಳೆ
ಪ್ರಧಾನ ಸಂಪಾದಕರು
ಮೋ: 9845028349

## ಶೋಕಿಗೆ ಇಳಿದ ಅಧಿಕಾರಿಗಳು ಜನರ ಸಹಕಾರಕ್ಕೆ ಬರದ ಆಡಳಿತ ವ್ಯವಸ್ಥೆ

ಸರ್ಕಾರ ಜನರ ಸೇವೆಗಾಗಿ ಅಧಿಕಾರಿಗಳನ್ನು ನೇಮಿಸುತ್ತದೆ. ಜನರ ಸಮಸ್ಯೆಗಳಿಗೆ ಸ್ಪಂದಿಸಿ, ಆಡಳಿತವನ್ನು ಸರಿಯಾದ ದಿಕ್ಕಿನಲ್ಲಿ ನಡೆಸುವುದು ಅವರ ಪ್ರಮುಖ ಕರ್ತವ್ಯ. ಆದ–ರೆ ಇತ್ತೀಚಿನ ದಿನಗಳಲ್ಲಿ ಕೆಲವು ಅಧಿಕಾರಿಗಳು ತಮ್ಮ ಕರ್ತವ್ಯಗಳನ್ನು ಮರೆತು ಶೋಕಿನ ಜೀವನಕ್ಕೆ ಇಳಿದಿರುವುದು ವಿಷಾದಕರ ಸಂಗತಿಯಾಗಿದೆ.

ಸರ್ಕಾರದಿಂದ ಬಂಗಲೆ, ಕಾರು, ಉತ್ತಮ ಸಂಬಳ ಸೇರಿದಂತೆ ಹಲವಾರು ಸೌಲಭ್ಯಗಳನ್ನು ಪಡೆಯುತ್ತಿರುವ ಕೆಲ ಅಧಿಕಾರಿಗಳು ಸಾರ್ವಜನಿಕರ ಸಮಸ್ಯೆಗಳ ಬಗ್ಗೆ ತಲೆಕೆಡಿಸಿಕೊಳ್ಳದೇ ನಿರ್ಲಕ್ಷ್ಯ ವಹಿಸುತ್ತಿದ್ದಾರೆ. ಸಾಮಾನ್ಯ ಜನರು ತಮ್ಮ ಸಮಸ್ಯೆಗಳನ್ನು ಹೇಳಿಕೊಳ್ಳಲು ಕಚೇರಿಗಳ ಬಾಗಿಲು ತಟ್ಟಿದರೂ ಅಧಿಕಾರಿಗಳನ್ನು ಭೇಟಿಯಾಗಲು ಗಂಟೆಗಳ ಕಾಲ ಕಾಯಬೇಕಾಗುತ್ತಿದೆ. ಕೆಲ ಸಂದರ್ಭಗಳಲ್ಲಿ ಜನರನ್ನು ಒಂದು ಕಚೇರಿಯಿಂದ ಮತ್ತೊಂದು ಕಚೇರಿಗೆ ಅಲೆದಾಡಿಸುವ ಘಟನೆಗಳು ನಡೆಯುತ್ತಿವೆ.

ಜನರ ತೆರಿಗೆಯ ಹಣದಿಂದಲೇ ಅಧಿಕಾರಿಗಳಿಗೆ ಸಂಬಳ, ಸೌಲಭ್ಯಗಳು ದೊರೆಯುತ್ತವೆ ಎಂಬುದನ್ನು ಅವರು ಮರೆಯಬಾರದು. ಆದ್ದರಿಂದ ಸಾರ್ವಜನಿಕರಿಗೆ ಸ್ಪಂದಿಸುವುದು ಅವರ ನೈತಿಕ ಜವಾಬ್ದಾರಿಯೂ ಆಗಿದೆ. ಆದರೆ ಕೆಲವು ಅಧಿಕಾರಿಗಳ ನಿರ್ಲಕ್ಷ್ಯದಿಂದ ಜನರಲ್ಲಿ ಆಡಳಿತ ವ್ಯವಸ್ಥೆಯ ಮೇಲಿನ ವಿಶ್ವಾಸ ಕುಸಿಯುತ್ತಿರುವುದು ಆತಂಕಕಾರಿ ಸಂಗತಿಯಾಗಿದೆ.

ಆಡಳಿತ ವ್ಯವಸ್ಥೆ ಜನರ ಹಿತಕ್ಕಾಗಿ ಕೆಲಸ ಮಾಡುವಂತಾಗಬೇಕು. ಅಧಿಕಾರಿಗಳು ಕಚೇರಿಗಳಲ್ಲೇ ಕುಳಿತುಕೊಳ್ಳದೆ ಜನರ ಮಧ್ಯೆ ಹೋಗಿ ಅವರ

ಸಮಸ್ಯೆಗಳನ್ನು ತಿಳಿದುಕೊಂಡು ಪರಿಹಾರ ಕಂಡುಕೊಳ್ಳಬೇಕು. ಜನರನ್ನು ಅಲೆದಾಡಿಸುವ ಪ್ರವೃತ್ತಿ ತಕ್ಷಣ ನಿಲ್ಲಬೇಕು.

ಸರ್ಕಾರವೂ ಈ ವಿಷಯವನ್ನು ಗಂಭೀರವಾಗಿ ಪರಿಗಣಿಸಿ ಕರ್ತವ್ಯ ನಿರ್ಲಕ್ಷ್ಯ ತೋರಿಸುವ ಅಧಿಕಾರಿಗಳ ಮೇಲೆ ಕಠಿಣ ಕ್ರಮ ಕೈಗೊಳ್ಳಬೇಕು.

ಜನರ ಸೇವೆಯೇ ಸರ್ಕಾರದ ನಿಜವಾದ ಧರ್ಮ ಎಂಬುದನ್ನು ಎಲ್ಲರೂ ಮನಗಾಣುವ ಕಾಲ ಬಂದಿದೆ.

ಈ ರೀತಿಯ ಕ್ರಮಗಳು

ಕೈಗೊಳ್ಳಲಾದರೆ ಮಾತ್ರ ಜನರಲ್ಲಿ ಆಡಳಿತದ ಮೇಲಿನ ವಿಶ್ವಾಸ ಮತ್ತೆ ಬಲವಾಗಲಿದೆ.

# ಜೆಸ್ಕಾಂ ಅಧಿಕಾರಿ ಸಿಬ್ಬಂದಿ ವರ್ಗಾವಣೆಗೆ ಮನವಿ




• ಮಲ್ಲಮ್ಮ ನುಡಿ ವಾರ್ತೆ ಚಿಟಗುಪ್ಪ

ಪಟ್ಟಣದ ಜೆಸ್ಕಾಂ ಇಲಾಖೆಯಲ್ಲಿ ಸುಮಾರು ವರ್ಷಗಳಿಂದ ಕಾರ್ಯನಿರ್ವಹಿಸುತ್ತಿರುವ ಅಧಿಕಾರಿಗಳಿಗೆ ಮತ್ತು ಸಿಬ್ಬಂದಿಗಳಿಗೆ ಕೂಡಲೇ ವರ್ಗಾವಣೆ ಮಾಡಬೇಕೆಂದು ಜಿಲ್ಲಾ ಜೆಸ್ಕಾಂ ಅಭಿಯಂತರರು ಕಾರ್ಯ ಮತ್ತು ಪಾಲನೆ ಬೀದರ್ ಇವರಿಗೆ ಬರೆದ ಮನವಿ ಪತ್ರವನ್ನು

ಮಂಗಳವಾರ ಕರ್ನಾಟಕ ರಕ್ಷಣಾ ವೇದಿಕೆ ತಾಲುಕಾಧ್ಯಕ್ಷ ಕಾಳಪ್ಪ ಕಟಗಿ ನೇತೃತ್ವದಲ್ಲಿ ಮಂಗಳವಾರ ತಹಶೀಲ್ದಾರ್ ಮಂಜುನಾಥ್ ಪಂಚಾಳ ಅವರಿಗೆ ಸಲ್ಲಿಸಿದರು. ಈ ಸಂದರ್ಭದಲ್ಲಿ ಕಾಶಿನಾಥ್ ರೇಕುಳಗಿ,

ಅಶ್ವಥ್ ವಿಶ್ವಕರ್ಮ, ನಾಗರಾಜ ಹುಡಗಿ, ಅಂಬರೀಶ ಮುಖೇನೋರ್, ಶಿವಕುಮಾರ್ ದುಬಲಗುಂಡಿ ಸೇರಿದಂತೆ ಕರವೇ ಕಾರ್ಯಕರ್ತರು ಉಪಸ್ಥಿತರಿದ್ದರು.

# ಕಳ್ಳತನ ಪ್ರಕರಣ ಭೇದಿಸಿದ ಪೊಲೀಸರು 31.87 ಲಕ್ಷ ರೂ. ಮೌಲ್ಯದ ವಸ್ತುಗಳ ಜಪ್ತಿ

• ಮಲ್ಲಮ್ಮ ನುಡಿ ವಾರ್ತೆ ಕಮಲನಗರ



ಕಮಲನಗರ ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ನಡೆದಿದ್ದ ಬೃಹತ್ ಕಳ್ಳತನ ಪ್ರಕರಣವನ್ನು ಯಶಸ್ವಿಯಾಗಿ ಭೇದಿಸಿರುವ ಪೊಲೀಸರು, ಮೂವರು ಅಂತಾರಾಜ್ಯ ಕಳ್ಳರನ್ನು ಬಂಧಿಸಿ, ಸುಮಾರು 31.87 ಲಕ್ಷ ರೂಪಾಯಿ ಮೌಲ್ಯದ ಚಿನ್ನಾಭರಣ, ಬೆಳ್ಳಿ ವಸ್ತುಗಳು ಮತ್ತು ಕೃತ್ಯಕ್ಕೆ ಬಳಸಿದ್ದ ಕಾರನ್ನು ವಶಪಡಿಸಿಕೊಂಡಿದ್ದಾರೆ.

ಕಳೆದ ಮಾರ್ಚ್ 9ರ ರಾತ್ರಿ ಹಾಗೂ 10ರ ಬೆಳಗಿನ ಜಾವದ ಮಧ್ಯಂತರದಲ್ಲಿ, ಕಮಲನಗರದ ಎಪಿಎಂಸಿ ಮಾರ್ಕೆಟ್ ಹತ್ತಿರವಿರುವ ರಾಜಕುಮಾರ್ ಅಣ್ಣಾರಾವ್ ಪಾಟೀಲ್ ಎಂಬುವವರ ಮನೆಯ ಬೀಗ ಮುರಿದು ನುಗ್ಗಿದ್ದ ದುಷ್ಕರ್ಮಿಗಳು, ಮನೆಯಲ್ಲಿದ್ದ 320 ಗ್ರಾಂ ಚಿನ್ನಾಭರಣ, 690 ಗ್ರಾಂ ಬೆಳ್ಳಿ ಆಭರಣಗಳು ಮತ್ತು ನಗದು ಹಣವನ್ನು ದೋಚಿ ಪರಾರಿಯಾಗಿದ್ದರು.

ಈ ಸಂಬಂಧ ಕಮಲನಗರ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿತ್ತು. ಪ್ರಕರಣದ ತನಿಖೆಯನ್ನು ಕೈಗೊಂಡ ಕಮಲನಗರ ಪೊಲೀಸರು, ಕಮಲನಗರ ಬಸ್ ನಿಲ್ದಾಣದ ಹತ್ತಿರದ ಸಿಸಿಟಿವಿ ದೃಶ್ಯಾವಳಿಗಳನ್ನು ಪರಿಶೀಲಿಸಿ, ತಾಂತ್ರಿಕ ಸಾಕ್ಷ್ಯಗಳ ಆಧಾರದ ಮೇಲೆ ಆರೋಪಿಗಳನ್ನು ಪತ್ತೆ ಹಚ್ಚುವಲ್ಲಿ ಯಶಸ್ವಿಯಾಗಿದ್ದಾರೆ.

//ಬಾಕ್ಸ್: *ವಶಪಡಿಸಿಕೊಂಡ ಸೊತ್ತುಗಳ ವಿವರ:

ಪೊಲೀಸರು ಆರೋಪಿಗಳಿಂದ ಈ ಕೆಳಗಿನ ಮೌಲ್ಯದ ವಸ್ತುಗಳನ್ನು ಜಪ್ತಿ ಮಾಡಿದ್ದಾರೆ:

320 ಗ್ರಾಂ ಚಿನ್ನಾಭರಣ: ಅಂ–ದಾಜು 25,60,000 ರೂ.

690 ಗ್ರಾಂ ಬೆಳ್ಳಿ ಆಭರಣ ಹಾಗೂ ಇತರ ವಸ್ತುಗಳು: ಅಂದಾಜು 1,72,500 ರೂ.

ನಗದು ಹಣ: 5,000 ರೂ.

ಕೃತ್ಯಕ್ಕೆ ಬಳಸಿದ್ದ ಟಾಟಾ ವಿಸ್ತಾ ಕಾರು: ಅಂದಾಜು 4,50,000 ರೂ.

ಒಟ್ಟು ಮೌಲ್ಯ: 31,87,500 ರೂಪಾಯಿಗಳು.//

ಬಂಧಿತ ಮೂವರು ಆರೋಪಿಗಳನ್ನು ನ್ಯಾಯಾಂಗ ಬಂಧನಕ್ಕೆ ಒಪ್ಪಿಸಲಾಗಿದೆ. ಈ ಕಾರ್ಯಾಚರಣೆಯನ್ನು ಬೀದರ್ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಪ್ರದೀಪ್ ಗುಂಟಿ ಐಪಿಎಸ್ ಅವರ ಮಾರ್ಗದರ್ಶನದಲ್ಲಿ, ಹೆಚ್ಚುವರಿ ಪೊಲೀಸ್ ವರಿಷ್ಠಾಧಿಕಾರಿ ಚಂದ್ರಕಾಂತ ಪೂಜಾರಿ, ಡಿವೈಎಸ್ಪಿ ಶಿವಾನಂದ ಪವಾಡಶೆಟ್ಟಿ ಹಾಗೂ ಕಮಲನಗರ ಸಿಪಿಐ ಶ್ರೀ ಶ್ರೀಕಾಂತ ಎ. ಅಲ್ಲಾಪೂರೆ ಅವರ ನೇತೃತ್ವದ ಪೊಲೀಸ್ ಸಿಬ್ಬಂದಿಗಳ ತಂಡ ಯಶಸ್ವಿಯಾಗಿ ನಿರ್ವಹಿಸಿದೆ ಎಂದು ಪೊಲೀಸ ಮೂಲ ತಿಳಿಸಿದೆ. ಈ ಸಮರ್ಥ ಕಾರ್ಯಾಚರಣೆಗಾಗಿ ಪೊಲೀಸ್ ತಂಡವನ್ನು ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳು ಅಭಿನಂದಿಸಿದ್ದಾರೆ.

# ತಂದೆ ತಾಯಿ ಸೇವೆಯೇ ಶ್ರೇಷ್ಠ ಸೇವೆ: ಶಿವಾಚಾರ್ಯ



• ವರದಿ:ಪರಮೇಶ ರಾಂಪುರೆ ಮಲ್ಲಮ್ಮ ನುಡಿ ವಾರ್ತೆ ಕಮಲನಗರ

ಮನುಷ್ಯನ ಜೀವನದಲ್ಲಿ ಗಳಿಸುವ ಆಸ್ತಿ–ಪಾಸ್ತಿ ಶಾಶ್ವತವಲ್ಲ, ನಾವು ಮಾಡುವ ಒಳ್ಳೆಯ ಕಾರ್ಯಗಳು ಮಾತ್ರ ನಮ್ಮೊಂದಿಗೆ ಬರುತ್ತವೆ ಎಂದು ದಾರುಕಲಿಂಗ ಶಿವಾಚಾರ್ಯ ಹೆಡಗಾಪುರ ಅವರು ನುಡಿದರು.

ತಾಲೂಕಿನ ಮುಧೋಳ (ಬಿ) ಗ್ರಾಮದ ಶ್ರೀ ಮಹಾದೇವ ಮಂದಿರದಲ್ಲಿ ನಡೆಯುತ್ತಿರುವ ಮಹಾದೇವ ಜಾತ್ರಾ ಮಹೋತ್ಸವದ ಅಂಗವಾಗಿ ಆಯೋಜಿಸಲಾದ 'ಅಖಂಡ ಹರಿನಾಮ ಸಪ್ತಾಹ' ಕಾರ್ಯಕ್ರಮದಲ್ಲಿ ಅವರು ಪ್ರವಚನ ನೀಡುತ್ತಿದ್ದರು. ಸಮಾರಂಭದಲ್ಲಿ ಅವರು ನೀಡಿದರು.

ಪ್ರಮುಖ ಸಂದೇಶಗಳು:

ತಂದೆ–ತಾಯಿಯ ಸೇವೆ: ಜನ್ಮ ನೀಡಿದ ತಾಯಿಯ ಋಣವನ್ನು ತೀರಿಸಲು ಈ ಜನ್ಮದಲ್ಲಿ ಯಾರಿಂದಲೂ ಸಾಧ್ಯವಿಲ್ಲ. ಆದ್ದರಿಂದ ಪ್ರತಿಯೊಬ್ಬರೂ ತಂದೆ–ತಾಯಿಯನ್ನು ಪ್ರೀತಿಯಿಂದ ಕಾಣಬೇಕು ಮತ್ತು ಅವರ ಸೇವೆಯೇ ಪರಮಾತ್ಮನ ಸೇವೆಯೆಂದು ಭಾವಿಸಬೇಕು.

ಕರ್ಮಗಳ ಮಹತ್ವ: ಮನುಷ್ಯ ಸಾಯುವಾಗ ತನ್ನೊಂದಿಗೆ ಏನನ್ನೂ ಒಯ್ಯುವುದಿಲ್ಲ. ನಾವು ಬದುಕಿರುವಾಗ ಮಾಡುವ ಪುಣ್ಯದ ಕಾರ್ಯಗಳು ಮತ್ತು ಸತ್ಕರ್ಮಗಳು ಮಾತ್ರ ನಮ್ಮ ಕೊನೆಯ ಕ್ಷಣದವರೆಗೆ ಸಾಥ್ ನೀಡುತ್ತವೆ.

ಗುರು ಮತ್ತು ದೇವರ ಮಹಿಮೆ: ಜೀವನದ ದಾರಿಯನ್ನು ಸನ್ಮಾರ್ಗದತ್ತ ಕೊಂಡೊಯ್ಯುವ ಗುರು ಮತ್ತು ಭಕ್ತಿಯಿಂದ ಒಲಿಯುವ ದೇವರ ಮಹತ್ವವನ್ನು ಅರಿತುಕೊಂಡು, ಭಕ್ತಿಯ ಜೀವನವನ್ನು ನಡೆಸಬೇಕು ಎಂದು ಅವರು ಮಾರ್ಗದರ್ಶನ ನೀಡಿದರು.

ಈ ವಿಶೇಷ ಧಾರ್ಮಿಕ ಕಾರ್ಯಕ್ರಮದಲ್ಲಿ ಸುತ್ತಮುತ್ತಲಿನ ಗ್ರಾಮಸ್ಥರು ಹಾಗೂ ಭಕ್ತಾದಿಗಳು ಹೆಚ್ಚಿನ ಸಂಖ್ಯೆಯಲ್ಲಿ ಪಾಲ್ಗೊಂಡು ಪ್ರವಚನದ ಲಾಭ ಪಡೆದರು.

ತಾಲೂಕಿನ ಮುಧೋಳ (ಬಿ) ಗ್ರಾಮದ ಮಹಾದೇವ ಮಂದಿರದಲ್ಲಿ ನಡೆಯುತ್ತಿರುವಮಹಾದೇವ ಜಾತ್ರಾ ಮಹೋತ್ಸವ' ನಿಮಿತ್ಯ ನಡೆಯುತ್ತಿರುವ 'ಅಖಂಡ ಹರಿನಾಮ ಸಪ್ತಾಹ' ಕಾರ್ಯಕ್ರಮದಲ್ಲಿ ಪ್ರವಚನ ನೀಡಿದರು.

# ಕಾನೂನು ಅರಿವು ನೆರವು ಕಾರ್ಯಕ್ರಮ



• ಮಲ್ಲಮ್ಮ ನುಡಿ ವಾರ್ತೆ ಬೀದರ

ಹಿರಿಯ ಸಿವಿಲ್ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಪ್ರಕಾಶ ಅರ್ಜುನ ಬನಸೋಡೆ ಅವರು ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸವಲತ್ತುಗಳು ಮತ್ತು ಆಸಿಡ್ ದಾಳಿಯ ಬಲಿಪಶುಗಳ ಯೋಜನೆ 2026 (ಗಿಭಿಣಬಿಥ ಠಜಿ ಂಭಿಜ ಂಣ–ಣಚಿಛಿಞ ಖಛಿಜಟಜ 2016) ಬಗ್ಗೆ ತಿಳಿಸಿದರು.

ಅವರು ಬುಧವಾರ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಜಿಲ್ಲಾ ವಕೀಲರ ಸಂಘ ಹಾಗೂ ಜಿಲ್ಲಾ ಪಂಚಾಯತ, ಮತ್ತು ಗ್ರಾಮಿಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆ ಬೀದರ ಇವರ ಸಂಯುಕ್ತಾಶ್ರಯದಲ್ಲಿ ಮನ್ನಳ್ಳಿ ಗ್ರಾಮದಲ್ಲಿ ಹಮ್ಮಿಕೊಂಡಿದ್ದ ವಿಶ್ವ ಜಲ ದಿನ ಹಾಗೂ ಓಂಐ–ಖಂ ಏಜರಚಿಟ ಖಜಡಿತುಛಿಛ ಣಂ ಗಿಭಿಣಬಿಥ ಠಜಿ ಂಭಿಜ ಂಣಣಚಿಛಿಞ ಖಛಿಜಟಜ 2016 ಅಂಗವಾಗಿ ಕಾನೂನು ಅರಿವು ಮತ್ತು ನೆರವು ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದರು.

ಬೀದರ ತಾಲ್ಲೂಕ ಪಂಚಾಯತ ಕಾರ್ಯನಿರ್ವಾಹಕ ಅಧಿಕಾರಿ ಮಾಣಿಕರಾವ ಪಾಟೀಲ ಅವರು ಅಧ್ಯಕ್ಷತೆ ವಹಿಸಿ ಮಾತನಾಡಿದರು. ಹಾಗೂ ಜಿಲ್ಲಾ ವಕೀಲರ ಸಂಘದ ಅಧ್ಯಕ್ಷ ಸನ್ಮುಖಯ್ಯಾ ಬಿ . ಸ್ವಾಮಿ ಅವರು ಸಮಾಜದಲ್ಲಿ ಜನರು ನೀರನ ಬಳಕೆ ಮತ್ತು ಮಹತ್ವ ಕುರಿತು ಮಾತನಾಡಿದರು. ಉಪನ್ಯಾಸಕರಾಗಿ ಬೀದರ ವಕೀಲ ಜಗನಾಥ ಸೊರಳ್ಳಿ ವಿಶ್ವ ಜಲ ದಿನ ಕುರಿತು ಮಾತನಾಡಿದರು.

ಈ ಕಾರ್ಯಕ್ರಮದಲ್ಲಿ ಬೀದರ ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಉಪ ವಿಭಾಗದ ಜೆ.ಇ. ತಿಪ್ಪೇಶಕುಮಾರ, ಬೀದರ ಜಲ ಜೀವನ ಮಿಷನ ಯೋಜನೆಯ ಜಿಲ್ಲಾ ಯೋಜನಾ ವ್ಯವಸ್ಥಾಪಕ ಪೆತ್ರು.ಜೆ ಸೇರಿದಂತೆ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ ಹಾಗೂ ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆ ಮತ್ತು ಮನ್ನಳ್ಳಿ ಗ್ರಾಮ ಪಂಚಾಯತ ಸಿಬ್ಬಂದಿಗಳು ಹಾಗೂ ಗ್ರಾಮಸ್ಥರು ಪಸ್ಥಿತರಿದ್ದರು. ಮನ್ನಳ್ಳಿ ಗ್ರಾಮ ಪಂಚಾಯತ ಪಿಡಿಓ ಕನಕರಾಯ ಎಲ್ಲರನ್ನು ಸ್ವಾಗತಿಸಿದರು.

# ಬದುಕಿನ ಮೌಲ್ಯ ತಿಳಿಸುವ ಉತ್ಸವ ಹಾವಗಿಲಿಂಗೇಶ್ವರ ಶಿವಾಚಾರ್ಯರು



• ಮಲ್ಲಮ್ಮ ನುಡಿ ವಾರ್ತೆ ಕಮಲನಗರ

ಜಾತ್ರಾ ಮಹೋತ್ಸವಗಳು ಸಂಬಂಧಗಳನ್ನು ಗಟ್ಟಿಗೊಳಿಸುವುದರ ಜೊತೆಗೆ ಬದುಕಿನ ಮೌಲ್ಯಗಳನ್ನು ತಿಳಿಸಿಕೊಡುತ್ತವೆ. ಸಮಾಜದಲ್ಲಿ ಒಗ್ಗಟ್ಟಿನಿಂದ ಎಲ್ಲರೊಂದಿಗೆ ಬಾಳುವುದನ್ನು ಕಲಿಯಬೇಕು ಎಂದು ಹಲಬುರ್ಗಾ–ಶಿವಣಿ–ಹೈದ್ರಾಬಾದ್ ವಿರಕ್ತ ಮಠದ ಪೀಠಾಧಿಪತಿ ಹಾವಗಿಲಿಂಗೇಶ್ವರ ಶಿವಾಚಾರ್ಯರು ಹೇಳಿದರು.

ತಾಲೂಕಿನ ಕೊಟಗ್ಯಾಳ ಗ್ರಾಮದಲ್ಲಿರುವ ಶ್ರೀ ಮಹಾದೇವ ಮಂದಿರದ 5ನೇ ಜಾತ್ರಾಮಹೋತ್ಸವ ಅಂಗವಾಗಿ ಏರ್ಪಡಿಸಿದ್ದ ಶ್ರೀ ಸಿದ್ಧರಾಮೇಶ್ವರ ಜೀವನ ಚರಿತ್ರೆ ಪ್ರವಚನ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದರು.

ಡೋಣಗಾಂವ್(ಎಂ) ಮಾಹಳಪ್ಪಯ್ಯನ ಜಾತ್ರಾ ಮಹೋತ್ಸವದಂತೆ ಸರ್ವಧರ್ಮಗಳ ಸಮನ್ವಯಕ್ಕೆ ಮಾದರಿ ಆಗಿರುವ ಗ್ರಾಮ ಸೇರಿದಂತೆ ತಾಲ್ಲೂಕು ಶಾಂತಿ, ಸೌಹಾರ್ದತೆ ಸಂಸ್ಕೃತಿಯ ನೆಲೆಯಾಗಿದೆ. ಜಾತಿಯ ಸೋಂಕಿಲ್ಲದ ಇಂತಹ ಪರಂಪರೆ ಭವಿಷ್ಯದ ಪೀಳಿಗೆಯವರೆಗೂ ಮುಂದುವರಿಸಬೇಕಿದೆ ಎಂದರು.

ಭಗವದ್ಗೀತೆ, ಕು□□ಆನ್, ಬೈಬಲ್, ವಚನ ಸಾಹಿತ್ಯದಂಥ ಧಾರ್ಮಿಕ ಸಮಾನತೆಯ ತಳಹದಿಯ ಮೇಲೆ ಸಮಾಜ ಮುನ್ನಡೆಯುತ್ತಿದೆ. ಡಾ. ಅಂಬೇಡ್ಕರ್ ಅವರಿಂದ ರೂಪುಗೊಂಡ ಸಂವಿಧಾನ ಗ್ರಂಥವೂ ಪ್ರಜಾಪ್ರಭುತ್ವದ ವ್ಯವಸ್ಥೆಗೆ ತಳಹದಿಯಾಗಿದೆ. ಈ ಎರಡನ್ನೂ ಸಮನ್ವಯದಿಂದ ಸಮಾಜ ನಿರ್ಮಾಣಗೊಳ್ಳಬೇಕು. ಸೌಹಾರ್ದ, ಸಮಾನತೆ ಭಾವ ನಮ್ಮಲ್ಲಿ ಸಮ್ಮಿಳಿತಗೊಳ್ಳಬೇಕು ಎಂದು ಆಶಿಸಿದರು.

ಮಂದಿರ ಪೂಜಾರಿ ಸಂತೋಷ ಸ್ವಾಮಿ, ಗ್ರಾಮದ ಮಹಿಳೆಯರು, ಯುವಕರು, ಮಕ್ಕಳು ಹಾಗೂ ಗ್ರಾಮದ ಗಣ್ಯರು ಉಪಸ್ಥಿತರಿದ್ದರು.

# ಸಹಕಾರ ಸಂಘಗಳಿಂದ ಮಹಿಳೆಯರ ಆರ್ಥಿಕ ಸದೃಢತೆ : ನೀಲಾಂಬಿಕಾ



• **ಮಲ್ಲಮ್ಮ ನುಡಿ ವಾರ್ತೆ ಬೀದರ**

ಮಹಿಳೆಯರ ಗೃಹ ಉದ್ಯೋಗ ಹಾಗೂ ಕಿರು ವ್ಯಾಪಾರಕ್ಕೆ ಸಹಕಾರ ಸಂಘಗಳಿಂದ ಸಹಾಯವಾಗಲಿದೆ. ಸಹಕಾರ ಸಂಘಗಳಿಂದ ಪಡೆದ ಸಾಲವನ್ನು ಸದುಪಯೋಗಪಡಿಸಿಕೊಂಡು, ಪಡೆದ ಸಾಲ ಸಕಾಲದಲ್ಲಿ ಮರುಪಾವತಿಸಿದರೆ ಸಂಘಗಳು ಮತ್ತು ಸದಸ್ಯರು ಆರ್ಥಿಕವಾಗಿ ಸದೃಢ ಹೊಂದಲು ಸಾಧ್ಯವೆಂದು ಸಹಕಾರ ಸಂಘಗಳ ಸಹಾಯಕ ನಿಬಂಧಕಿ ಡಾ: ನೀಲಾಂಬಿಕಾ ಹೇಳಿದರು.

ನಗರದ ರಾಂಪೂರೆ ಕಾಲೋನಿಯಲ್ಲಿ ಮಂಗಳವಾರ ಸಂಜೆ ನೂತನವಾಗಿ ನೋಂದಣಿಯಾದ ಕಾಯಕ ಸಮೃದ್ಧಿ ಮಹಿಳಾ ಸಹಕಾರ ಸಂಘದ ಉದ್ಘಾಟನೆ ಹಾಗೂ ಶ್ರೀ ವೈಷ್ಣೋದೇವಿ ಕಲ್ಚರಲ್ ಮತ್ತು ಚಾರಿಟೇಬಲ್ ಟ್ರಸ್ಟ್, ಗುಮ್ಮೆ ಕಾಲೋನಿ, ಬೀದರ ಸಂಯುಕ್ತಾಶ್ರಯದಲ್ಲಿ ನಡೆದ ಅಂತರರಾಷ್ಟ್ರೀಯ ಮಹಿಳಾ ದಿನಾಚರಣೆ ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಹೆಣ್ಣು ಮಕ್ಕಳು ಕೇವಲ ಮನೆಗೆಲಸಕ್ಕೆ ಸೀಮಿತವಾಗದೇ ಎಲ್ಲಾ ಕ್ಷೇತ್ರಗಳಲ್ಲಿ ಕೆಲಸ ಮಾಡುತ್ತಿರುವುದು ನಿಜಕ್ಕೂ ಉತ್ತಮ ಬೆಳವಣಿಗೆಯಾಗಿದೆ. ಪುರುಷಪ್ರಧಾನವಾದ ದೇಶದಲ್ಲಿ ಮಹಿಳೆಯರಿಗೆ ಶೇಕಡಾ 33 ಪ್ರತಿಶತ ಮೀಸಲಾತಿ ನೀಡುವ ಪ್ರಕ್ರಿಯೆ ಚಾಲ್ತಿಯಲ್ಲಿದ್ದು, ಅದು ಕಾರ್ಯರೂಪಕ್ಕೆ ಬಂದರೆ ಇನ್ನೂ ಹೆಚ್ಚಿನ ರೀತಿಯಲ್ಲಿ ಮಹಿಳೆಯರು ವಿವಿಧ ಕ್ಷೇತ್ರಗಳಲ್ಲಿ ಗಣನೀಯ ಸೇವೆ ಸಲ್ಲಿಸಲು ಅನುಕೂಲವಾಗಲಿದೆ ಎಂದು ಕರ್ನಾಟಕ ರಾಜ್ಯ ಮಹಿಳಾ ಸಹಕಾರ ಮಹಾಮಂಡಳದ ಅಧ್ಯಕ್ಷೆ ಶ್ರೀಮತಿ ಶಕುಂತಲಾ ಬೆಲ್ದಾಳೆ ಹೇಳಿದರು.

ರಾಷ್ಟ್ರೀಯ ಮಹಿಳಾ ದಿನಾಚರಣೆ ನಿಮಿತ್ಯ ಬೀದರನ ಬಸವೇಶ್ವರ ಶಿಕ್ಷಣ ಮಹಾವಿದ್ಯಾಲಯದ ಪ್ರಾಧ್ಯಾಪಕಿ ಡಾ. ವೀಣಾ ಜಲಾದೆಯವರು ಮಾತನಾಡಿ, ಹೆಣ್ಣುಮಕ್ಕಳು ತಮ್ಮ ಮನೆಯಲ್ಲಿ ಮಕ್ಕಳಿಗೆ ಉತ್ತಮ ಸಂಸ್ಕಾರ ನೀಡಬೇಕು. ಇತ್ತೀಚಿನ ದಿನಮಾನಗಳಲ್ಲಿ ಮೊಬೈಲ್ ಬಳಕೆ ಹೆಚ್ಚಾಗುತ್ತಿರುವುದು ಕುಟುಂಬದಲ್ಲಿನ ಸಾಮರಸ್ಯಗೆ ಧಕ್ಕೆಯಾಗಲಿದೆ. ತಾಯಿಯೆ ಮೊದಲ ಗುರು. ತಾಯಿಯಿಂದ ಕಲಿತ ನಾವು ಧನ್ಯರು. ದೇಶದ ಸಂಸ್ಕೃತಿ ಉಳಿಸಿ ಬೆಳೆಸುವುದರ ಜೊತೆಗೆ ತಾಯಿಯ ಋಣದ ಕುರಿತು ವಿಸ್ತಾರವಾಗಿ ಮಾತನಾಡಿದರು. ಮಹಿಳೆಯರ ಜಾಗೃತಿಗಾಗಿ ಶ್ರೀ ವೈಷ್ಣೋದೇವಿ ಕಲ್ಚರಲ್ ಮತ್ತು ಚಾರಿಟೇಬಲ್ ಟ್ರಸ್ಟ್ ವತಿಯಿಂದ ಅಂತರಾಷ್ಟ್ರೀಯ ಮಹಿಳಾ ದಿನಾಚರಣೆ ಕಾರ್ಯಕ್ರಮ ಹಮ್ಮಿಕೊಂಡಿರುವುದು ಸಂತಸದಾಯಕವಾಗಿದೆ ಎಂದರು.

ಅತಿಥಿಗಳಾಗಿ ಕರ್ನಾಟಕ ರಾಜ್ಯ ಮಹಿಳಾ ಸಹಕಾರ ಮಹಾಮಂಡಳದ ನಿರ್ದೇಶಕಿ ಡಾ. ಸಾವಿತ್ರಿಬಾಯಿ ಹೆಬ್ಬಾಳೆ, ಅಕ್ಕಮಹಾದೇವಿ ಮಹಿಳಾ ಪತ್ತಿನ ಸಹಕಾರ ಸಂಘದ ನಿರ್ದೇಶಕಿ ಡಾ. ಸುನಿತಾ ಕೂಡ್ಲಿಕರ್ ಮಾತನಾಡಿದರು. ಶ್ರೀ ವೈಷ್ಣೋದೇವಿ ಕಲ್ಚರಲ್ ಮತ್ತು ಚಾರಿಟೇಬಲ್ ಟ್ರಸ್ಟ್‌ನ ಕಾರ್ಯದರ್ಶಿ ಭಾರತಿ ಸಂಗಮೇಶ ಬಿರಾದಾರ ಅಧ್ಯಕ್ಷತೆ ವಹಿಸಿದರು.

ವಿಜಯಲಕ್ಷ್ಮೀ ರಮೇಶ ಪರಸಾಣೆ ಪ್ರಾಸ್ತಾವಿಕವಾಗಿ ಮಾತನಾಡಿದರು. ಗುಮ್ಮೆ ಕಾಲೋನಿಯ ಅಕ್ಕಮಹಾದೇವಿ ಮಹಿಳಾ ಭಜನೆ ಮತ್ತು ಸಾಂಸ್ಕೃತಿಕ ಸಂಘದ ಸದಸ್ಯರಿಂದ ಭಜನೆ ಕಾರ್ಯಕ್ರಮ ನಡೆಯಿತು. ಕಾವ್ಯ ಪರಮೇಶ ಬಿರಾದಾರ ಪ್ರಾರ್ಥನೆ ಗೀತೆ ನಡೆಸಿಕೊಟ್ಟರು. ಶಿಲ್ಪಾ ಮಹೇಶ ಮಜಗೆ ಸ್ವಾಗತಿಸಿದರು. ರಾಜಮ್ಮ ಸಂಗಮೇಶ ನೇಳಗೆ ನಿರೂಪಿಸಿದರೆ, ಮೀನಾಕ್ಷಿ ವೈಜಿನಾಥ ಪಾಟೀಲ್ ವಂದಿಸಿದರು.

ಈ ಸಂದರ್ಭದಲ್ಲಿ ನೂತನ ಸಂಘದ ನಿರ್ದೇಶಕ ಮಂಡಳಿ ಸದಸ್ಯರಾದ ಕು. ಕೀರ್ತಿ ವೈಜಿನಾಥ ಪಾಟೀಲ್, ಅನಿತಾ ಜಾಬಾ, ರಾಜಮ್ಮ ನೇಳಗೆ, ಶಿಲ್ಪಾ ಮಜಗೆ, ವಿಜಯಲಕ್ಷ್ಮೀ ಪರಸಾಣೆ, ಮಹಾನಂದಾ ಮೇತ್ರೆ, ವಿಜಯಲಕ್ಷ್ಮೀ ಬಚ್ಚಣ್ಣ, ಎನ್. ಪದ್ಮಲತಾ, ಸುಧಾ ಸೂರ್ಯಕಾಂತ ದಾನಿ, ಪ್ರೀತಿ ಉಮಾಕಾಂತ, ಚಿನ್ನಮ್ಮ ಗೋಖಲೆ, ಮಲ್ಲಮ್ಮ ವೀರಶೆಟ್ಟಿ, ಪೂಜಾ ಶಿವಕುಮಾರ ಇವರಿಗೆ ಸನ್ಮಾನಿಸಲಾಯಿತು. ಕಾರ್ಯಕ್ರಮದಲ್ಲಿ ವೈಜಿನಾಥ ಪಾಟೀಲ್, ಸಂಗಮೇಶ ಬಿರಾದಾರ, ಚಿನ್ನಮ್ಮ ದಾನಿ, ಶೃತಿ ರವಿ, ಗೀತಾ ಪಾಟೀಲ್, ರೇಖಾ, ಸಂಗೀತಾ ಪಾಟೀಲ್, ಉಮಾಶ್ರೀ, ಈರಮ್ಮ, ಕವಿತಾ, ನೀಲಮ್ಮ, ಶೋಭಾ ರಾಜಕುಮಾರ ಮುಂತಾದವರು ಉಪಸ್ಥಿತರಿದ್ದರು.



(ಮಲ್ಲಮ್ಮ ನುಡಿ ವಾರ್ತೆ)
ಬೀದರ, ಮಾರ್ಚ.25 :– ಜಿಲ್ಲಾಧಿಕಾರಿ ಶಿಲ್ಪಾ ಶರ್ಮಾ ಅವರು ಇಂದು ಬೀದರ ನಗರದ ಚಿಟ್ಟಾ ಖಾ[illegible]ದ ಬಾಲಕಿಯರ ಸರಕಾರಿ ಪದವಿ ಪೂರ್ವ ಕಾಲೇಜಿನಲ್ಲಿ ನಡೆಯುತ್ತಿರುವ ಎಸ್.ಎಸ್.ಎಲ್.ಸಿ. ಪರೀಕ್ಷಾ ಕೇಂದ್ರಕ್ಕೆ ಭೇಟಿ ನೀಡಿ ಪರಿಶೀಲಿಸಿದರು,

# ಸಿಡಿಲು ಬಡಿದು ನಾಲ್ವರಿಗೆ ಗಂಭೀರ ಗಾಯ

• **ಮಲ್ಲಮ್ಮ ನುಡಿ ವಾರ್ತೆ ಭಾಲ್ಕಿ**

ತಾಲ್ಲೂಕಿನ ನಿಟ್ಟೂರು (ಬಿ) ಗ್ರಾಮದ ಹೊಲವೊಂದರಲ್ಲಿ ಮಂಗಳವಾರ ಸಂಜೆ ಕುಸುಬಿ ಕಟಾವು ಮಾಡುತ್ತಿದ್ದ ನಾಲ್ಕು ಜನ ಕೃಷಿಕರು ಸಿಡಿಲು ಬಡಿದು ಗಂಭೀರ ಗಾಯಗೊಂಡಿದ್ದಾರೆ.

ಗಾಯಗೊಂಡವರು ಸುವರ್ಣಾ ಸಾಯಿನಾಥ ಕಾರಿಗಾರ್, ಪಾರ್ವತಿ, ನರಸಿಂಗ, ಅಶ್ವಿನಿ ಎಂದು ತಿಳಿದು ಬಂದಿದೆ.

ಈ ನಾಲ್ಕು ಜನರಿಗೆ ನಿಟ್ಟೂರು (ಬಿ) ಗ್ರಾಮದ ಸಮುದಾಯ ಆರೋಗ್ಯ ಕೇಂದ್ರದಲ್ಲಿ ಪ್ರಾಥಮಿಕ ಚಿಕಿತ್ಸೆ ನೀಡಿ, ಹೆಚ್ಚಿನ ಚಿಕಿತ್ಸೆಗಾಗಿ ಬೀದರ್ ನ ಬ್ರೀಮ್ಸ್ ಗೆ ಕಳುಹಿಸಲಾಗಿದೆ.

ಗಾಯಗೊಂಡವರಲ್ಲಿ ಪಾರ್ವತಿ ಮತ್ತು ಅಶ್ವಿನಿ ಅವರ ಸ್ಥಿತಿ ತುಂಬಾ ಗಂಭೀರವಾಗಿದೆ ಎಂದು ಗ್ರಾಮದ ಪ್ರತ್ಯಕ್ಷದರ್ಶಿಗಳು ತಿಳಿಸಿದ್ದಾರೆ.

# ಹೆಚ್‌ಪಿಇ ಲಸಿಕೆ ಹಾಕಿಸಿಕೊಳ್ಳಿ: ವರ್ಮಾ




ರಾಯಚೂರು : ಭವಿಷ್ಯದಲ್ಲಿ ಹೆಣ್ಣು ಮಕ್ಕಳು ಗರ್ಭಕಂಠದ ಕ್ಯಾನ್ಸರ್‌ನಿಂದ ಬಳಲಬಾರದು. ಆದ್ದರಿಂದ ಸಂತಸದ ಜೀವನಕ್ಕಾಗಿ ಪ್ರಸ್ತುತ 14 ವರ್ಷದ ಹೆಣ್ಣುಮಕ್ಕಳಿಗೆ ಪಾಲಕರು ಯಾವುದೆ ಹಿಂದೇಟು ಹಾಕದೆ ಹೆಚ್.ಪಿ.ವಿ ಲಸಿಕೆಯನ್ನು ಹಾಕಿಸಬೇಕು ಎಂದು ರಾಯಚೂರು ತಹಶೀಲ್ದಾರ ಸುರೇಶ ವರ್ಮಾ ಅವರು ಹೇಳಿದರು.

ಮಾರ್ಚ್ 25ರ ಬುಧವಾರ ದಂದು ನಗರದ ಡಿಹೆಚ್‌ಓ ಕಾರ್ಯಾಲಯದ ತುಂಗಾ ಭವನದಲ್ಲಿ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ತಾಲೂಕಾಡಳಿತ, ಸಾರ್ವಜನಿಕ ಶಿಕ್ಷಣ ಇಲಾಖೆ, ತಾಲೂಕಾ ಆರೋಗ್ಯಾಧಿಕಾರಿಗಳ ಕಚೇರಿ ಮೂಲಕ ಹೆಚ್‌ಪಿವಿ ಲಸಿಕೆ ವಿಶೇಷ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಈ ಲಸಿಕೆಯ ಬಗ್ಗೆ ತಪ್ಪು ಮಾಹಿತಿ, ಸುದ್ದಿಗಳಿಗೆ ಕಿವಿಗೊಡದೆ ಲಸಿಕೆ ಹಾಕಿಸಲು ಎಲ್ಲರೂ ಮುಂದೆ ಬರಬೇಕು. ಇದಕ್ಕಾಗಿ ಆರೋಗ್ಯ ಇಲಾಖೆಯೊಂದಿಗೆ ಶಿಕ್ಷಣ ಇಲಾಖೆ, ವಸತಿ ನಿಲಯಗಳನ್ನು ಹೊಂದಿರುವ ವಿವಿಧ ಕಲ್ಯಾಣ ಇಲಾಖೆಗಳು ಕೈಜೊಡಿಸಬೇಕು. ಸರಕಾರದ ಮಹತ್ವಾಕಾಂಕ್ಷಿ ಅಭಿಯಾನ ಯಶ ಕಾಣಬೇಕು ಎಂದರು.

ಯಾವುದೇ ಸರಕಾರ ಜನತೆಗೆ ಉತ್ತಮವಾದ, ದೀರ್ಘಾವಧಿಯಲ್ಲಿ ಸಮಾಜಕ್ಕೆ ಒಳ್ಳೆಯದಾಗುವ ಯೋಜನೆ ರೂಪಿಸುತ್ತವೆ. ಅದರಂತೆ ಪ್ರಸುತ್ತ 14 ವರ್ಷದ ಶಾಲಾ ಮಕ್ಕಳಿಗೆ ಹೆಚ್‌ಪಿವಿ ಲಸಿಕೆ ಹಾಕುವ ಉದ್ದೇಶವು ಭವಿಷ್ಯದಲ್ಲಿ ಗರ್ಭಕಂಠದ ಕ್ಯಾನ್ಸರ್ ತಡೆಗಟ್ಟುವದಾಗಿದೆ. ಆದ್ದರಿಂದ ಶಾಲೆ, ಬಾಲಕಿಯರ ವಸತಿ ನಿಲಯಗಳಲ್ಲಿ ಈ ಕುರಿತು ತಿಳಿಸಿ ಸೂಕ್ತ ಕ್ರಿಯಾ ಯೋಜನೆ ರೂಪಿಸಿ ಕಾಲಮಿತಿಯಲ್ಲಿ ಅರ್ಹರಾದ ಎಲ್ಲ ಹೆಣ್ಣು ಮಕ್ಕಳಿಗೆ ಲಸಿಕೆ ಹಾಕಿಸಬೇಕು ಎಂದರು.

ಈ ವೇಳೆ ಜಿಲ್ಲಾ ಆರ್‌ಸಿಹೆಚ್ ಅಧಿಕಾರಿ ಡಾ.ನಂದಿತಾ ಎಮ್. ಎನ್. ಅವರು ಮಾತನಾಡಿ, ಗ್ರಾಮೀಣ ಪ್ರದೇಶದಲ್ಲಿ ಅಡೆತಡೆ ಇಲ್ಲ. ಆದರೆ ನಗರ ಪ್ರದೇಶದ ಕೆಲವು ಪ್ರದೇಶಗಳಲ್ಲಿ ಪ್ರಗತಿ ನಿಧಾನವಾಗುತ್ತಿದ್ದು, ಅಂತ ಪ್ರದೇಶದ ಜನರಿಗೆ ಹಾಗೂ ಇತರರಿಗೂ ವ್ಯಾಪಕ ಪ್ರಚಾರವನ್ನು ನೀಡಲು ಧಾರ್ಮಿಕ ಮುಖಂಡರ, ಧರ್ಮ ಗುರುಗಳ ಸಹಾಯದೊಂದಿಗೆ ವಿಡಿಯೋ ಸಂದೇಶಗಳನ್ನು ಸಾಮಾಜಿಕ ಜಾಲತಾಣಗಳ ಮೂಲಕ ನೀಡಲು ಕ್ರಮ ವಹಿಸಲಾಗುತ್ತಿದ್ದು, ತ್ಯಾಜ್ಯ ವಿಲೇವಾರಿ ವಾಹನಗಳಲ್ಲಿ ಜಿಂಗಲ್ಸ್ ಹಾಕಲಾಗುತ್ತಿದೆ ಎಂದರು.

ದಯವಿಟ್ಟು ಗರ್ಭಕಂಠದ ಕ್ಯಾನ್ಸರ್ ತಡೆಗೆ ಈ ಲಸಿಕೆ ಅತ್ಯಂತ ಉಪಯುಕ್ತವಾಗಿದೆ. ಮಾರುಕಟ್ಟೆಯಲ್ಲಿ ದೊರಕುವ ಲಸಿಕೆಗೆ ಖಾಸಗಿ ಆಸ್ಪತ್ರೆಗಳಲ್ಲಿ ದುಬಾರಿ ಹಣ ಪಾವತಿಸಬೇಕು. ಸರಕಾರವೇ ಉಚಿತವಾಗಿ ಹಾಕುತ್ತಿರುವ ವ್ಯವಸ್ಥೆ ಕಲ್ಪಿಸಿದ್ದು, ಅನಗತ್ಯ ತಪ್ಪು ಮಾಹಿತಿಗಳಿಗೆ ಕಿವಿಗೊಡದೆ 14 ವರ್ಷದ ಹೆಣ್ಣು ಮಕ್ಕಳಿಗೆ ಉಚಿತ ಹೆಚ್.ಪಿ.ವಿ (ಹೂಮನ್ ಪ್ಯಾಪಿಲೋಮ ವೈರಸ್) ವಿರುದ್ಧದ ಲಸಿಕೆಯನ್ನು ಪೋಷಕರು ತಾವಾಗಿಯೇ ತಮ್ಮ ಮಕ್ಕಳಿಗೆ ತಪ್ಪದೇ ಹತ್ತಿರದ ಸರ್ಕಾರಿ ಆಸ್ಪತ್ರೆಗೆ ಕರೆದುಕೊಂಡು ಬಂದು ಲಸಿಕೆ ಹಾಕಿಸಬೇಕೆಂದರು.

ಇದೇ ಸಂದರ್ಭದಲ್ಲಿ ತಾಲೂಕಾ ಆರೋಗ್ಯಾಧಿಕಾರಿ ಡಾ.ಅಮೃತ ಹಕ್ಕೇರಿ, ಶಿಕ್ಷಣ ಇಲಾಖೆಯ ಬಿಆರ್‌ಸಿ ಅಧಿಕಾರಿ ಯುನಸ್ ಬಾಬು, ಇಸಿಓ ರಾಮಕೃಷ್ಣ, ವೈದ್ಯಾಧಿಕಾರಿಗಳಾದ ಡಾ. ಫರ್ಹಾನ್ ನಸ್ರೀನ್ ಖಾಜಿ,

ಬಿಪಿಎಮ್ ವರಲಕ್ಷ್ಮೀ, ತಾಲೂಕಾ ಆಶಾ ಮೇಲ್ವಿಚಾರಕಿ ಮರಿಯಾಳಮ್ಮ ಸೇರಿದಂತೆ ಇತರರು ಇದ್ದರು.

## ದೇವರ ದಾಸಿಮಯ್ಯ ಭವನ ಕಟ್ಟಡಕ್ಕೆ ಭೂಮಿ ಪೂಜೆ

# ನೇಕಾರರ ಅಭಿವೃದ್ಧಿಗೆ ಬದ್ಧ: ಖಂಡ್ರೆ



• **ಮಲ್ಲಮ್ಮ ನುಡಿ ವಾರ್ತೆ ಭಾಲ್ಕಿ**

, ಸಮಾಜದ ಅಭಿವೃದ್ಧಿಯಲ್ಲಿ ನೇಕಾರ ಸಮುದಾಯದ ಕೊಡುಗೆ ಅನನ್ಯವಾಗಿದೆ. ಈ ಸಮುದಾಯದ ಅಭಿವೃದ್ಧಿಗೆ ಸರಕಾರ ಬದ್ಧವಾಗಿದೆ ಎಂದು ಜಿಲ್ಲಾ ಉಸ್ತುವಾರಿ ಸಚಿವ ಈಶ್ವರ ಖಂಡ್ರೆ ಹೇಳಿದರು.

ಪಟ್ಟಣದ ಹೊರ ವಲಯದಲ್ಲಿ ತಾಲೂಕು ನೇಕಾರ(ಜಾಡರ್) ಸಮುದಾಯದ ವತಿಯಿಂದ ಏರ್ಪಡಿಸಿದ್ದ ದೇವರ ದಾಸಿಮಯ್ಯ ದೇಗುಲ ಮತ್ತು ಭವನ ನಿರ್ಮಾಣಕ್ಕೆ ಗುದ್ದಲಿ ಪೂಜೆ ನೆರವೇರಿಸಿ ಅವರು ಮಾತನಾಡಿದರು.

ಆರ್ಥಿಕ, ಶೈಕ್ಷಣಿಕ, ಸಾಮಾಜಿಕವಾಗಿ ಹಿಂದುಳಿದಿರುವ ಈ ಸಮುದಾಯದ ಪ್ರಗತಿಗೆ ಸರಕಾರದಿಂದ ಅಗತ್ಯ ಕ್ರಮ ಕೈಗೊಳ್ಳುವುದರ ಜತೆಗೆ ವೈಯಕ್ತಿಕವಾಗಿ ಸಹಕಾರ ನೀಡುವಾಗಿ ಭರವಸೆ ನೀಡಿದರು.

ರಾಚಮ್ಮ ನಾಗಭೂಷಣ ಮಾಮಡಿ ಅವರು ತಮ್ಮ ವೈಯಕ್ತಿಕ ನಿವೇಶನವನ್ನು ದೇವರ ದಾಸಿಮಯ್ಯ ಭವನಕ್ಕೆ ದೇಣಿಗೆ ನೀಡಿದರು.

ಈ ಸಂದರ್ಭದಲ್ಲಿ ತಾಲೂಕು ನೇಕಾರ ಸಮಾಜದ ಅಧ್ಯಕ್ಷ ಸಂತೋಷ ಬಿಜಿ ಪಾಟೀಲ್, ಶೃತಿ ಪಾಟೀಲ್, ಪ್ರಮುಖರಾದ ಬಾಬುರಾವ ಖ್ಯಾಡೆ, ಚಂದ್ರಕಾಂತ ಹಿಪ್ಪರಗೆ, ರೇವಣಸಿದ್ದ ಗೌಡನೂರ, ರಾಜಶೇಖರ ಪಾಟೀಲ್, ಸಚಿನ್ ಕಾಡಾದೆ, ರೇವಣಪ್ಪ ಜಾಡರ್, ಬಸವರಾಜ ಧೂಮ್ಮನಸುರೆ, ಓಂಪ್ರಕಾಶ ಪಾಟೀಲ್, ಮಲ್ಲಿಕಾರ್ಜುನ, ಚಂದ್ರಕಾಂತ, ಧೂಳಪ್ಪ ಹುಣಜೆ, ಬಸವರಾಜ ಧುಮನಸೂರೆ, ವೈಜಿನಾಥ, ನಿತಿನ ಶಿವರಾಜ, ಸಂಗಶೆಟ್ಟಿ, ಗಿರೀಶ ಸಿದ್ರಾಮಪ್ಪ, ಸಂಗಮೇಶ, ಸತೀಶ, ಅಣ್ಣೆಪ್ಪ, ಗೀತಾ, ಸಂತೋಷಿ, ಅಮೃತಾ, ಮಹೇಶ್ವರಿ, ಪುಷ್ಪಾ, ಚಂದ್ರಕಲಾ ಸೇರಿದಂತೆ ಹಲವರು ಇದ್ದರು.

# 28 ರಿಂದ ಶ್ರೀ ಡೋಣೇಶ್ವರ ಮಹಾಪೂಜಾ ಮಹೋತ್ಸವ



• **ಮಲ್ಲಮ್ಮ ನುಡಿ ವಾರ್ತೆ ಭಾಲ್ಕಿ**

ತಾಲೂಕಿನ ಡೋಣಗಾಪುರ ಗ್ರಾಮದ ಡೋಣೇಶ್ವರ ದೇವಾಲಯದಲ್ಲಿ ಕಟ್ಟಿಮನಿ ಸಂಸ್ಥಾನ ಹಿರೇಮಠ ಮೇಹಕರ, ಡೋಣಗಾಪುರದ ರಾಜೇಶ್ವರ ಶಿವಾಚಾರ್ಯರ ನೇತೃತ್ವದಲ್ಲಿ 2026ರ ಮಾ.28 ರಿಂದ ಎ.02 ರವರೆಗೆ ಶ್ರೀ ಡೋಣೇಶ್ವರ ಮಹಾಪೂಜಾ ಮಹೋತ್ಸವ ಮತ್ತು ವಿಶ್ವಶಾಂತಿಗಾಗಿ 44ನೇ ಜಪಯಜ್ಞ ಹಾಗೂ ಪ್ರಯೋಗಾತ್ಮಕ ಧರ್ಮ ಶಿಕ್ಷಣ ಪ್ರತಿ ವರ್ಷದಂತೆ ಈ ವರ್ಷವು ನಡೆಯಲಿವೆ. ಮಾ.28 ರಿಂದ ಎ.02 ರವರೆಗೆ ಪಂಚಾಕ್ಷರಿ ಮಹಾಮಂತ್ರ, ಜಪಯಜ್ಞ, ಹಾಗೂ ಮಾನವ ಧರ್ಮದ ದಶನಿಯಮಗಳ ಪಾಲನೆ, ಉಪನ್ಯಾಸ, ಪುರಾಣ, ಹಾಗೂ ಪ್ರವಚನಾದಿ ಕಾರ್ಯಕ್ರಗಳು ದಿನಂಪ್ರತಿ ಬಹು ವಿಜೃಂಭಣೆಯಿಂದ ನೆರವೇರಿಸಲಾಗುತ್ತದೆ. ಮಾ.28 ರಂದು ಧರ್ಮ ಸಭೆ, 29 ರಂದು ಉಚಿತ ಆರೋಗ್ಯ ತಪಾಸಣೆ ,30 ರಂದು ನಡೆಯಲಿರುವ ಧರ್ಮ ಸಭೆಯಲ್ಲಿ ಮಾಜಿ ಶಾಸಕ ಪ್ರಕಾಶ ಖಂಡ್ರೆ ಭಾಗವಹಿಸಲಿದ್ದು ಹಾಗೂ ಶ್ರೀ ಗುರು ರಾಚೋಟಿ ಶಿವಾಚಾರ್ಯರ ತೊಟ್ಟಿಲು ಕಾರ್ಯಕ್ರಮ ಹಾಗೂ ಮೆರವಣಿಗೆ, 31 ರಂದು ನಡೆಯುವ ಧರ್ಮ ಮತ್ತು ಸಮಾಜ ಗೋಷ್ಠಿಯಲ್ಲಿ ಜಿಲ್ಲಾ ಉಸ್ತುವಾರಿ ಸಚಿವ ಈಶ್ವರ ಖಂಡ್ರೆ ಭಾಗವಹಿಸಲಿದ್ದು, ಎ.01 ರಂದು ನಡೆಯುವ ಧರ್ಮ ಸಭೆಯಲ್ಲಿ ಬೀದರ ಸಂಸದ ಸಾಗರ ಖಂಡ್ರೆ ಭಾಗವಹಿಸಲಿದ್ದು, 02 ರಂದು ಕುಂಭಾಭಿಷೇಕ ಮೆರವಣಿಗೆ ಹಾಗೂ ಜಪಯಜ್ಞ ಮಹೋತ್ಸವದ ಸಮಾರೋಪ ಸಮಾರಂಭ ಜರಗುತ್ತವೆ. ಒಂದು ವಾರದ ವರೆಗೆ ನಡೆಯಲಿರುವ ಈ ಪುಣ್ಯ ಕಾರ್ಯಕ್ರಮಕ್ಕೆ ಹೆಚ್ಚಿನ ಸಂಖ್ಯೆಯ ಸದ್ಭಕ್ತರು ಆಗಮಿಸಿ ಯಶಸ್ವಿಗೊಳಿಸಬೇಕು ಎಂದು ಸಮಿತಿ ಕಾರ್ಯದರ್ಶಿ ರಾಜಶೇಖರ ಚಿದ್ರಿ ಹಾಗೂ ಪಿಕೆಪಿಎಸ್ ಮಾಜಿ ಅಧ್ಯಕ್ಷ ಶಾಂತವೀರ ಪಾಟಿಲ್ ಜಂಟಿಯಾಗಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

> “ಧರ್ಮ ಶಿಕ್ಷಣವು ಮಾನವನ ಮನಸ್ಸಿಗೆ ಪವಿತ್ರ ಆಚಾರ, ವಿಚಾರ, ಉಚ್ಛಾರಗಳ ಸಂಸ್ಕಾರವನ್ನು ಒದಗಿಸಿಕೊಟ್ಟು ಭಾವ ಶುದ್ಧಗೊಳಿಸುತ್ತದೆ. ಕಾರಣ ಮಾನವನಲ್ಲಿ ಮಾತೃಭಕ್ತಿ, ಪಿತೃಭಕ್ತಿ, ಆಚಾರಭಕ್ತಿ, ದೇಶಭಕ್ತಿ ಬೆಳೆಯುತ್ತವೆ. ಮಾನವನ ಜೀವನದಲ್ಲಿ ವ್ಯಾಪಕ ಸುಖ, ಶಾಂತಿಗಳು ನೆಲೆಸುತ್ತವೆ.
>
> **ರಾಜೇಶ್ವರ ಶಿವಾರ್ಯರು ಡೋಣಗಾಪುರ.**

# ಸಂಸ್ಕಾರಯುತ ಬದುಕಿಗೆ ಕಲಿಕೆ ಅಗತ್ಯ: ರಘುಪ್ರೇಮಾಚಾರ್



• **ಮಲ್ಲಮ್ಮ ನುಡಿ ವಾರ್ತೆ ಕೊಪ್ಪಳ**

ಮಕ್ಕಳು ಉತ್ತಮವಾಗಿ ಮತ್ತು ಸಂಸ್ಕಾರಯುತವಾಗಿ ಭವಿಷ್ಯ ಕಟ್ಟಿಕೊಳ್ಳಲು ಧಾರ್ಮಿಕ ಶಿಕ್ಷಣ ಮತ್ತು ಅವುಗಳ ಆಚರಣೆಗಳ ಬಗ್ಗೆ ತಿಳಿದುಕೊಳ್ಳುವುದು ಅಗತ್ಯ' ಎಂದು ಇಲ್ಲಿನ ರಾಘವೇಂದ್ರ ಸ್ವಾಮಿಗಳ ಮಠದ ಪ್ರಧಾನ ಅರ್ಚಕ ರಘುಪ್ರೇಮಾಚಾರ್ ಮುಳಗುಂದ ಹೇಳಿದರು.

ನಗರದ ಸಮಾನ ಮನಸ್ಕ ಬ್ರಾಹ್ಮಣ ಸ್ನೇಹಿತರು ಸೇರಿ ವಿಠ್ಠಲ ಕೃಷ್ಣ ವಾಣಿಜ್ಯ ಸಂಕೀರ್ಣ ಹಿಂಭಾಗದಲ್ಲಿ ಹಮ್ಮಿಕೊಂಡಿರುವ ವಸಂತ ಧಾರ್ಮಿಕ ಶಿಕ್ಷಣ ಶಿಬಿರವನ್ನು ಮಂಗಳವಾರ ಉದ್ಘಾಟಿಸಿ ಮಾತನಾಡಿದ ಅವರು 'ಶಿಬಿರ ಆಯೋಜನೆ ಸಂಪ್ರದಾಯ ಉತ್ತಮವಾದದ್ದು, ಇದು ಹಿಂದಿನಿಂದಲೂ ನಡೆದುಕೊಂಡು ಬಂದಿದೆ. ಮಕ್ಕಳಲ್ಲಿ ಧರ್ಮದ ಬಗ್ಗೆ ಜಾಗೃತಿ ಮೂಡಿಸಲು ಅನುಕೂಲವಾಗುತ್ತದೆ. ಸಂಧ್ಯಾವಂದನೆ ಮಾಡದ ದೊಡ್ಡವರು ಕೂಡ ಶ್ಲೋಕಗಳನ್ನು ಕಲಿತುಕೊಳ್ಳಬೇಕು' ಎಂದು ಸಲಹೆ ನೀಡಿದರು.

ಶಿಬಿರ ನಡೆಸಿಕೊಡಲು ಬಂದಿರುವ ಉಡುಪಿಯ ಯದುನಂದನ ಅಚಾರ್ ಮಾತನಾಡಿ 'ಕೊಪ್ಪಳದಲ್ಲಿ ಮೊದಲ ಬಾರಿಗೆ ಕಾರ್ಯಕ್ರಮ ಆಯೋಜಿಸಿದ್ದು ಖುಷಿ ನೀಡಿದೆ. ಯಾವುದೇ ಕಾರ್ಯಕ್ರಮ ಮಾಡಿದರೂ ಮೊದಲು ದೀಪ ಬೆಳಗಿಸಲಾಗುತ್ತದೆ. ಇದು ಜ್ಞಾನದ ಪ್ರತೀಕವಾಗಿದೆ. ಚಿಕ್ಕವಯಸ್ಸಿನಲ್ಲಿದ್ದಾಗಲೇ ಕಲಿಸಿದರೆ ಮಕ್ಕಳಲ್ಲಿ ಸಂಸ್ಕಾರ ಬೆಳೆಯುತ್ತದೆ' ಎಂದು ಹೇಳಿದರು.

ಅರ್ಚಕ ಗೋವಿಂದಾಚಾರ್ ಬಾದರ್ಲಿ, ಅಖಿಲ ಭಾರತ ಬ್ರಾಹ್ಮಣ ಮಹಾಸಭಾದ ಜಿಲ್ಲಾ ಚುನಾಯಿತ ಪ್ರತಿನಿಧಿ ಗುರುರಾಜ ಎನ್. ಜೋಶಿ, ರಾಜ್ಯ ಕೇಂದ್ರ ಕಾರ್ಯಕಾರಿಣಿ ಸದಸ್ಯ ಎಚ್.ಬಿ. ದೇಶಪಾಂಡೆ, ಸಮಾಜದ ಮುಖಂಡರಾದ ವೇಣುಗೋಪಾಲ ಜಹಗೀರದಾರ್, ರಮೇಶ ಜಹಗೀರದಾರ್ ಸೇರಿದಂತೆ ಅನೇಕರು ಪಾಲ್ಗೊಂಡಿದ್ದರು.

# ಪೂಜ್ಯರ ಆಶೀರ್ವಾದದಿಂದ ವಿವಾಹ ಜೀವನ ಸಾರ್ಥಕತೆಯ ಕ್ಷಣ: ಕಂಬಳಿ



• **ಮಲ್ಲಮ್ಮ ನುಡಿವಾರ್ತೆ ಕುಕನೂರು**


ಪಟ್ಟಣದ ನೀಲಗುಂದ ಮಠ ಗುದ್ನೇಶ್ವರ ಸ್ವಾಮಿ ಸೇವಾ ಸಮಿತಿ ವತಿಯಿಂದ 16 ಜೋಡಿಗಳ ಸಾಮೂಹಿಕ ವಿವಾಹ ಹಾಗೂ ವಿವಿಧ ಧಾರ್ಮಿಕ ಕಾರ್ಯಕ್ರಮಗಳು ಬುಧವಾರ ಗುದ್ನೆಪ್ಪನ ಮಠ ಆವರಣದಲ್ಲಿ ಸಡಗರದಿಂದ ಯಶಸ್ವಿಯಾಗಿ ನಡೆದವು.

ಸಮಾಜ ಸೇವಕ ಕಳಕಪ್ಪ ಕಂಬಳಿ ಅವರು ಮಾತನಾಡಿ, ಸಾಮೂಹಿಕ ವಿವಾಹ ಎಂದರೆ ಅದು ಕೇವಲ ಬಡ ಜನರ ಮದುವೆ ಕಾರ್ಯಕ್ರಮ ಎಂದು ಭಾವಿಸುವುದು ತಪ್ಪು. ಪವಿತ್ರವಾದ ಧಾರ್ಮಿಕ ಕ್ಷೇತ್ರದಲ್ಲಿ, ಸಹಸ್ರಾರು ಭಕ್ತರು ಮತ್ತು ಪೂಜ್ಯರ ಆಶೀರ್ವಾದದೊಂದಿಗೆ ವಿವಾಹ ಬಂಧನಕ್ಕೊಳಗಾಗುವುದು ಜೀವನದ ಸಾರ್ಥಕತೆಯ ಕ್ಷಣವಾಗಿದೆ ಎಂದು ಹೇಳಿದರು.

ಈ ಸಂದರ್ಭದಲ್ಲಿ ವೇದಿಕೆ ಕಾರ್ಯಕ್ರಮದಲ್ಲಿ ನೀಲಗುಂದ ಮಠದ ಪ್ರಭುಲಿಂಗ ದೇವರು, ಕುದ್ರಿಮೋತಿಯ ಮೈಸೂರು ಸಂಸ್ಥಾನದ ವಿಜಯ ಮಹಾಂತೇಶ್ವರ ಮಹಾಸ್ವಾಮಿಜೀ, ಸುರೇಶ್ ಬಳೂಟಗಿ ಹಾಗೂ ಮಾಜಿ ಜಿ.ಪಂ. ಸದಸ್ಯ ಈರಪ್ಪ ಕುಡಗುಂಟಿ ಮಾತನಾಡಿ, ಮದುವೆ ಪ್ರತಿಯೊಬ್ಬರ ಜೀವನದ ಮಹತ್ತರ ಘಟ್ಟವಾಗಿದ್ದು, ಇದಕ್ಕಾಗಿ ಅನಗತ್ಯವಾಗಿ ಹಣ ವ್ಯರ್ಥ ಮಾಡುವ ಅಗತ್ಯವಿಲ್ಲ. ಸಾಮೂಹಿಕ ವಿವಾಹದಲ್ಲಿ ಸಂಸಾರ ಜೀವನಕ್ಕೆ ಪಾದಾರ್ಪಣೆ ಆದರ್ಶವಾಗಿದ್ದು, ಇದು ಕುಟುಂಬಕ್ಕೆ ಮಾತ್ರವಲ್ಲದೆ ದೇಶದ ಅಭಿವೃದ್ಧಿಗೂ ಸಹಕಾರಿಯಾಗುತ್ತದೆ ಎಂದು ಹೇಳಿದರು. ಜೊತೆಗೆ ಮಿತ ಸಂತಾನ ಹಾಗೂ ಮಕ್ಕಳ ಶಿಕ್ಷಣಕ್ಕೆ ಹೆಚ್ಚಿನ ಪ್ರಾಮುಖ್ಯತೆ ನೀಡಬೇಕು ಎಂದು ಸಲಹೆ ನೀಡಿದರು.

ಈ ವೇಳೆ ಯಲಬುರ್ಗಾ ಶ್ರೀಧರ ಮಠದ ಬಸವಲಿಂಗ ಶಿವಚಾರ್ಯರು, ಕುಕನೂರಿನ ಅನ್ನದಾನೇಶ್ವರ ಶಾಖಾ ಮಠದ ಮಹಾದೇವ ಸ್ವಾಮೀಜಿ ಮಲ್ಲನಕೇರಿಯ ಸ್ವಾಮೀಜಿ ಗುದ್ನೇಶ್ವರ ಮಠದ ಗುರು ಹಿರಿಯರು ಯುವಕ ಮಿತ್ರರು ತಾಯಂದಿರು ಉಪಸ್ಥಿತರಿದ್ದರು.

# ಅನುಭವ ಮಂಟಪಕ್ಕೆ ಅನುದಾನ : ಭಾಲ್ಕಿ ಶ್ರೀಗಳು ಸಂತಸ



ಭಾಲ್ಕಿ, ಶರಣರ ನಡೆದಾಡಿದ ಭೂಮಿ ಬಸವಕಲ್ಯಾಣದಲ್ಲಿ ನೂತನವಾಗಿ ನಿರ್ಮಾಣ ಆಗುತ್ತಿರುವ ಅನುಭವ ಮಂಟಪ ಕಟ್ಟಡ ನಿರ್ಮಾಣ ಕಾಮಗಾರಿಗೆ ರಾಜ್ಯ ಸರಕಾರ ಹೆಚ್ಚುವರಿಯಾಗಿ 50 ಕೋಟಿ ರೂ ಬಿಡುಗಡೆ ಮಾಡಿರುವುದು ಸಂತಸ ತರಿಸಿದೆ ಎಂದು ಅನುಭವ ಮಂಟಪದ ಅಧ್ಯಕ್ಷ ನಾಡೋಜ ಡಾ.ಬಸವಲಿಂಗ ಪಟ್ಟದ್ದೇವರು, ಪೀಠಾಧಿಪತಿ ಗುರುಬಸವ ಪಟ್ಟದ್ದೇವರು ಸಂತಸ ವ್ಯಕ್ತಪಡಿಸುತ್ತಾರೆ.

ಜಿಲ್ಲಾ ಉಸ್ತುವಾರಿ ಸಚಿವ ಈಶ್ವರ ಖಂಡ್ರೆ ಅವರು ಈ ಹಿಂದೆ ಸಿಎಂ ಸಿದ್ದರಾಮಯ್ಯ ಅವರ 1.0 ಸರಕಾರದಲ್ಲಿ ಉಸ್ತುವಾರಿ ಸಚಿವರಿದ್ದ ಸಂದರ್ಭದಲ್ಲಿ ಅನುಭವ ಮಂಟಪ ಕಟ್ಟಡ ನಿರ್ಮಾಣದ ನೀಲನಕ್ಷೆ ಸಿದ್ಧಪಡಿಸಿದ್ದರು. ಇದೀಗ ಸಿಎಂ ಸಿದ್ದರಾಮಯ್ಯನವರ 2.0 ಸರಕಾರದಲ್ಲಿ ಜಿಲ್ಲಾ ಉಸ್ತುವಾರಿ ಸಚಿವರಾಗಿ ಈಶ್ವರ ಖಂಡ್ರೆ ಅವರು ಮುಂದುವರೆದು ಅನುಭವ ಮಂಟಪಕ್ಕೆ ಅನುದಾನದ ಕೊರತೆ ಆಗದಂತೆ ನೋಡಿ–ಕೊಂಡಿದ್ದಾರೆ. ಅದರಂತೆ ಇದೀಗ ಸಿಎಂ ಅವರನ್ನು ಖಂಡ್ರೆ ಅವರು ಮನವೊಲಿಸಿ ಹೆಚ್ಚುವರಿಯಾಗಿ ಅನುಭವ ಮಂಟಪಕ್ಕೆ 50 ಕೋಟಿ ರೂ ಬಿಡುಗಡೆ ಮಾಡಿಸಿರುವುದು ಸಂತಸದ ಸಂಗತಿ.

ಮುಂದಿನ ಬಸವ ಜಯಂತಿ ವೇಳೆಗೆ ಅನುಭವ ಮಂಟಪದ ಕಾಮಗಾರಿ ಪೂರ್ಣಗೊಳಿಸಿ ಲೋಕಾರ್ಪಣೆ ಮಾಡುವುದಾಗಿ ಖಂಡ್ರೆ ಅವರು ತಿಳಿಸಿದ್ದಾರೆ. ಅದರಂತೆ ಆದಷ್ಟು ಬೇಗ ಕಾಮಗಾರಿ ಪೂರ್ಣಗೊಳಿಸಿ ಅನುಭವ ಮಂಟಪ ಲೋಕಾರ್ಪಣೆಗೊಳಿಸಿ ಬಸವ ಭಕ್ತರಿಗೆ ಅನುಕೂಲ ಮಾಡಿಕೊಡಬೇಕು ಎಂದು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ನಗನೂರು ಶರಣಬಸವೇಶ್ವರರ ಪುರಾಣ ಆರಂಭ

# ಪುರಾಣ ಆಲಿಸುವುದರಿಂದ ಮನಸು ಶುದ್ಧಿ



• ಮಲ್ಲಮ್ಮ ನುಡಿ ವಾರ್ತೆ ಕೆಂಭಾವಿ

ಪುರಾಣ ಆಲಿಸುವುದರಿಂದ ಮನಸ್ಸಿಗೆ ನೆಮ್ಮದಿ, ಉಲ್ಲಾಸ ದೊರೆಯುತ್ತದೆ ಎಂದು ಪುರಾಣಿಕ ವೆ.ಮೂ. ಸೂರ್ಯಕಾಂತಯ್ಯ ಶಾಸ್ತ್ರಿಗಳು ದುತ್ತರಗಾಂವ್ ಕಲಬುರಗಿ ಹೇಳಿದರು.

ಪಟ್ಟಣ ಸಮೀಪದ ನಗನೂರ ಗ್ರಾಮದ ಆರಾಧ್ಯ ದೈವ ಶ್ರೀ ಶರಣಬಸವೇಶ್ವರರ 179ನೇ ಜಾತ್ರಾ ಮಹೋತ್ಸವದ ಅಂಗವಾಗಿ ಹಮ್ಮಿಕೊಂಡಿದ್ದ ಪುರಾಣ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ಭಗವಂತನ ಒಲುಮೆಗೆ ನಿರ್ಮಲ ಭಕ್ತಿ ಬೇಕು ಹಾಗೂ ಸಂತಸದ ಬದುಕಿಗೆ ಗುರುವಿನ ಮಾರ್ಗದರ್ಶನ ಬೇಕು. ಪುರಾಣವೆಂದರೆ ಜನರನ್ನು ಭಕ್ತಿ ಮಾರ್ಗದಲ್ಲಿ ನಡೆಸುವುದರ ಜತೆಗೆ ಆತನಲ್ಲಿಯ ದುರ್ಗುಣಗಳನ್ನು ತೊಡೆದು ಹಾಕುವುದೆ ಆಗಿದೆ ಎಂದರು.

ಪುರಾಣದಿಂದ ಮನುಷ್ಯನ ಮಾನಸಿಕ ಸ್ಥಿತಿ ಸಮತೋಲನಕ್ಕೆ ಬರುವುದಲ್ಲದೇ, ಆಧ್ಯಾತ್ಮಕತೆ ಒಲವು ಮೂಡಲಿದೆ. ಭಗವಂತ ಯಾವತ್ತೂ ಅಂತರಂಗದ ಭಕ್ತಿಗೆ ಒಲಿಯುತ್ತಾನೆ, ಮನೆಯಿಂದಲೇ ಸಂಸ್ಕಾರ ನೀಡುವ ಕಾರ್ಯ ನಡೆಯಬೇಕು ಎಂದ ಅವರು, ಆಧ್ಯಾತ್ಮಿಕ ಪುರಾಣ ಪ್ರವಚನಗಳು ಪ್ರತಿಯೊಬ್ಬರ ಜೀವನಕ್ಕೆ ಬೆಳಕು ನೀಡಬಲ್ಲವು ಎಂದರು.

ಷ.ಬ್ರ. ಶ್ರೀ ಸೂಗೂರೇಶ್ವರ ಶಿವಾಚಾರ್ಯರು ಕಾರ್ಯಕ್ರಮ ಉದ್ಘಾಟಿಸಿದರು. ಶ್ರೀ ಶರಣಬಸವೇಶ್ವರ ದಾಸೋಹ ಮಠದ ಪೀಠಾಧಿಪತಿ ಪೂಜ್ಯ ಶರಣಪ್ಪ ಶರಣರು ಕಾರ್ಯಕ್ರಮದ ನೇತೃತ್ವವಹಿಸಿದ್ದರು.

**ತನು, ಮನದಿಂದ ಸೇವೆ ಸಲ್ಲಿಸಿ**

“ ಮಠ ಮಂದಿರಗಳಿಗೆ ಭೌತಿಕ ಆಸ್ತಿಗಿಂತ ಭಕ್ತರೆ ದೊಡ್ಡ ಆಸ್ತಿ. ಆದ್ದರಿಂದ ಶ್ರೀ ಶರಣಬಸವೇಶ್ವರರ ಪುರಾಣ, ಜಾತ್ರಾ ಮಹೋತ್ಸವದ ಯಶಸ್ವಿಗೆ ಪ್ರತಿಯೊಬ್ಬರೂ ತನು, ಮನದಿಂದ ಸೇವೆ ಸಲ್ಲಿಸಬೇಕು ಎಂದು ಜಿಲ್ಲಾ ಪಂಚಾಯಿತಿ ಮಾಜಿ ಉಪಾಧ್ಯಕ್ಷ ಶಂಕ್ರಣ್ಣ ವಣಿಕ್ಯಾಳ ಹೇಳಿದರು. ಪುರಾಣ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ಮಠ, ಮಂದಿರಗಳು ಭಕ್ತರಿಗೆ ಶ್ರದ್ಧಾಕೇಂದ್ರಗಳಾಗಿ ಅವರನ್ನು ಸನ್ಮಾರ್ಗದಲ್ಲಿ ನಡೆಯಲು ಪ್ರೇರೇಪಣೆ ನೀಡುತ್ತಿವೆ ಎಂದು ಹೇಳಿದರು.

ಈ ಸಂದರ್ಭದಲ್ಲಿ ಆನಂದಸ್ವಾಮಿ ಚಾಮನಾಳ, ಜಿಪಂ ಮಾಜಿ ಉಪಾಧ್ಯಕ್ಷ ಶಂಕ್ರಣ್ಣ ವಣಿಕ್ಯಾಳ, ಮುಖಂಡರಾದ ಸಿದ್ದಣ್ಣ ಸಾಹು ಗೂಗಲ್, ವೀರಯ್ಯಸ್ವಾಮಿ ಸ್ಥಾವರಮಠ, ಸದಾಶಿವರೆಡ್ಡಿ ದೇಸಾಯಿ, ಭೋಜಪ್ಪಗೌಡ ಪೊಲೀಸ್ ಪಾಟೀಲ, ಶಾಂತನಂದ ದೇಸಾಯಿ, ಗೊಲ್ಲಾಳಪ್ಪ ತಿಪ್ಪಶೆಟ್ಟಿ, ಶಿವಶಂಕರ ತಿಪ್ಪಶೆಟ್ಟಿ, ಹಳ್ಳೆಪ್ಪ ಹವಾಲ್ದಾರ, ರಾಮಣ್ಣ ದೇಶಪಾಂಡೆ,

ಪ್ರಕಾಶಬಾಬು ಪೊಲೀಸ್ ಪಾಟೀಲ, ರಾಹುಸಾಬ ದೇಸಾಯಿ, ಚನ್ನಾರೆಡ್ಡಿ ದೇಸಾಯಿ, ಗುರಣ್ಣ ಸಾಹು ಚಾಮನಾಳ, ನಗನೂರ, ಖಾನಾಪೂರ ಸೇರಿದಂತೆ ಸುತ್ತಲಿನ ಗ್ರಾಮಗಳ ಭಕ್ತರು ಭಾಗವಹಿಸಿದ್ದರು.

ಜಗದೀಶ ಶರಣರು ಪುರಾಣ ವಾಚಿಸಿದರು. ಶ್ರೀಮಂತ ತಿಪ್ಪಶೆಟ್ಟಿ ಸ್ವಾಗತಿಸಿ, ವಂದಿಸಿದರು. ವಿರೇಶಕುಮಾರ ಕೆಂಭಾವಿ, ಸೋಮಶೇಖರ ಮುದನೂರ ಅವರಿಂದ ಸಂಗೀತ ಸೇವೆ ಜರುಗಿತು. ಶಾಂತನಂದ ಲಕ್ಕುಂಡಿ ಅವರು ಪ್ರಸಾದ ಸೇವೆ ಸಲ್ಲಿಸಿದರು.

## ಪೆಟ್ರೋಲ್ ಡೀಸೆಲ್ ಕೊರತೆ: ವದಂತಿಗೆ ಸಾರ್ವಜನಿಕರಲ್ಲಿ ಆತಂಕ




• ಮಲ್ಲಮ್ಮ ನುಡಿ ವಾರ್ತೆ ಗುರುಮಠಕಲ್

ಪಟ್ಟಣದಲ್ಲಿ ಪೆಟ್ರೋಲ್ ಮತ್ತು ಡೀಸೆಲ್ ಕೊರತೆ ಉಂಟಾಗಿದೆ ಎಂಬ ವದಂತಿ ಹರಡುತ್ತಿರುವ ಹಿನ್ನೆಲೆ ಸಾರ್ವಜನಿಕರಲ್ಲಿ ಬುಧವಾರ ಆತಂಕದ ವಾತಾವರಣ ನಿರ್ಮಾಣವಾಯಿತು. ಸಾಮಾಜಿಕ ಜಾಲತಾಣಗಳಲ್ಲಿ ಹರಿದಾಡುತ್ತಿರುವ ಸಂದೇಶಗಳಿಂದ ಹಲವರು ಇಂಧನ ತುಂಬಿಸಿಕೊಳ್ಳಲು ಪೆಟ್ರೋಲ್ ಬಂಕ್‌ಗಳಿಗೆ ದೊಡ್ಡ ದೊಡ್ಡ ಡಬ್ಬಗಳೊಂದಿಗೆ ಧಾವಿಸುತ್ತಿರುವುದು ಎಲ್ಲಾ ಪೆಟ್ರೋಲ್ ಬಂಕ್ ಗಳಲ್ಲಿ ಕಂಡುಬಂದಿದೆ.ಆದರೆ ಅಧಿಕಾರಿಗಳು ಸ್ಪಷ್ಟಪಡಿಸಿರುವಂತೆ, ರಾಜ್ಯದಲ್ಲಿ ಇಂಧನದ ಯಾವುದೇ ಕೊರತೆ ಇಲ್ಲ. ಪೂರೈಕೆ ಸಹಜವಾಗಿ ನಡೆಯುತ್ತಿದ್ದು, ಜನರು ವದಂತಿಗಳಿಗೆ ಕಿವಿಗೊಡದೆ ಶಾಂತವಾಗಿರಬೇಕು ಬಂಕ್ ಗಳಿಗೆ ತೆರಳಿ ಸಾರ್ವಜನಿಕರಿಗೆ ಮನವಿ ಮಾಡಿದರು.

ಅವಸರದಲ್ಲಿ ಅನಗತ್ಯವಾಗಿ ಇಂಧನ ಸಂಗ್ರಹಿಸುವುದರಿಂದ ತಾತ್ಕಾಲಿಕ ತೊಂದರೆ ಉಂಟಾಗುವ ಸಾಧ್ಯತೆ ಇರುವುದರಿಂದ, ಸಾರ್ವಜನಿಕರು ಜವಾಬ್ದಾರಿಯುತವಾಗಿ ವರ್ತಿಸಬೇಕು ಎಂದು ಆಹಾರ ಇಲಾಖೆ ಹಾಗೂ ಪೊಲೀಸ್ ಇಲಾಖೆಯ ಅಧಿಕಾರಿಗಳು ಸೂಚನೆ ನೀಡಿದರು, ಬಂಕ್ ಮಾಲಿಕರಿಗೆ ಕೇವಲ ವಾಹನಗಳಿಗೆ ಮಾತ್ರ ಪೆಟ್ರೋಲ್ ಡೀಸೆಲ್ ಹಾಕಲು ಡಬ್ಬಗಳಿಗೆ ಹಾಕದಂತೆ ಸೂಚನೆ ನೀಡಿದರು.



ಬಸವಕಲ್ಯಾಣ: ತಾಲೂಕಿನ ಕೋಹಿನೂರ ಗ್ರಾಮದ ಹೊರವಲಯದಲ್ಲಿರುವ ಶ್ರೀ ಮಹಾಲಕ್ಷ್ಮಿ ದೇವಿ 23ನೇ ಜಾತ್ರಾ ಮಹೋತ್ಸವ ನಿಮಿತ್ಯ ಹಾರಕೂಡದ ಪೂಜ್ಯಶ್ರೀ ಡಾ. ಚನ್ನವೀರ ಶಿವಾಚಾರ್ಯರು ರಥಕ್ಕೆ ಪೂಜೆ ಸಲ್ಲಿಸಿ ರಥೋತ್ಸವಕ್ಕೆ ಚಾಲನೆ ನೀಡಿದರು. ಇದೇ ಸಂದರ್ಭದಲ್ಲಿ ಪೂಜ್ಯಶ್ರೀ ಪ್ರಭು. ಹಾಗೂ ಶ್ರೀ ಅಕ್ಕನವರು, ಮಲ್ಲಿನಾಥ ಹಿರೇಮಠ ಹಾರಕೂಡ, ಶಿವಶರಣಪ್ಪ ಸಂತಾಜಿ, ರತಿಕಾಂತ ಕೋಹಿನೂರ, ಸೂರ್ಯಕಾಂತ ಪಾಟೀಲ ಮುಂತಾದವರು ಉಪಸ್ಥಿತರಿದ್ದರು.(ಮಲ್ಲಮ್ಮ ನುಡಿ ಚಿತ್ರ).

## ಟಿಬಿ ಮುಕ್ತ ಭಾರತ ನಮ್ಮೆಲ್ಲರ ಹೊಣೆ: ಖಾಜಾ ಮೊಹಿನುದ್ದೀನ್




• ಮಲ್ಲಮ್ಮ ನುಡಿ ವಾರ್ತೆ ಲಿಂಗಸುಗೂರು

ತಾಲೂಕು ಸಾರ್ವಜನಿಕ ಆಸ್ಪತ್ರೆಯಲ್ಲಿ ವಿಶ್ವ ಕ್ಷಯರೋಗ ದಿನಾಚರಣೆಯನ್ನು

ಆಚರಿಸಲಾಯಿತು.ಕಾರ್ಯಕ್ರಮ ಲ್ಲಿ ಸಾರ್ವಜನಿಕರನ್ನು ಉದ್ದೇಶಿಸಿ ಮಾತನಾಡಿದ ಹಿರಿಯ ತಜ್ಞವೈದ್ಯರಾದ ಡಾ: ಖಾಜಾ ಮೊಹಿನುದ್ದೀನ್ ಅವರು ನಾಗರಿಕರು ಕ್ಷಯ ಮುಕ್ತ ಕರ್ನಾಟಕ ಅಭಿಯಾನದಲ್ಲಿ ಸಕ್ರಿಯವಾಗಿ ಪಾಲ್ಗೊಂಡು ಕ್ಷಯರೋಗ ನಿರ್ಮೂಲನೆಗೆ ಸಹಕರಿಸಬೇಕು. ಎರಡು ವಾರಗಳ ಕೆಮ್ಮು ,ಸಾಯಂಕಾಲದ ಜ್ವರ ಇರುವವರು ಸರಕಾರಿ ಆಸ್ಪತ್ರೆಗೆ ಬಂದು ಉಚಿತ ತಪಾಸಣೆ ,ಸೇವೆ ಮತ್ತು ಔಷಧ ಉಪಚಾರಗಳನ್ನು ಪಡೆಯಬೇಕು.

ಕ್ಷಯರೋಗಿಗಳಿಗೆ ಪೌಷ್ಟಿಕ ಆಹಾರ ನೆರವು ನೀಡಲು ನಿಕ್ಷಯ ಮಿತ್ರ ರಾಗಲು ಜನರು ಮುಂದೆ ಬಂದು ಆರೋಗ್ಯ ಸೇವೆ ಒದಗಿಸುವಂತೆ ಸಹಕರಿಲು ಕರೆನೀಡಿದರು.ಈ ವರ್ಷದ ಘೋಷಣೆ ಯಾದ...

" ಹೌದು ಭಾರತದ ನೇತೃತ್ವದಲ್ಲಿ ಜನರ ಶಕ್ತಿಯೊಂದಿಗೆ ನಾವು ಕ್ಷಯರೋಗ ವನ್ನು ನಿರ್ಮೂಲನೆ ಮಾಡಬಹುದು "

ನಮ್ಮ ಮನೆ ,ಓಣಿ,ಊರುಗಳಲ್ಲಿ ಇರುವ ಎರಡು ವಾರಗಳಿಗೆ ಮೇಲ್ಪಟ್ಟು ಕೆಮ್ಮು,ಜ್ವರ ಇರುವವರನ್ನು ಆಸ್ಪತ್ರೆಗೆ ಕರೆತರಲು ವಿನಂತಿಸಲಾಯಿತು. ಈ ಸಂದರ್ಭದಲ್ಲಿ ಡಾ; ಇಕ್ಬಾಲ್. ಆರೋಗ್ಯ ಶಿಕ್ಷಣಾಧಿಕಾರಿ ಪ್ರಾಣೇಶ್. ಕ್ಷಯ ರೋಗ ಮೇಲ್ವಿಚಾರಕ ರವಿಕುಮಾರ ಹೂಗಾರ್. ಕ್ಷಯ ರೋಗ ಸಂದರ್ಶಕ ಅಮರೇಶ ಎಲಿಗಾರ. ಪ್ರಭಾರ ಎಲ್.ಹೆಚ್.ವಿ ನಾಗರತ್ನ .ಆಸ್ಪತ್ರೆಯ. ರಾಜಶೇಖರ.ಮೌನೇಶ.ಹಾಗೂ ಸಾರ್ವಜನಿಕರು ಭಾಗವಹಿಸಿದ್ದರು.

## ದವನದ ಹುಣ್ಣಿಮೆ ಜಾತ್ರಾ ಮಹೋತ್ಸವ




• ಮಲ್ಲಮ್ಮ ನುಡಿ ವಾರ್ತೆ ಯಾದಗಿರಿ

ಯಾದಗಿರಿ ನಗರದ ಹೊರವಲಯದ ವೀರೇಶ್ವರ ನಗರದಲ್ಲಿರುವ ಪುಣ್ಯಕ್ಷೇತ್ರ ಶ್ರೀ ದಾಸಬಾಳಧೀಶ್ವರ ಮಠದಲ್ಲಿ ಏಪ್ರಿಲ್ 2ರಂದು ದವನದ ಹುಣ್ಣಿಮೆಯ ಪ್ರಯುಕ್ತ ಅದ್ದೂರಿ ಜಾತ್ರಾ ಮಹೋತ್ಸವ ಹಮ್ಮಿಕೊಳ್ಳಲಾಗಿದೆ. ಈ ಕಾರ್ಯಕ್ರಮದ ಆಮಂತ್ರಣ ಪತ್ರಿಕೆಯನ್ನು ಮಠದ ಪೀಠಾಧಿಪತಿಗಳಾದ ಶ್ರೀ ವೀರೇಶ್ವರ ಸ್ವಾಮೀಜಿ ಅವರು ಅಧಿಕೃತವಾಗಿ ಬಿಡುಗಡೆ ಮಾಡಿದರು.

ಜಾತ್ರಾಮಹೋತ್ಸವದ ಅಂಗವಾಗಿ ದಿನವಿಡೀ ವಿವಿಧ ಧಾರ್ಮಿಕ ಹಾಗೂ ಸಾಂಸ್ಕೃತಿಕ ಕಾರ್ಯಕ್ರಮಗಳು ಜರುಗಲಿವೆ

ಬೆಳಿಗ್ಗೆ 7:30ಕ್ಕೆ: ಶ್ರೀ ಪಂಚಮುಖಿ ಹನುಮಾನ ದೇವರಿಗೆ ವಿಶೇಷ ರುದ್ರಾಭಿಷೇಕ ಹಾಗೂ ಶ್ರೀ ಶಂಕ್ರಮ್ಮದೇವಿಗೆ ಉಡಿ ತುಂಬುವ ಮಂಗಳಕರ ಕಾರ್ಯಕ್ರಮ ನಡೆಯಲಿದೆ.

ಬೆಳಿಗ್ಗೆ 10:30ಕ್ಕೆ: ನಾಡಿನ ವಿವಿಧ ಮಠಾಧೀಶರ ಹಾಗೂ ಪರಮಪೂಜ್ಯರುಗಳ ದಿವ್ಯ ಸಾನಿಧ್ಯದಲ್ಲಿ "ಭಾವೈಕ್ಯತಾ ಧರ್ಮಸಭೆ" ಆಯೋಜಿಸಲಾಗಿದೆ.

ಸಾಯಂಕಾಲ 6:30ಕ್ಕೆ: ಶ್ರೀ ವೀರಭದ್ರ ದೇವರ ವೀರಗಾಸೆ ಕುಣಿತದ ಭವ್ಯ ಮೆರವಣಿಗೆಯೊಂದಿಗೆ ಪಂಚತನಾರತಿ ಕಾರ್ಯಕ್ರಮ ಸಂಪನ್ನಗೊಳ್ಳಲಿದೆ.

ನಗರಸಭೆ ಮಾಜಿ ಸದಸ್ಯರಾದ ಸ್ವಾಮಿದೇವದಾಸನಕೇರಿ ಅವರು, ಮಾತನಾಡಿ, "ದಾಸಬಾಳ ಮಠವು ಕೇವಲ ಧಾರ್ಮಿಕ ಕೇಂದ್ರವಲ್ಲದೆ, ಸಾಮಾಜಿಕವಾಗಿ ಜನರನ್ನು ಒಗ್ಗೂಡಿಸುವ ಮತ್ತು ಸಮಾಜದ ಏಳಿಗೆಗಾಗಿ ಶ್ರಮಿಸುತ್ತಿರುವ ಪವಿತ್ರ ಕೇಂದ್ರವಾಗಿದೆ" ಎಂದು ಮಠದ ಸೇವೆಯನ್ನು ಶ್ಲಾಘಿಸಿದರು.

ಈ ಸಂದರ್ಭದಲ್ಲಿ ಪ್ರಮುಖರಾದ ಪರಶುರಾಮ ಕುರಕುಂದಾ, ಸದಾಶಿವರೆಡ್ಡಿ ಬೆಳಗೆರಿ ಸೇರಿದಂತೆ ಮಠದ ಭಕ್ತಾದಿಗಳು ಉಪಸ್ಥಿತರಿದ್ದರು. ಭಕ್ತಾದಿಗಳು ಹೆಚ್ಚಿನ ಸಂಖ್ಯೆಯಲ್ಲಿ ಪಾಲ್ಗೊಂಡು ದಾಸಬಾಳಧೀಶ್ವರರ ಕೃಪೆಗೆ ಪಾತ್ರರಾಗಬೇಕೆಂದು ಮಠದ ಸಮಿತಿ ವಿನಂತಿಸಿದೆ.

# ಸರ್ಕಾರ ಸಾಧನೆ ಜನರಿಗೆ ತಿಳಿಸಿ: ಯರಗೋಳ



• ಮಲ್ಲಮ್ಮ ನುಡಿ ವಾರ್ತೆ ಯಾದಗಿರಿ

ಗುರುಮಿಠಕಲ್ ಕ್ಷೇತ್ರದಲ್ಲಿ ಶಾಸಕರು ನಮ್ಮ ಕೆಲ ಕಾರ್ಯಕರ್ತರಿಗೆ ಆಮಿಷಗಳನ್ನು ಒಡ್ಡುವ ಮೂಲಕ ಪಕ್ಷಕ್ಕೆ ಸೇರಿಸಿಕೊಳ್ಳುತ್ತಿದ್ದಾರೆ. ಅದಕ್ಕಾಗಿ ಕೈ ನಾಯಕರೆಲ್ಲರೂ ಒಗ್ಗಟ್ಟಾಗಿ ಕಾಂಗ್ರೆಸ್ ಸರ್ಕಾರದ ಸಾಧನೆಗಳನ್ನು ಜನರಿಗೆ ತಿಳಿಸುವ ಮೂಲಕ ಜಾಗೃತಿ ಮೂಡಿಸಿ ಎಂದು ಹಿಂದುಳಿದ ವರ್ಗಗಳ ಆಯೋಗದ ಮಾಜಿ ಸದಸ್ಯರಾದ ಶರಣಪ್ಪ ಮಾನೇಗಾರ ಯರಗೋಳ ಹೇಳಿದರು. ಗುರುಮಿಠಕಲ್ ಮತಕ್ಷೇತ್ರದ ಅಲ್ಲಿಪೂರ ಗ್ರಾಮದಲ್ಲಿ ಹಮ್ಮಿಕೊಂಡಿದ್ದ ಕಾಂಗ್ರೆಸ್ ಪಕ್ಷ–ಕ್ಕೆ ಸೇರ್ಪಡೆ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು ಜೆಡಿಎಸ್ –ಬಿಜೆಪಿ ಕಾರ್ಯಕರ್ತರನ್ನು ಪಕ್ಷಕ್ಕೆ ಸೇರ್ಪಡೆ ಮಾಡಿಕೊಳ್ಳುವ ಮೂಲಕ ತಿರುಗೇಟು ನೀಡುತ್ತಿದ್ದೇವೆ. ನಾವು ಕಾರ್ಯಕರ್ತರ ಸಂಕಷ್ಟಗಳಿಗೆ ಸದಾ ಸ್ಪಂದಿಸುವ ಮೂಲಕ ಗಟ್ಟಿಯಾಗಿ ಪಕ್ಷವನ್ನು ಕಟ್ಟುತ್ತಿದ್ದೇವೆ. ಬರುವ ದಿನಗಳಲ್ಲಿ ಕ್ಷೇತ್ರದ ನಾನಾ ಭಾಗಗಳಿಂದ 20 ಸಾವಿರಕ್ಕೂ ಅನ್ಯ ಪಕ್ಷದ ಕಾರ್ಯಕರ್ತರು ಕಾಂಗ್ರೆಸ್ ಪಕ್ಷ ಸೇರ್ಪಡೆಗೊಳ್ಳಲಿದ್ದಾರೆ. ನೀವು ಯಾವುದೇ ಕಾರಣಕ್ಕೂ ಬೆದರಿಕೆಗಳಿಗೆ ಹೆದರದೇ ಪಕ್ಷ ಸಂಘಟನೆಗೆ ನಿಮ್ಮದೇ ಯಾದ ಕೊಡುಗೆ ನೀಡಿ ಎಂದು ಮನವಿ ಮಾಡಿದರು. ಜಿಲ್ಲಾಧ್ಯಕ್ಷ ಬಸರೆಡ್ಡಿ ಎಂ ಪಾಟೀಲ ಅನಪುರ ಎಐಸಿಸಿ ಅಧ್ಯಕ್ಷ ಡಾ. ಮಲ್ಲಿಕಾರ್ಜುನ ಖರ್ಗೆ, ಮಾಜಿ ಸಚಿವ ಬಾಬುರಾವ್ ಚಿಂಚನಸೂರ ಅವಧಿಯಲ್ಲಿ ಗುರುಮಿಠಕಲ್ ಮತಕ್ಷೇತ್ರಕ್ಕೆ ಹೊಸ ಕಾಯಕಲ್ಪ ನೀಡಿದರು, ಆದರೆ ನಾನಾ ಕಾರಣಗಳಿಂದ ನಾವು ಎರಡು ವಿಧಾನಸಭಾ ಚುನಾವಣೆಯಲ್ಲಿ ನಮ್ಮ ಅಭ್ಯರ್ಥಿ ಪರಾಜಯಗೊಂಡರು, ಆದರೂ ಕ್ಷೇತ್ರದಲ್ಲಿರುವ ಎಲ್ಲಾ ನಾಯಕರು, ಕಾರ್ಯಕರ್ತರು ಒಗ್ಗಟ್ಟಾಗಿ ಕೂಡಿ ಬರುವ ವಿಧಾನಸಭಾ ಚುನಾವಣೆಯಲ್ಲಿ ಕ್ಷೇತ್ರದಲ್ಲಿ ಕಾಂಗ್ರೆಸ್ ಪಕ್ಷದ ಅಭ್ಯರ್ಥಿ ಯಾರೇ ಆದರೂ ಅವರನ್ನು ಗೆಲ್ಲಿಸುವುದೇ ನಮ್ಮ ಮುಂದಿನ ಗುರಿಯಾಗಿದೆ ಎಂದು ಜಿಲ್ಲಾ ಅಧ್ಯಕ್ಷ ಬಸರೆಡ್ಡಿ ಎಂ ಪಾಟೀಲ ಅನಪುರ ಅವರು ಹೇಳಿದರು. ರಾಜ್ಯದಲ್ಲಿ ಮುಖ್ಯಮಂತ್ರಿ ಸಿದ್ಧರಾಮಯ್ಯನವರು ಎಲ್ಲಾ ವರ್ಗದ ಜನರಿಗೆ ಜನಪರ ಯೋಜನೆಗಳನ್ನು ನೀಡಿ ನುಡಿದಂತೆ ನಡೆದಿದ್ದಾರೆ, ನಾವು ಕೂಡ ಕ್ಷೇತ್ರದಲ್ಲಿ ಸರ್ಕಾರದ ಯೋಜನೆಗಳ ಲಾಭ ಜನರಿಗೆ ತಲುಪಿಸಲು ಪ್ರಾಮಾಣಿಕ ಪ್ರಯತ್ನ ಮಾಡುತ್ತಿದ್ದೇವೆ, ಈಗಾಗಲೇ ಜೆಡಿಎಸ್ ಶಾಸಕರ ಕಾರ್ಯವೈಕರಿ ಗಮನಿಸಿ ಜೆಡಿಎಸ್–ಬಿಜೆಪಿ ಕಾರ್ಯಕರ್ತರು ಹೆಚ್ಚಿನ ಸಂಖ್ಯೆಯಲ್ಲಿ ಕಾಂಗ್ರೆಸ್ ಪಕ್ಷವನ್ನು ಸೇರ್ಪಡೆಯಾಗುತ್ತಿದ್ದಾರೆ. ಇದು ಒಳ್ಳೆಯ ಬೆಳವಣಿಗೆ ಎಲ್ಲರೂ ಕೂಡಿ ಒಗ್ಗಟ್ಟಾಗಿ ಪಕ್ಷ ಸಂಘಟಿಸಿ ಎಂದು ಮನವಿ ಮಾಡಿದರು.

ಜೆಡಿಎಸ್ ಪಕ್ಷ ತಂದೆ ಮಕ್ಕಳ ಪಕ್ಷವಾಗಿದೆ ರಾಜ್ಯದಲ್ಲಿ ನಮ್ಮ ಸರ್ಕಾರ ವಿರುವದರಿಂದ ಕಾರ್ಯಕರ್ತರಿಗೆ ಕೆಲಸ ನೀಡಬೇಕು ಜೊತೆಗೆ ಗ್ರಾಮೀಣ ಭಾಗದಲ್ಲಿ ಜನರ ಸಮಸ್ಯೆಗಳಿಗೆ ಪರಿಹಾರ ಸಿಗಬೇಕು ಎಂಬ ದೃಷ್ಟಿಯಿಂದ ಕ್ಷೇತ್ರದ ಎಲ್ಲಾ ನಾಯಕರು ಕೂಡಿ ಸಚಿವ ಪ್ರಿಯಾಂಕ ಖರ್ಗೆಯವರನ್ನು ಭೇಟಿ ಯಾಗಿ ಅಭಿವೃದ್ಧಿಗೆ ಅನುಧಾನ ನೀಡಬೇಕು ಎಂದು ಮನವಿ ಮಾಡಿದೆವು. ಅದಕ್ಕೆ ಅವರು ಈಗಾಗಲೇ 4 ಕೋಟಿ ರೂಪಾಯಿ ಹಣ ಬಿಡುಗಡೆ ಮಾಡಿದ್ದಾರೆ ಎಂದು ತಿಳಿಸಿದರು.

ಗುರುಮಿಠಕಲ್ ಮತಕ್ಷೇತ್ರಕ್ಕೆ ಕೆಕೆಆರ್‌ಡಿಬಿ ಯಿಂದ ಹಾಗೂ ಇನ್ನಿತರ ಯೋಜನೆಗಳ ಮೂಲಕ ಸಾಕಷ್ಟು ಅನುದಾನ ಬಂದಿದೆ ಆದರೆ ಶಾಸಕರು, ಅಭಿವೃದ್ಧಿ ಹೆಸರಿನಲ್ಲಿ ಭ್ರಷ್ಟಾಚಾರ ವೆಸಗಿದ್ದಾರೆ ಎಂದು ಆರೋಪಿಸಿದರು. ಕ್ಷೇತ್ರದಲ್ಲಿ ನಮ್ಮ ಕಾಂಗ್ರೆಸ್ ಕಾರ್ಯಕರ್ತರಿಗೆ ಜೆಡಿಎಸ್ ಶಾಸಕರು ಸಾಕಷ್ಟು ತೊಂದರೆಗಳನ್ನು ನೀಡಿದ್ದಾರೆ. ಬರುವ 2028 ವಿಧಾನಸಭಾ ಚುನಾವಣೆಯಲ್ಲಿ ಬಡ್ಡಿ ಸಮೇತವಾಗಿ ತೀರಿಸುತ್ತೇವೆ ಎಂದು ಗುಡುಗಿದ್ದಾರೆ.

ಜೆಡಿಎಸ್ ಶಾಸಕರು ಕೇವಲ ಕಾಮಗಾರಿಗಳಲ್ಲಿ ಹೆಚ್ಚಿನ ಪರ್ಸಂಟೇಜ್ ಲಂಚ ಪಡೆಯುವಲ್ಲಿ ನಿರತರಾಗಿದ್ದಾರೆ. ಹಣ ನೀಡದ ಕೆಲ ಅಧಿಕಾರಿಗಳನ್ನು ಬೆದರಿಸುತ್ತಿದ್ದಾರೆ ಎಂದು ಟೀಕಿಸಿದರು.

ಮಾಜಿ ಸಚಿವ ಹಾಗೂ ನಿಜ ಶರಣ ಅಂಬಿಗರ ಚೌಡಯ್ಯ ಅಭಿವೃದ್ಧಿ ನಿಗಮದ ರಾಜ್ಯಾಧ್ಯಕ್ಷ ಬಾಬುರಾವ್ ಚಿಂಚನಸೂರ ಮಾತನಾಡಿ; ನಾನು ಹುಟ್ಟಿರುವುದೇ ಜನರ ಸೇವೆಗಾಗಿ, ಖರ್ಗೆಯವರ ಮಾರ್ಗದರ್ಶನದಲ್ಲಿ 10 ವರ್ಷಗಳ ಕಾಲ ಅಭಿವೃದ್ಧಿ ಕಾರ್ಯ ಮಾಡಿದರು. ವಿರೋಧಪಕ್ಷದ ನಾಯಕರ ಸುಳ್ಳು ಆರೋಪಗಳನ್ನು ನಂಬಿ, ನಾನಾ ಕಾರಣಗಳಿಂದ ನನ್ನನ್ನು ನೀವು ಸೋಲಿಸಿದರು, ನಾನು ಎಂದು ಎದೆಗುಂದುವುದಿಲ್ಲ ಪಕ್ಷದ ಕಾರ್ಯಕರ್ತರ ಹಾಗೂ ಮತದಾರರ ಸಮಸ್ಯೆಗಳಿಗೆ ಸದಾ ದ್ವನಿಯಾಗಿ ಸ್ಪಂದಿಸುವೆ ಎಂದು ಹೇಳಿದರು.

ಕ್ಷೇತ್ರದ ಕಾಂಗ್ರೆಸ್ ಉಸ್ತುವಾರ ರಾಜಗೋಪಾಲರೆಡ್ಡಿ ಮುದಿರಾಜ್, ಸಾಯಿಬಣ್ಣ ಬೋರಬಂಡ ಹಾಗೂ ನ್ಯಾಯವಾದಿ ಚಂದ್ರಶೇಖರ ಅಲ್ಲಿಪೂರ ಮಾತನಾಡಿ ಗುರುಮಿಠಕಲ್ ಮತಕ್ಷೇತ್ರದಲ್ಲಿ ಪಕ್ಷದ ನಾಯಕರು ಈ ಹಿಂದೆ ಕೈಗೊಂಡ ಅಭಿವೃದ್ಧಿ ಕಾರ್ಯಗಳನ್ನು ವಿವರಿಸಿ, ಎಲ್ಲಾ ಕಾರ್ಯಕರ್ತರು ಪಕ್ಷ ನಿಷ್ಠರಾಗಿ ಕೆಲಸ ಮಾಡಲು ತಿಳಿಸಿದರು.

ಇದೇ ಸಂದರ್ಭದಲ್ಲಿ 30 ಕ್ಕೂ ಹೆಚ್ಚು ಜೆಡಿಎಸ್ – ಬಿಜೆಪಿ ಪಕ್ಷಗಳ ಕಾರ್ಯಕರ್ತರು ಕಾಂಗ್ರೆಸ್ ಸೇರ್ಪಡೆಗೊಂಡರು.

ವೇದಿಕೆ ಮೇಲೆ ಕೆಪಿಸಿಸಿ ಸದಸ್ಯ ಚಂದ್ರಶೇಖರ ವಾರದ, ಜಿಲ್ಲಾ ಪಂಚ ಗ್ಯಾರಂಟಿಗಳ ಯೋಜನೆ ಅಧ್ಯಕ್ಷ ಶರಣಿಕ್ ಕುಮಾರ ದೋಕಾ, ಬಸವರಾಜಪ್ಪ ಬಾಗ್ಲಿ, ಆಶಪ್ಪ ಗಾಜರಕೋಟ್, ಅನಿಲಕುಮರ ಹೆಡಗಿಮದ್ರಿ, ರಾಜುಗೌಡ ಅರ–ಕೇರಾ ಬಿ., ಬಾಷು ರಾಠೋಡ, ಸುಭಾಶ್ ಗುತ್ತೇದಾರ, ಚನ್ನಬಸಪ್ಪ ಪೂಜಾರಿ, ಬಸವರಾಜ ಬಾಚವಾರ, ಪರಶುರಾಮ್ ಚವ್ಹಾಣ, ಹಣಮಂತ ಖಾನಳ್ಳಿ, ವಿಜಯ ಕಂದಳ್ಳಿ, ಸುರೇಶ ಅಲ್ಲಿಪೂರ, ಹಣಮಂತ ಅಚ್ಚೋಲಾ, ಆಂಜನೇಯ ರಾಂಪೂರ, ಸೇರಿದಂತೆ ಹಲವರು ಉಪಸ್ಥಿತರಿದ್ದರು.

ಗುರುಮಿಠಕಲ್ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಕೃಷ್ಣಾ ಚಪೇಟ್ಲಾ ಸ್ವಾಗತಿಸಿದರು. ಇದಕ್ಕೂ ಮೊದಲು ಕಾಂಗ್ರೆಸ್ ಕಾರ್ಯಕರ್ತರು ಬಾಬುರಾವ್ ಚಿಂಚನಸೂರ್, ಬಸರೆಡ್ಡಿ ಅನಪುರ, ಶರಣಪ್ಪ ಮಾನೇಗಾರ್ ಅವರನ್ನು ಭವ್ಯ ಮೆರವಣಿಗೆ ಮೂಲಕ ವೇದಿಕೆಗೆ ಕರೆ ತಂದರು.

## ಜಲ ಮೂಲಗಳ ಸಂರಕ್ಷಣೆಗೆ ಕಲಿಕೆ ಟಾಟಾ ಟ್ರಸ್ಟ್ ಕೊಡುಗೆ ಅಪಾರ



• ಮಲ್ಲಮ್ಮ ನುಡಿ ವಾರ್ತೆ ಯಾದಗಿರಿ

ಗ್ರಾಮದ ಸಮಗ್ರ ಅಭಿವೃದ್ಧಿ ಹಾಗೂ ಕ್ಷೀಣಿಸುತ್ತಿರುವ ಜಲಮೂಲಗಳ ಸಂರಕ್ಷಣೆಯ ಉದ್ದೇಶದಿಂದ, ಗುರಮೀಠಕಲ್ ತಾಲೂಕಿನ ಕರಣಿಗಿ ಗ್ರಾಮದಲ್ಲಿ ಕೆರೆ ಹೂಳೆತ್ತುವ ಕಾಮಗಾರಿಗೆ ಚಾಲನೆ ನೀಡಲಾಯಿತು. ಗ್ರಾಮದ ಪ್ರಮುಖರು ಹಾಗೂ ಸಂಸ್ಥೆಯ ಸಂಯೋಜಕರ ಸಮ್ಮುಖದಲ್ಲಿ ನಡೆದ ವಿಶೇಷ ಪೂಜಾ ಕಾರ್ಯಕ್ರಮದೊಂದಿಗೆ ಕಾಮಗಾರಿಯನ್ನು ಆರಂಭಿಸಲಾಯಿತು. ಕಾರ್ಯಕ್ರಮದಲ್ಲಿ ಕಲಿಕೆ ಟಾಟಾ ಟ್ರಸ್ಟ್‌ನ ಸಂಯೋಜಕರಾದ ಶಾಂತಲಿಂಗ ಮತ್ತು ಸಂಚಾಲಕರಾದ ಸಾಬಣ್ಣರವರು ಯೋಜನೆಯ ರೂಪುರೇಷೆ ಮತ್ತು ಉದ್ದೇಶಗಳ ಬಗ್ಗೆ ಗ್ರಾಮಸ್ಥರಿಗೆ ಸವಿಸ್ತಾರವಾಗಿ ಮಾಹಿತಿ ನೀಡಿದರು. ಸತತ ಎರಡು ವರ್ಷಗಳಿಂದ ಕೆರೆ ಹೂಳು ತೆಗೆಯುವ ಕಾಮಗಾರಿ ಜೊತೆಗೆ ಸುಮಾರು ಆಸಕ್ತ ರೈತರಿಗೆ ಕೃಷಿ ಹೊಂಡ, ಬೋರ್ವೆಲ್ ರಿಚಾರ್ಜ್, ಚೆಕ್ ಡ್ಯಾಮ್, ಬದು ನಿರ್ಮಾಣ, ಗ್ಯಾಬಿಯನ್ ಸ್ಟ್ರಾಕ್ಚರ್,ಅಂತಹ ಅನೇಕ ಕಾರ್ಯಕ್ರಮಗಳ ಮೂಲಕ ಕಲಿಕೆ ಟಾಟಾ ಟ್ರಸ್ಟ್ ಜಲ ಮೂಲಗಳ ಸಂರಕ್ಷಣೆ ಮತ್ತು ಅಂತರ್ಜಲ ಮಟ್ಟ ಹೆಚ್ಚಳ ಮತ್ತು ಮಣ್ಣಿನ ಸವಕಳಿಯನ್ನು ತಡೆಯುವ ಕೆಲಸ ಮಾಡುತ್ತಿದೆ ಎಂದು ಕರಣಿಗಿ ಗ್ರಾಮಸ್ಥರು ಮೆಚ್ಚುಗೆ ವ್ಯಕ್ತಪಡಿಸಿದರು.

## ಮ್ಯಾನುವೆಲ್ ಸ್ಕ್ಯಾವೆಂಜರ್ ಕಂಡುಬಂದಲ್ಲಿ ಕಟ್ಟುನಿಟ್ಟಿನ ಕ್ರಮ: ಜಿಲ್ಲಾಧಿಕಾರಿ

ಕಲಬುರಗಿ,:–ಕಲಬುರಗಿ ಜಿಲ್ಲೆಯಲ್ಲಿ ಮ್ಯಾನುವೆಲ್ ಸ್ಕ್ಯಾವೆಂಜರ್ ಕಂಡು ಬಂದಲ್ಲಿ ಅಥವಾ ಅದಕ್ಕೆ ಸಂಬಂಧಿಸಿದಂತೆ ಯಾವುದೇ ಒಂದು ದೂರು ದಾಖಲಾದರೂ ಸಹ ಅಲ್ಲಿನ ಸ್ಥಳೀಯ ಸಂಸ್ಥೆಗಳನ್ನು ನೇರ ಹೊಣೆಗಾರರನ್ನಾಗಿ ಮಾಡಲಾಗುವುದು ಎಂದು ಕಲಬುರಗಿ ಜಿಲ್ಲಾಧಿಕಾರಿ ಬಿ. ಫೌಜಿಯಾ ತರನ್ನುಮ್ ಅವರು ಎಚ್ಚರಿಕೆ ನೀಡಿದರು.

ಜಿಲ್ಲಾಧಿಕಾರಿಗಳ ಕಚೇರಿಯಲ್ಲಿಂದು ಹಮ್ಮಿಕೊಳ್ಳಲಾಗಿದ್ದ ಜಿಲ್ಲಾಮಟ್ಟದ ಸಭೆಯ ಅಧ್ಯಕ್ಷತೆವಹಿಸಿ ಮಾತನಾಡಿದ ಅವರು ಜಿಲ್ಲೆಯಲ್ಲಿ ಸುರಿಯುತ್ತಿರುವ ಅಕಾಲಿಕ ಮಳೆಯಿಂದ ಸಮಸ್ಯೆಗಳು ಈಗಾಗಲೇ ಆರಂಭವಾಗಿದ್ದು, ಯಾರೂ ಸಹ ಕೈಯಿಂದ ಕ್ಲೀನ್ ಮಾಡಬಾರದು ಹಾಗೂ ಮಾಡಿಸಬಾರದು, ಈ ಕುರಿತು ಯಾವ ಸಹಾಯವಾಣಿ ಸಂ–ಖ್ಯೆಗೆ ಕರೆ ಮಾಡಿದರೆ ಮೆಷಿನ್ ಬಂದು ಕ್ಲೀನ್ ಮಾಡುತ್ತದೆ ಎಂಬ ಜಾಗೃತಿಯನ್ನು ಜನರಲ್ಲಿ ಮೂಡಿಸಬೇಕು ಎಂದರು.

ಮ್ಯಾನುವೆಲ್ ಸ್ಕ್ಯಾವೆಂಜರ್‌ಗೆ ಸಂಬಂಧಿಸಿದಂತೆ ಜಿಲ್ಲಾ ಪಂಚಾಯತ್ ಹಾಗೂ ಸ್ಥಳೀಯ ನಗರಸಭೆ ಆಯುಕ್ತರು ಸೇರಿ ಸಭೆ ನಡೆಸಿ ಅವರ ಕಲ್ಯಾಣ ಕಾರ್ಯಕ್ರಮಗಳ ಯೋಜನೆಯಡಿ ಸರ್ಕಾರ ಜಾರಿಗೆ ತಂದಿರುವ ಸೌವಲತ್ತುಗಳನ್ನು ವಿತರಿಸಲು ಕ್ರಮ ಕೈಗೊಳ್ಳುವಂತೆ ಸೂಚಿಸಿದ್ದರು.



ವಿಜಯನಗರ : ನಗರದ ತಾಲ್ಲೂಕು ಪಂಚಾಯತಿ ಕಚೇರಿಯಲ್ಲಿ ಬುಧವಾರ ತಾಲ್ಲೂಕು ಪಂಚಾಯಿತ್ ಕಾರ್ಯನಿರ್ವಾಹಕ ಅಧಿಕಾರಿ ಎಮ್.ಡಿ. ಅಲಂಭಾಷ ಅವರ ಅಧ್ಯಕ್ಷತೆಯಲ್ಲಿ ಪ್ರಸಕ್ತ ಸಾಲಿನ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡ ಪ್ರಗತಿ ಪರಿಶೀಲನ ಸಭೆ ಜರುಗಿತು. ಈ ವೇಳೆ ಸಮಾಜ ಕಲ್ಯಾಣ ಇಲಾಖೆ ಸಹಾಯಕ ನಿರ್ದೇಶಕಿ ಶಾಹಿಖಾ ಅಹಮದ್ ಸೇರಿದಂತೆ ವಿವಿದ ಇಲಾಖೆ ಅಧಿಕಾರಿಗಳು ಉಪಸ್ಥಿತರಿದ್ದರು.

# ಎಸ್‌ಎಸ್‌ಎಲ್‌ಸಿ: 326 ವಿದ್ಯಾರ್ಥಿಗಳು ಗೈರು

• ಮಲ್ಲಮ್ಮ ನುಡಿ ವಾರ್ತೆ ವಿಜಯನಗರ

ಮಾರ್ಚ್ಯಲ್ಲಿನ 73 ಪರೀಕ್ಷಾ ಕೇಂದ್ರಗಳಲ್ಲಿ ಎಸ್.ಎಸ್.ಎಲ್.ಸಿ ವಾರ್ಷಿಕ ಪರೀಕ್ಷೆ–1 ನಡೆಯುತ್ತಿದ್ದು ಬುಧವಾರ ನಡೆದ ಇಂಗ್ಲೀಷ್ ವಿಷಯ ಪರೀಕ್ಷೆಗೆ 326 ವಿದ್ಯಾರ್ಥಿಗಳು ಗೈರಾಗಿದ್ದಾರೆ. ಇಂಗ್ಲೀಷ್ ವಿಷಯ ಪರೀಕ್ಷೆಗೆ 20,024 ವಿದ್ಯಾರ್ಥಿಗಳು ನೋಂದಾಯಿಸಿಕೊಂಡಿದ್ದು, ಈ ಪೈಕಿ 19,698 ವಿದ್ಯಾರ್ಥಿಗಳು ಪರೀಕ್ಷೆಗೆ ಹಾಜರಾಗಿದ್ದಾರೆ ಎಂದು ಪ್ರಕಟಣೆಯಲ್ಲಿ ತಿಳಿಸಿದೆ.

# ಶ್ರೀ ಉತ್ಸವಾಂಬ ದೇವಿ ಹುಂಡಿ ಎಣಿಕೆ ಕಾರ್ಯ

• ಮಲ್ಲಮ್ಮ ನುಡಿ ವಾರ್ತೆ ವಿಜಯನಗರ

ಜಿಲ್ಲೆಯ ಹರಪನಹಳ್ಳಿ ತಾಲ್ಲೂಕಿನ ಶ್ರೀ ಉತ್ಸವಾಂಬ ದೇವಿ ದೇವಸ್ಥಾನದ ಹುಂಡಿ ತೆರೆಯಲು ಇದೇ ಮಾರ್ಚ್ 26 ದಿನಾಂಕ ನಿಗಧಿಪಡಿಸಲಾಗಿದೆ. ಕಂದಾಯ ಇಲಾಖೆ ಉಪ ತಹಶೀಲ್ದಾರರು, ಕಂದಾಯ ನಿರೀಕ್ಷಕರು, ಗ್ರಾಮ ಲೆಕ್ಕಾಧಿಕಾರಿ, ಗ್ರಾಮ ಸಹಾಯಕರು, ಬ್ಯಾಂಕ್ ಸಿಬ್ಬಂದಿ, ಪೊಲೀಸ್ ಸಿಬ್ಬಂದಿ ಸಮಕ್ಷಮದಲ್ಲಿ ಹುಂಡಿ ಎಣಿಕೆ ಕಾರ್ಯ ನಡೆಸಲಾಗುವುದು. ಎಣಿಕೆ ಕಾರ್ಯಕ್ಕೆ ನಿಯೋಜಿಸಲಾಗುವ ಅಧಿಕಾರಿ ಅಥವಾ ಸಿಬ್ಬಂದಿಗಳಿಗೆ ಪ್ರವಾಸ ಭತ್ಯೆಯನ್ನು ದೇವಸ್ಥಾನದ ನಿಧಿಯಿಂದ ಪಾವತಿಸಲಾಗುವುದು ಎಂದು ಹಿಂದೂ ಧಾರ್ಮಿಕ ದತ್ತಿ ಇಲಾಖೆ ಸಹಾಯಕ ಆಯುಕ್ತೆ ಹೆಚ್.ಸವಿತಾ ತಿಳಿಸಿದ್ದಾರೆ.

# ವಿವಿಧ ಕೋಸ್‌ಗೆ ಪ್ರವೇಶಾತಿ ಆರಂಭ


• ಮಲ್ಲಮ್ಮ ನುಡಿ ವಾರ್ತೆ ವಿಜಯನಗರ

ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾನಿಲಯದ ಪ್ರಾದೇಶಿಕ ಕೇಂದ್ರದಲ್ಲಿ ಪ್ರಸಕ್ತ ಸಾಲಿಗೆ ಸ್ನಾತಕ, ಸ್ನಾತಕೋತ್ತರ ಕೋರ್ಸ್ಗಳಿಗೆ ಪ್ರವೇಶಾತಿಗೆ ಈಗಾಗಲೇ ಪ್ರಾರಂಭವಾಗಿದ್ದು, ಮಾರ್ಚ್ 30 ಅರ್ಜಿ ಸಲ್ಲಿಸಲು ಕೊನೆಯ ದಿನವಾಗಿದೆ.

ಕರ್ನಾಟಕ ರಾಜ್ಯ ಮುಕ್ತ ವಿಶ್ವ ವಿದ್ಯಾಲಯ ಪ್ರಾದೇಶಿಕ ಕೇಂದ್ರದಲ್ಲಿ ಬಿ.ಎ, ಬಿ.ಕಾಂ, ಬಿ.ಬಿ.ಎ, ಬಿ.ಸಿ.ಎ, ಬಿ.ಎಸ್ಸಿ(ಐ.ಟಿ), ಬಿ.ಎಸ್ಸಿ, ಬಿ.ಎಸ್.ಡಬ್ಲ್ಯೂ, ಬಿ.ಎಲ್.ಐ.ಎಸ್ಸಿ, ಎಂಎ, ಎಂಕಾಂ, ಎಂಬಿಎ, ಎಂಸಿಎ, ಎಂ.ಎಸ್. ಡಬ್ಲ್ಯೂ, ಪಿಜಿ, ಸರ್ಟಿಫಿಕೇಟ್ ಪ್ರೋಗ್ರಾಮ್, ಡಿಪ್ಲೊಮಾ ಮತ್ತು ಸರ್ಟಿಫಿಕೇಟ್ ಪ್ರೋಗ್ರಾಮ್ ಗಳಿಗೆ ಪ್ರವೇಶಾತಿಗೆ ಅವಕಾಶ ಕಲ್ಪಿಸಲಾಗಿದೆ.

ಆಸಕ್ತ ವಿದ್ಯಾರ್ಥಿಗಳು ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾನಿಲಯ ಅಧಿಕೃತ ಜಾಲತಾಣ www.ksoumysuru.ac.in ನಲ್ಲಿ ಆನ್‌ಲೈನ್‌ನಲ್ಲಿ ಅರ್ಜಿ ಭರ್ತಿ ಮಾಡಿ ನಂತರ ಪ್ರಾದೇಶಿಕ ಕೇಂದ್ರಕ್ಕೆ ಭೇಟಿ ನೀಡಿ ಪ್ರವೇಶಾತಿ ಪಡೆಯಬಹುದಾಗಿದೆ. ವಿಶೇಷವಾಗಿ ಬಿ.ಪಿ.ಎಲ್ ಕಾರ್ಡ್ ಹೊಂದಿರುವ ಮಹಿಳಾ ವಿದ್ಯಾರ್ಥಿಗಳಿಗೆ, ಡಿಫೆನ್ಸ್ ಹಾಗೂ ಮಾಜಿ ಸೈನಿಕರಿಗೆ, ಆಟೋ, ಕ್ಯಾಬ್ ಚಾಲಕರ ಮಕ್ಕಳಿಗೆ, ಕೆ.ಎಸ್.ಆರ್.ಟಿ.ಸಿ ನೌಕರರಿಗೆ ಬೋಧನಾ ಶುಲ್ಕದಲ್ಲಿ ರಿಯಾಯಿತಿ ನೀಡಲಾಗುವುದು. ಕೋವಿಡ್–19 ಸಾಂಕ್ರಾಮಿಕ ರೋಗಕ್ಕೆ ತುತ್ತಾದ ಪೋಷಕರ ಮಕ್ಕಳಿಗೆ, ತೃತಿಯ ಲಿಂಗದ ವಿದ್ಯಾರ್ಥಿಗಳಿಗೆ, ದೃಷ್ಠಿಹೀನ ವಿದ್ಯಾರ್ಥಿಗಳಿಗೆ [ಪೂರ್ಣ ಶುಲ್ಕ ವಿನಾಯಿತಿ ನೀಡಲಾಗಿದೆ.ಹೆಚ್ಚಿನ ಮಾಹಿತಿಗಾಗಿ ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾನಿಲಯ ಹೊಸಪೇಟೆ, ವಿಜಯನಗರ ಪ್ರಾದೇಶಿಕ ಕೇಂದ್ರ ಕನ್ನಡ ವಿಶ್ವವಿದ್ಯಾಲಯ ಆವರಣ ಅಥವಾ ದೂರವಾಣಿ ಸಂಖ್ಯೆ : 8088457148, 8296680114, 8088681698 ಸಂಪರ್ಕಿಸಬಹುದು ಎಂದು ಪ್ರಾದೇಶಿಕ ನಿರ್ದೇಶಕ ಮೈತ್ರಿ ಡಿ.ಎಸ್ ರವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಉಪ ಚುನಾವಣೆ:ತಮ್ಮಣ್ಣ ಗುತ್ತೇದಾರ ನೇಮಕ



• ಮಲ್ಲಮ್ಮ ನುಡಿ ವಾರ್ತೆ ಮುದಗಲ್

ಬಾಗಲಕೋಟೆ ವಿಧಾನ ಸಭಾ ಕ್ಷೇತ್ರದ ಉಪ ಚುನಾವಣೆಗೆಸಂಭಂಧಿಸಿದಂತೆ ಉಸ್ತುವಾರಿಯಾಗಿಲಿಂಗಸಗೂರು ವಿಧಾನ ಸಭಾ ಕ್ಷೇತ್ರದ ಮುಖಂಡ ಕೆಪಿಸಿಸಿ ಹಿಂದೂಳಿದ ವರ್ಗಗಳ ರಾಜ್ಯ ಕಾರ್ಯಧರ್ಶಿ ತಮ್ಮಣ್ಣ ಗುತ್ತೇದಾರ ಅವರನ್ನು ಕರ್ನಾಟಕ ಪ್ರದೇಶ ಕಾಂಗ್ರೇಸ್ ಸಮಿತಿ ಹಿಂದುಳಿದ ವರ್ಗಗಳ ರಾಜ್ಯಧ್ಯಕ್ಷ ಮಧು ಬಂಗಾರಪ್ಪ ಅವರು ಮಂಗಳವಾರ ಆದೇಶ ಹೊರಡಿಸಿದ್ದಾರೆ.

ಏ. 9ರಂದು ಬಾಗಲಕೋಟೆ ಉಪ ಚುನಾವಣೆ ನಿಮಿತ್ತ ಜವಾಬ್ದಾರಿ ಸಮರ್ಥವಾಗಿ ಕಾರ್ಯ ನಿರ್ವಹಿಸಿ , ಪಕ್ಷ ಸಂಘಟನೆ ಬಲಪಡಿಸಲು, ಪಕ್ಷದ ಅಭ್ಯರ್ಥಿ ಜಯಶಾಲಿಯಾಗಲು ಅಗತ್ಯ ಚುನಾವಣಾ ತಂತ್ರ ರೂಪಿಸಲು ಉಪ ಚುನಾವಣೆ ಉಸ್ತುವಾರಿಯಾಗಿ ತಮ್ಮಣ್ಣ ಗುತ್ತೇದಾರ ಅವರಿಗೆ ನೇಮಕ ಮಾಡಲಾಗಿದೆಂದು ಆದೇಶ ಪ್ರತಿಯಲ್ಲಿ ತಿಳಿಸಲಾಗಿದೆ.

# ಬೀದಿ ನಾಯಿ ಹಾವಳಿ: ನಾಲ್ಕು ಮಕ್ಕಳಿಗೆ ಗಂಭೀರ ಗಾಯ



• ಮಲ್ಲಮ್ಮ ನುಡಿ ವಾರ್ತೆ ಲಿಂಗಸುಗೂರು,


ಪುರಸಭೆ ವ್ಯಾಪ್ತಿಯಲ್ಲಿ ಬೀದಿ ನಾಯಿಗಳ ಹಾವಳಿ ಹೆಚ್ಚಾಗಿ ಸಾರ್ವಜನಿಕರಲ್ಲಿ ಆತಂಕ ಉಂಟಾಗಿದೆ. ಇತ್ತೀಚೆಗೆ ನಡೆದ ಘಟನೆಗಳಲ್ಲಿ ನಾಲ್ಕು ಮಕ್ಕಳು ನಾಯಿಗಳ ದಾಳಿಗೆ ಒಳಗಾಗಿ ಗಂಭೀರವಾಗಿ ಗಾಯಗೊಂಡಿದ್ದಾರೆ.

ಮಾ.20ರಂದು ಗ್ಯಾರಂಟಿ ಮನೆ ಹತ್ತಿರ ಮೂರು ಮಕ್ಕಳಿಗೆ ನಾಯಿ ಕಚ್ಚಿದರೆ, ಮಾ.21ರಂದು ಮಹ್ಮದಿಯ ಮಸೀದಿ ಸಮೀಪ 6 ವರ್ಷದ ಫೌಜಿಯಾ ತಲೆಗೆ ಗಾಯಗೊಂಡಿದ್ದಾಳೆ. ಗಾಯಾಳುಗಳನ್ನು ರಾಯಚೂರು ರಿಮ್ಸ್ ಆಸ್ಪತ್ರೆಗೆ ಸಾಗಿಸಿ ಚಿಕಿತ್ಸೆ ನೀಡಲಾಗಿದೆ.

ಈ ಹಿನ್ನೆಲೆಯಲ್ಲಿ ಕರ್ನಾಟಕ ದಲಿತ ಸಂಘರ್ಷ ಸಮಿತಿ (ಪರಿವರ್ತನವಾದ) ರಾಜ್ಯ ಸಮಿತಿ ಸದಸ್ಯ ಡಾ॥ ಜಲಾಲುದ್ದೀನ್ ಅಕ್ಬರ್ ಅವರು ಲಿಂಗಸೂಗೂರು ಸಹಾಯಕ ಆಯುಕ್ತರ ಕಚೇರಿಗೆ ಮನವಿ ಸಲ್ಲಿಸಿ, ನಾಯಿಗಳ ನಿಯಂತ್ರಣ, ಸಮರ್ಪಕ ಚಿಕಿತ್ಸೆ ಹಾಗೂ ಪರಿಹಾರ ಒದಗಿಸುವಂತೆ ಆಗ್ರಹಿಸಿದರು.

ಈ ಸಂದರ್ಭದಲ್ಲಿ ಜಾಪರ ಹುಸೇನ್ ಪೊಲವಾಲೆ ಉಪಸ್ಥಿತರಿದ್ದರು.

# ನೂತನ ಪದಾಧಿಕಾರಿಗಳ ಆಯ್ಕೆ



• ಮಲ್ಲಮ್ಮ ನುಡಿ ವಾರ್ತೆ ಸಿಂಧನೂರು

ಕರ್ನಾಟಕ ರಕ್ಷಣಾ ವೇದಿಕೆ ರಾಯಚೂರು ಅಧ್ಯಕ್ಷರಾದ ವಿನೋದ್ ರೆಡ್ಡಿ ಮತ್ತು ರಾಜಾಸಾಬ್ ಗಾಂಧಿನಗರ ಅವರು ಆದೇಶ ಮೇರೆಗೆ ನೂತನ ಪದಾಧಿಕಾರಿಗಳ ಆಯ್ಕೆ ಮಾಡಲಾಯಿತು ತಾಲೂಕು ಉಪಾಧ್ಯಕ್ಷರಾಗಿ ಬಾಷ ಸಾಬ್ ಪ್ರೂಟ್ಸ್ .ನಗರ ಘಟಕದ ಉಪಾಧ್ಯಕ್ಷರು ರವಿ ಬಸಾಪುರ

ಕಾರ್ಮಿಕ ತಾಲೂಕು ಅಧ್ಯಕ್ಷ ಅಕ್ಬರ್ ಮೇಸ್ತ್ರಿ. ತಾಲ್ಲೂಕು ಯುವ ಘಟಕದ ಅಧ್ಯಕ್ಷ . ವೀರೇಶ್ ಯಾದವ್ ಜಾಲಿಹಾಳ ಗ್ರಾಮ ಘಟಕದ ಅಧ್ಯಕ್ಷ ಬುಡನ್ ಸಾಬ್. ವಾರ್ಡ್. ನಂ. ದೊಡ್ಡ ಬಸವರಾಜ. ಇತರರನ್ನು ಆಯ್ಕೆ ಮಾಡಲಾಯಿತು.

ನಂತರ ಮಾತನಾಡಿದ ಜಿಲ್ಲಾಧ್ಯಕ್ಷ ವಿನೋದ್ ರೆಡ್ಡಿ ಅವರು ನಾಡಿನ. ನೆಲ ಜಲ ಭಾಷೆ ಕನ್ನಡಕ್ಕಾಗಿ ಹೋರಾಟ ಮಾಡಬೇಕು. ಎಂದು ಹೇಳಿದರು

ಈ ಸಂದರ್ಭದಲ್ಲಿ. ದೇವೇಂದ್ರ ಗೌಡ ಮಾಲಿಪಾಟೀಲ ಕಾಳಪ್ಪ ಮೇಸ್ತ್ರಿ. ತಾಲೂಕು ಅಧ್ಯಕ್ಷರು ಸುರೇಶ್ ಉಪಾಧ್ಯಕ್ಷರು ಬಸವರಾಜ ವಿಶ್ವಕರ್ಮ ಮಾನ್ವಿ ತಾಲೂಕಿನ ಅಧ್ಯಕ್ಷರು ಬಸನಗೌಡ ಸೇರಿದಂತೆ ಇತರರು ಉಪಸ್ಥಿತರಿದ್ದರು.

# ಹಾಸ್ಟೆಲ್, ಬಸ್ ನಿಲ್ದಾಣ, ಜಿಲ್ಲಾ ಕಾರಾಗೃಹ ಪೊಲೀಸ್ ಠಾಣೆಗಳಿಗೆ ಭೇಟಿ

• ಮಲ್ಲಮ್ಮ ನುಡಿ ವಾರ್ತೆ ರಾಯಚೂರು

ಕರ್ನಾಟಕ ರಾಜ್ಯ ಮಾನವ ಹಕ್ಕುಗಳ ಆಯೋಗದ ಗೌರವಾನ್ವಿತ ಅಧ್ಯಕ್ಷರಾದ ಡಾ.ಟಿ.ಶ್ಯಾಮ್ ಭಟ್ ಹಾಗೂ ಸದಸ್ಯರಾದ ಎಸ್.ಕೆ ವಂಟಿಗೋಡಿ ಅವರು ಮಾರ್ಚ್ 25ರಂದು ರಾಯಚೂರು ನಗರಕ್ಕೆ ಆಗಮಿಸಿ ವಿವಿಧೆಡೆ ಮಿಂಚಿನ ಸಂಚಾರ ನಡೆಸಿದರು.

ಬೆಳಗ್ಗೆ ಬೆಂಗಳೂರಿನಿಂದ ಹೊರಟು ಹೈದ್ರಾಬಾದ್ ಮೂಲಕ ಮಧ್ಯಾಹ್ನ ವೇಳೆಗೆ ರಾಯಚೂರ ನಗರಕ್ಕೆ ಆಮಿಸಿದ ಆಯೋಗವು, ಮಧ್ಯಾಹ್ನ ಊಟದ ವಿರಾಮದ ಬಳಿಕ ವಿವಿಧೆಡೆ ಭೇಟಿ ಆರಂಭಿಸಿತು.

ಮೊದಲಿಗೆ ರಂಗಮಂದಿರ ಹತ್ತಿರದ ಡಾ.ಬಿ.ಆರ್. ಅಂಬೇಡ್ಕರ್ ಮೆಟ್ರಿಕ್ ಪೂರ್ವ ಬಾಲಕಿಯರ ವಸತಿ ನಿಲಯಕ್ಕೆ ಭೇಟಿ ನೀಡಿದ ಅಧ್ಯಕ್ಷರು ಹಾಗೂ ಸದಸ್ಯರು, ವಸತಿ ನಿಲಯಗಳ ವಿದ್ಯಾರ್ಥಿಗಳೊಂದಿಗೆ ಮಾತನಾಡಿ ಅವರ ಅಹವಾಲು ಆಲಿಸಿದರು.

ಸ್ನಾನಕ್ಕೆ ಬಿಸಿನೀರು ಸಿಗುತ್ತಾ? ಸೋಪುಕಿಟ್ ಕೊಡುತ್ತಾರಾ? ವೈದ್ಯರು ನಿಯಮಿತ ಭೇಟಿ ಕೊಡುತ್ತಾರಾ? ಸ್ಕೂಲ್ ಬಸ್ ಬರುತ್ತಾ? ಊಟ ಸರಿಯಾಗಿ ಕೊಡುತ್ತಾರಾ? ಸಿಸಿ ಟಿವಿ ಇದೆನಾ? ಎಂದು ಕೇಳಿ ಮಾಹಿತಿ ಪಡೆದುಕೊಂಡರು.

ಸದ್ಯ ಒಂದು ಕೋಣೆಯಲ್ಲಿ ಐದಾರು, ಆರೇಳು ಜನ ವಿದ್ಯಾರ್ಥಿನಿಯರಿದ್ದು, ಇಕ್ಕಟ್ಟಾಗಿವೆ.



ವಿದ್ಯಾರ್ಥಿಗಳ ಸಂಖ್ಯೆಗನುಸಾರ ರೂಮಿನ ವ್ಯವಸ್ಥೆಯಾಗಬೇಕಿದೆ ಎಂದು ಹಾಸ್ಟೆಲ್ ವಾರ್ಡನ್ ಅವರು ತಿಳಿಸಿದರು. ಸಂಬಳ ಸಿಗುತ್ತಾ? ರೇಷನ್ ಶುಚಿಯಾಗಿಡಿ. ಅಡುಗೆಗೆ ಶುದ್ಧ ನೀರು ಬಳಸಿ ಎಂದು ಅಡುಗೆದಾರರಿಗೆ ಸಲಹೆ ಮಾಡಿದರು.

ಅಡುಗೆ ಸಾಮಗ್ರಿ ದಾಸ್ತಾನು ಕೊಠಡಿಗೆ ಭೇಟಿ ನೀಡಿ ಆಹಾರ ಧಾನ್ಯಗಳ ಗುಣಮಟ್ಟ ಪರಿಶೀಲಿಸಿದರು. ವಿದ್ಯಾರ್ಥಿಗಳಿಗೆ ನಿಯಮಿತವಾಗಿ ಆರೋಗ್ಯ ತಪಾಸಣೆ, ಜ್ಞಾನವೃದ್ಧಿ ಶಿಬಿರ ನಡೆಸಲು ಸಲಹೆ ಮಾಡಿದರು.

ಬಳಿಕ ಕೇಂದ್ರ ಬಸ್ ನಿಲ್ದಾಣದ ಆವರಣಕ್ಕೆ ಭೇಟಿ ನೀಡಿದರು. ಬಸ್‌ಗಳು ಸರಿಯಾಗಿ ಬರುತ್ತಾ? ಮಧ್ಯೆ ಟ್ರಿಪ್ ನಿಲ್ಲಸ್ತಾರಾ? ಎಂದು ಪ್ರಯಾಣಿಕರಿಗೆ ಕೇಳಿದರು. ರಾಯಚೂರು–ಲಿಂಗಸೂರ ಮಧ್ಯೆ ಸರಿಯಾದ ಬಸ್ಸಿನ ಸೌಕರ್ಯ ಇಲ್ಲ. ಡಿಪೋಗಳಿಂದ ಬಸಗಳನ್ನು ಸರಿಯಾಗಿ ಬಿಡುತ್ತಿಲ್ಲ. ತಡೆರಹಿತ ಬಸ ಬಿಟ್ಟು ವಿದ್ಯಾರ್ಥಿಗಳ ಪಾಸಿಗೆ ಅವಕಾಶ ನೀಡುತ್ತಿಲ್ಲ. ರಾಯಚೂರ–ಮಾನವಿ ಮಧ್ಯೆ ಸಾಕಷ್ಟು ಬಸಗಳು ಪ್ರತಿನಿತ್ಯ ಓಡಾಡಿದರು ನೀರಮಾನ್ವಿಯಂತ ಕಡೆಗೆ ನಿಲ್ಲುವುದಿಲ್ಲ. ಬರೀ ತಡೆ ರಹಿತ ಬಸ್ ಓಡಿಸುತ್ತಾರೆ ಎಂದು ಪ್ರಯಾಣಿಕರು ದೂರಿದರು.

ಜಿಲ್ಲಾಧಿಕಾರಿಗಳೊಂದಿಗೆ ನಡೆಸುವ ಸಭೆಯಲ್ಲಿ ಈ ಬಗ್ಗೆ ಚರ್ಚಿಸುವುದಾಗಿ ಅಧ್ಯಕ್ಷರು ತಿಳಿಸಿದರು. ಬಸ್ ನಿಲ್ದಾಣದಲ್ಲಿನ ಬೇಕರಿ ಮತ್ತು ಇನ್ನಿತರರ ಅಂಗಡಿಗಳಲ್ಲಿನ ಸಾಮಗ್ರಿಗಳ ಮೇಲಿನ ಅವಧಿಯನ್ನು ಪರಿಶೀಲಿಸಿದರು.

ಬಳಿಕ ಜಿಲ್ಲಾ ಕಾರಾಗೃಹಕ್ಕೆ ಭೇಟಿ ನೀಡಿದರು. ಅಲ್ಲಿನ ಖೈದಿಗಳ ಸೆಲ್‌ಗಳಿಗೆ ಪ್ರವೇಶಿಸಿ, ಕೇಸಗಳು ಸರಿಯಾಗಿ ಆಗುತ್ತಾ? ವಕೀಲರು ಇಲ್ಲದೇ ಇರುವವರು ಇದ್ದೀರಾ? ಆರೋಗ್ಯ ತಪಾಸಣೆ ಮಾಡ್ತಾರಾ? ಹಾಸಿಗೆ ನೀಡಿದ್ದಾರಾ? ಎಂದು ಖೈದಿಗಳಿಗೆ ಕೇಳಿದರು.

ಪಾತ್ರೆ ತೊಳೆದು ಬಳಸಲು ಅಡುಗೆದಾರರಿಗೆ ತಿಳಿಸಿದರು. ಮಹಿಳಾ ಖೈದಿಗಳ ಸೆಲ್ ಗೆ ಭೇಟಿ ನೀಡಿ ಅವರ ಅಹವಾಲು ಆಲಿಸಿದರು. ಸಿಸಿ ಟಿವಿ ನಿರ್ವಹಣೆಗಳ ಬಗ್ಗೆ ಕೇಳಿದರು. ಜೈಲಿನ ಸಹಾಯಕ ಅಧೀಕ್ಷಕರಾದ ಅನಿತಾ ಎಸ್ ಹಿರೇಮನಿ ಅವರು ಜೈಲ್ ನಿರ್ವಹಣೆಯ ಬಗ್ಗೆ ಆಯೋಗಕ್ಕೆ ಮಾಹಿತಿ ನೀಡಿದರು.

ಬಳಿಕ ನಗರದ ಸದರ ಬಜಾರ್ ಪೊಲೀಸ್ ಠಾಣೆಗೆ ಭೇಟಿ ನೀಡಿದರು. ಈ ವೇಳೆ ಠಾಣೆಯ ಕ್ರೈಮ ರಿಜಿಸ್ಟರ್, ಪಿಎಸ್ ಆರ್ ಪರಿಶೀಲಿಸಿದರು. ಇದೆ ವೇಳೆ, ಮಹಿಳಾ ಪೊಲೀಸ್ ಠಾಣೆಗೆ ಭೇಟಿ ನೀಡಿ ಮಕ್ಕಳ ಸ್ನೇಹಿ ಕೊಠಡಿ ವೀಕ್ಷಿಸಿ ವ್ಯಕ್ತಪಡಿಸಿದರು.

ಈ ವೇಳೆ ನಗರಸಭೆ ಸಮಿತಿ ಕಾರ್ಯದರ್ಶಿ ಕೃಷ್ಣ ಶಾವಂತಗೇರಾ, ತಹಸೀಲ್ದಾರ ಸುರೇಶ ವರ್ಮಾ, ತಾಪಂ ಇಓ ಚಂದ್ರಶೇಖರ, ಸಮಾಜ ಕಲ್ಯಾಣ ಇಲಾಖೆಯ ಅಧಿಕಾರಿ ಪ್ರವೀಣಕುಮಾರ ಹಾಗೂ ಇನ್ನಿತರರು ಇದ್ದರು.

# ನಂದಿಧ್ವಜಕೆ ತರಬೇತಿದಾರರಿಂದ ಪೂಜೆ



ಮಲ್ಲಮ್ಮ ನುಡಿ ವಾರ್ತೆ. ಬಸವಕಲ್ಯಾಣ

ಇಲ್ಲಿನ ಶರಣ ನಾಗಿದೇವರ ಕಂಬಳಿಮಠ ದಲ್ಲಿ 23 ನೇ ವರ್ಷದ ನಂದಿಧ್ವಜ ತರಬೇತಿ ಕಾರ್ಯಕ್ರಮದಲ್ಲಿ ನಂದಿಧ್ವಜದ ಪೂಜೆ ನೆರವೇರಿಸಿದರು. ಈ ಸಂದರ್ಭದಲ್ಲಿ ಗುರುಪಾದಪ್ಪಾ ಖರೂಣೆ. ಸುಭಾಷ ಬಾವಗೆ. ಕಲ್ಲಯ್ಯಾ ಸ್ವಾಮಿ. ಉಮೇಶ ಬಿಜಾಪುರೆ. ಸಚಿನ ಹುಡಗೆ. ಸಂಗನ ಬಸವ ಸ್ವಾಮಿ. ಪತ್ರಕರ್ತರಾದ ಡಿ. ಕೆ. ಪ್ರಹ್ಲಾದ. ನಾಗಪ್ಪಾ ನಿಣ್ಣೆ. ಹಾಗೂ ಅಮಿತ ಗುಳಶೆಟೆ. ವಾಸು ಪಗಡೆ. ರಾಹುಲ. ಅಶೋಕ. ಸಂಜೀವ. ವಿಶಾಲ. ಗಣೇಶ. ಪ್ರಭು ಶೀಲವಂತ ಸೇರಿದಂತೆ ಅನೇಕರು ಉಪಸ್ಥಿತರಿದ್ದರು.



ಬಸವಕಲ್ಯಾಣ :– ಇಲ್ಲಿನ ಶಾಹಪೂರ ಓಣಿಯಲಿ ಜೇಡರ ದಾಸಿಮಯ್ಯ ಮಠದಲ್ಲಿ ಆದ್ಯ ವಚನಕಾರರಾದ ಶರಣ ಜೇಡರ ದಾಸಿಮಯ್ಯ ನವರ ಜಯಂತಿ ಉತ್ಸವ ನಿಮಿತ್ಯ ಭಾವಚಿತ್ರಕೆ ಹೂವು ಮಾಲೆ ಹಾಕಿ ಪೂಜೆ ಸಲ್ಲಿಸಿದರು. ಈ ಸಂದರ್ಭದಲ್ಲಿ ಸಮಾಜದ ಅಧ್ಯಕ್ಷರಾದ ಶಿವಕುಮಾರ ಸಿದ್ದೇಶ್ವರೆ. ಪದಾಧಿಕಾರಿಗಳಾದ ಎಸ್. ಜಿ. ಕರಣೆ. ಪ್ರಕಾಶ ಘೋಡವಾಡೆ.ಫಾಳೆಪ್ಪಾ ಪೊಲೀಸ್. ಬಸವರಾಜ ವಟಗೆ. ವಿಜಯಕುಮಾರ್ ಪೂಜಾರಿ. ಬಸವರಾಜ ಗಾ ರಂಪಳ್ಳೆ.ಸಂತೋಷ ಹರಕೆ. ಸಂತೋಷ್ ದಸ್ತಾಪುರೆ. ಸಂಗಮೇಶ ಹಂಚೆ. ಹಟಗಾರ ಸಮಾಜದ ಅಧ್ಯಕ್ಷರಾದ ಡಾ. ಜಿ. ಎಸ್. ಭೂರಳೆ ಸೇರಿದಂತೆ ಅನೇಕರು ಉಪಸ್ಥಿತರಿದ್ದರು. (ಮಲ್ಲಮ್ಮ ನುಡಿ ಚಿತ್ರ).

# ಅಂಗನವಾಡಿ ಕೇಂದ್ರಕ್ಕೆ ಲಕ್ಷ್ಮಿಕಾಂತ ಭೇಟಿ




• ಮಲ್ಲಮ್ಮ ನುಡಿ ವಾರ್ತೆ ಮುದಗಲ್

ಸಮೀಪದ ಮಾಕಾಪುರು ಪ್ರಾಥಮಿಕ ಆರೋಗ್ಯ ಕೇಂದ್ರದ ವೈದ್ಯಾಧಿಕಾರಿ ಡಾ! ಲಕ್ಷ್ಮಿಕಾಂತ ಅವರು ತೊಡಕಿ ತಾಂಡ ಗ್ರಾಮದ ಅಂಗನವಾಡಿ ಕೇಂದ್ರದ ಮಕ್ಕಳ ಆರೋಗ್ಯ ತಪಾಸಣೆ ಮಾಡಿ ದಾಖಲೆಗಳ ಪರಿಶೀಲನೆ ಮಾಡಿ ಮಾಹಿತಿ ಬುಧವಾರ ಮಾಡಿದರು.

ಅಂಗನವಾಡಿ ಕಾರ್ಯಕರ್ತೆ ಸುಜಾತ, ಆರ್, ನಾಯಕ, ಅಡುಗೆ ಸಹಾಯಕಿ ಸೇರಿದಂತೆ ಅಂಗನವಾಡಿ ಕೇಂದ್ರದ ಮಕ್ಕಳು ಇದ್ದರು.

# ಶ್ರೀ ಭಾಗ್ಯವಂತಿ ದೇವಿಯ ಜಾತ್ರಾ ಮಹೋತ್ಸವ: ಭಕ್ತಿಭಾವ ಮೆರೆದ ಭಕ್ತರು

• ಮಲ್ಲಮ್ಮ ನುಡಿ ವಾರ್ತೆ ಕಮಲನಗರ

ತಾಲೂಕಿನ ಡಿಗ್ಗಿ ಗ್ರಾಮದ ಶ್ರೀ ಭಾಗ್ಯವಂತಿ ದೇವಿಯ ವಾರ್ಷಿಕ ಜಾತ್ರಾ ಮಹೋತ್ಸವವು ಬುಧವಾರ (ಮಾರ್ಚ್ 25) ವಿಜೃಂಭಣೆಯಿಂದ ನೆರವೇರಿತು.

ಈ ಧಾರ್ಮಿಕ ಕಾರ್ಯಕ್ರಮಗಳ ಅಂಗವಾಗಿ ಮಂಗಳವಾರ ಸಂಜೆ ಶ್ರೀ ಭಾಗ್ಯವಂತಿ ದೇವಿ ಮಂದಿರದಿಂದ ದೇವಿಯ ಭಾವಚಿತ್ರದ ಮೆರವಣಿಗೆ ಆರಂಭವಾಯಿತು. ಭಕ್ತರ ಜಯಘೋಷಗಳ ನಡುವೆ ಸಾಗಿದ ಮೆರವಣಿಗೆಯು ಗ್ರಾಮದ ಪ್ರಮುಖ ಬೀದಿಗಳಾದ ಮಡಿವಾಳೇಶ್ವರ ದೇವಾಲಯ, ಹನುಮಾನ ದೇವಾಲಯ ಹಾಗೂ ಅಗ್ಗಿ ಬಸವಣ್ಣ ಕಟ್ಟೆ ಮೂಲಕ ಹಾದುಹೋಗಿ, ನಂತರ ಮರಳಿ ದೇವಿಯ ಮಂದಿರಕ್ಕೆ ತಲುಪಿತು. ಈ ಸಂದರ್ಭದಲ್ಲಿ ಗ್ರಾಮದ



ಹಿರಿಯರು, ಯುವತಿಯರು ಮತ್ತು ಮಹಿಳೆಯರು ಹೆಚ್ಚಿನ ಸಂಖ್ಯೆಯಲ್ಲಿ ಪಾಲ್ಗೊಂಡಿದ್ದರು.

ಬುಧವಾರ ಮುಂಜಾನೆ ಧಾರ್ಮಿಕ ಕಾರ್ಯ ಜರುಗಿದವು, ನಂತರ ಎಲ್ಲಾ ಭಕ್ತರಿಗೆ ಹುಗ್ಗಿ, ಅನ್ನಾ ಹಾಗೂ ಸಾಂಬರ್ ಪ್ರಸಾದವನ್ನು ಸೇವಿಸಿ ಭಾಗ್ಯವಂತಿ ಮಂದಿರದಲ್ಲಿ ತೆಂಗಿನಕಾಯಿ ಒಡೆದು, ಭಕ್ತಿ ಕಾಣಿಕೆ ಅರ್ಪಿಸಿ ಶ್ರದ್ದಾ ಭಕ್ತಿಯಿಂದ ನಮಿಸಿದರು.

# ಕಲ್ಯಾಣ ಕರ್ನಾಟಕ ಸಭೆಗೆ ಬಳ್ಳಾರಿ ಶಾಸಕರು ಗೈರು



**ಮಲ್ಲಮ್ಮ ನುಡಿ ವಾರ್ತೆ ಬಳ್ಳಾರಿ**

ನಿನ್ನೆ ಸಂಜೆ ವಿಧಾನಸೌಧದಲ್ಲಿ ಕರ್ನಾಟಕ ಯೋಜನಾ ಆಯೋಗದ ಉಪಾಧ್ಯಕ್ಷ ಬಿ. ಆರ್. ಪಾಟೀಲ್ ಅವರು ಡಾ ಗೋವಿಂದ ಶಾಸಕರಾದ ಡಾ ಶ್ರೀನಿವಾಸ್, ಲತಾ ಮಲ್ಲಿಕಾರ್ಜುನ್ ಹಾಗೂ ಕೃಷ್ಣನಾಯಕ್ ಭಾಗವಹಿಸಿದ್ದರು. ಗೋವಿಂದ ರಾವ್ ಅವರು ಸಲ್ಲಿಸಿದ ಡಾ ನಂಜುಂಡಪ್ಪವರದಿಯ ಅನುಷ್ಠಾನದ ಸ್ಥಿತಿ ಗತಿಯ ವರದಿಯನ್ನು ರಾಜ್ಯ ಸರ್ಕಾರ ಅಂಗೀಕಾರದ ನಂತರ ತೆಗೆದುಕೊಳ್ಳಬೇಕಾದ ಅಭಿವೃದ್ಧಿ ಕ್ರಮಗಳ ಬಗ್ಗೆ ಚರ್ಚಿಸಲು ಕರೆದಿದ್ದ ಕಲ್ಯಾಣ ಕರ್ನಾಟಕ ಭಾಗದ ಶಾಸಕರ ಚೊಚ್ಚಲ ಸಭೆಗೆ ಬಳ್ಳಾರಿ ಜಿಲ್ಲೆಯ ಯಾವ ಶಾಸಕರೂ ಪಾಲ್ಗೊಂಡಿಲ್ಲ.

ಕಲ್ಯಾಣ ಕರ್ನಾಟಕ ಪ್ರದೇಶಾಭಿವೃದ್ಧಿ ಮಂಡಳಿ ಅಧ್ಯಕ್ಷ ಅಜಯ್ ಸಿಂಗ್, 371 (ಜೆ) ಅನುಷ್ಠಾನ ಸಂಪುಟ ಉಪಸಮಿತಿಯ ಅಧ್ಯಕ್ಷರೂ ಆದ ಸಚಿವ ಶರಣ ಪ್ರಕಾಶ್ ಪಾಟೀಲ್, 20 ಕ್ಕೂ ಹೆಚ್ಚು ಶಾಸಕರು , ಅಧಿಕಾರಿಗಳು ಹಾಗೂ ಕಲ್ಯಾಣ ಕರ್ನಾಟಕ ಹೋರಾಟ ಸಮಿತಿಯ ಮುಖಂಡರು ಭಾಗವಹಿಸಿದ್ದರು.

ಸಭೆಯಲ್ಲಿ ಹಾಜರಿದ್ದ. ವಿಜಯನಗರ ಜಿಲ್ಲೆಯ ಶಾಸಕರಾದ ಡಾ ಶ್ರೀನಿವಾಸ್, ಲತಾ ಮಲ್ಲಿಕಾರ್ಜುನ್ ಹಾಗೂ ಕೃಷ್ಣ ನಾಯಕ್ ಭಾಗವಹಿಸಿದ್ದರು. ಇತರೇ ಜಿಲ್ಲೆಗಳ ಶಾಸಕರೂ ಭಾಗವಹಿಸಿ 371(ಜೆ) ಅನುಷ್ಠಾನದಲ್ಲಿ ಆಗುತ್ತಿರುವ ಸಮಸ್ಯೆ ಕುರಿತು ಗಮನ ಸೆಳೆದರು. ಈ ದಿಸೆಯಲ್ಲಿ ತೆಗೆದುಕೊಂಡಿರುವ ಮತ್ತು ಮುಂದಿನ ದಿನಗಳಲ್ಲಿ ಕ್ರಮ ವಹಿಸುವ ಬಗ್ಗೆ ಅಜಯ್ ಸಿಂಗ್ ಹಾಗೂ ಶರಣ ಪ್ರಕಾಶ್ ಪಾಟೀಲ್ ತಿಳಿಸಿದರು.

ಈ ಸಭೆ ಕರೆದ ಬಿ. ಆರ್. ಪಾಟೀಲ್ ಅವರ ಕ್ರಮವನ್ನು ಪಾಲ್ಗೊಂಡಿದ್ದ ಶಾಸಕರು ಪಕ್ಷಾತೀತವಾಗಿ ಶ್ಲಾಘಿಸಿ, ಅಭಿವೃದ್ಧಿ ಕೆಲಸಗಳಿಗೆ ಒಗ್ಗಟ್ಟಿನ ಅವಶ್ಯಕತೆಯನ್ನು ಒತ್ತಿ ಹೇಳಿದರು. ಅಲ್ಲದೆ ಪ್ರತಿ ಮೂರು ತಿಂಗಳಿಗೊಮ್ಮೆ ಕಲ್ಯಾಣ ಕರ್ನಾಟಕದ ಶಾಸಕರ ಸಭೆ ಕರೆಯಬೇಕೆಂದು ಸಲಹೆ ನೀಡಿದರು. ಇದಕ್ಕೆ ಬಿ. ಆರ್. ಪಾಟೀಲ್ ಒಪ್ಪಿಗೆ ಸೂಚಿಸಿದರು. ಕಲ್ಯಾಣ ಕರ್ನಾಟಕ ಹೋರಾಟ ಸಮಿತಿಯ ಲಕ್ಷ್ಮಣ ದಸ್ತಿ , ಡಾ ರಜಾಕ್ ಉಸ್ತಾದ್, ಪನ್ನ ರಾಜ್ ಸಿರಿಗೇರಿ ಹಾಗೂ ಇತರರು ಭಾಗವಹಿಸಿ ತಮ್ಮ ಬಹು ದಿನಗಳ ಬೇಡಿಕೆಗಳನ್ನು ಈಡೇರಿಸಲು ಒತ್ತಾಯಿಸಿದರು.

# ಬಾಲ, ಕಿಶೋರ ಕಾರ್ಮಿಕ ಪದ್ಧತಿ ಕುರಿತು ನಾಟಕ

**ಮಲ್ಲಮ್ಮ ನುಡಿ ವಾರ್ತೆ ಬಳ್ಳಾರಿ**

ಕರ್ನಾಟಕ ಸರ್ಕಾರ, ಜಿಲ್ಲಾಡಳಿತ, ಜಿಲ್ಲಾ ಪಂಚಾಯಿತಿ, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ ಬಳ್ಳಾರಿ, ಜಿಲ್ಲಾ ಕಾರ್ಮಿಕ ಇಲಾಖೆ ಬಳ್ಳಾರಿ, ಜಿಲ್ಲಾ ಬಾಲಕಾರ್ಮಿಕ ಯೋಜನೆ ಸೊಸೈಟಿ ಬಳ್ಳಾರಿ, ಹಾಗೂ ಅಕ್ಷಯ ಕಲಾ ಟ್ರಸ್ಟ್ ಹೊಸ ಯರಗುಡಿ, ಇವರು ಸಂಯುಕ್ತ ಆಶ್ರಯದಲ್ಲಿ, ಬಳ್ಳಾರಿ ಜಿಲ್ಲೆಯ ಬಳ್ಳಾರಿ ತಾಲೂಕು, ಗ್ರಾಮಂತರ, ಕುರುಗೋಡು, ಕುರುಗೋಡು ಗ್ರಾಮಾಂತರ, ಸಂಡೂರು, ಸಂಡೂರು ಗ್ರಾಮಂತರ, ಈ ತಾಲೂಕುಗಳಲ್ಲಿ ಆಯ್ಕೆ ಆದಂತಹ 12 ಗ್ರಾಮಗಳಲ್ಲಿ ಬಾಲಕಾರ್ಮಿಕ ಮತ್ತು ಕಿಶೋರ ಕಾರ್ಮಿಕ ಪದ್ಧತಿಗಳ ಕುರಿತು ಬೀದಿ ನಾಟಕ ಜಾಗೃತಿ ಹಾಡುಗಳು ಮೂಲಕ ಜನರಿಗೆ ಜಾಗೃತಿ ಮೂಡಿಸಲಾಯಿತು ಈ ಕಾರ್ಯಕ್ರಮದ ಉದ್ಘಾಟನೆಯನ್ನು ಎನ್ ರಾಜೇಶ್ ಹೊಸಮನಿ ಸರ್ ನ್ಯಾಯಾಧೀಶರು ಉದ್ಘಾಟಿಸಿದರು ಇವರ ಜೊತೆಯಲ್ಲಿ ಅಪರ ಜಿಲ್ಲಾಧಿಕಾರಿಗಳಾದ ಮಹಮದ್ ಜುಬೇರ್ ಮತ್ತು ಕಾರ್ಮಿಕ ಅಧಿಕಾರಿಗಳು ಯೋಜನೆ ನಿರ್ದೇಶಕರಾದ ಮೌನೇಶ್ ಸರ್, ಮಹಿಳಾ ಮತ್ತು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಅಧಿಕಾರಿಗಳು,ವಿವಿಧ ಸಂಘ–ಸಂಸ್ಥೆಯವರು, ಮಕ್ಕಳ ಕಲ್ಯಾಣ ಸಮಿತಿಯವರು ಅಕ್ಷಯ ಟ್ರಸ್ಟ್ ಮತ್ತು ಸಿರುಗುಪ್ಪ ನೇತ್ರಕಲಾ ಸಂಘ ಇನ್ನು ಅನೇಕ ಕಲಾವಿದರು ಜಿಲ್ಲೆಯ ಐದು ತಾಲೂಕುಗಳಲ್ಲಿ ಬೀದಿ ನಾಟಕ ಜಾಗೃತಿ ಹಾಡುಗಳು ಮೂಲಕ ತಂಡದವರು ಅತ್ಯಂತ ಯಶಸ್ವಿಯಾಗಿ ಕಾರ್ಯಕ್ರಮವನ್ನು ನಡೆಸಿ ಕೊಟ್ಟಿರುತ್ತಾರೆಂದು ಈ ಮೂಲಕ ಕೇಳಿಕೊಳ್ಳುತ್ತೇವೆ ಈ ಕಾರ್ಯಕ್ರಮದಲ್ಲಿ ಕಲಾವಿದರಗಳಾದ ಹೆಚ್,ಜಿ ಸುಂಕಪ್ಪ, ಎಸ್ ಎಂ ಹುಲುಗಪ್ಪ, ಎಚ್ ರಮೇಶ್, ಡಿ ಹೇಮಂತ್, ಆರ್ ವಿಜಯ್, ನಾಗಮೂರ್ತಿ, ಮಾರಣ್ಣ, ವೀರೇಶ್ ದಳವಾಯಿ, ಹುಸೇನಪ್ಪಾ, ಮಮತಮ್ಮ, ರಾಮಣ್ಣ ಇನ್ನು ಅನೇಕ ಕಲಾವಿದರ ಸೇರಿ ಕಾರ್ಯಕ್ರಮವನ್ನು ಅತ್ಯಂತ ಯಶಸ್ವಿಯಾಗಿ ನಡೆಸಿ ಕೊಟ್ಟಿರುತ್ತಾರೆ




# ನಿಷೇಧಿತ ಪ್ಲಾಸ್ಟಿಕ್ ವಶ 10 ಸಾವಿರ ರೂ ದಂಡ




**ಮಲ್ಲಮ್ಮ ನುಡಿ ವಾರ್ತೆ ಬಳ್ಳಾರಿ**

ಈ ದಿನ ನಗರದ ಕಣೇಕಲ್ ಬಸ್ಟ್ಯಾಂಡ್ ಹತ್ತಿರ ಹಳೆ ಅಂದ್ರಾಳ್ ರಸ್ತೆ ಪಕ್ಕದಲ್ಲಿ ಇರುವ ಗೋಡನ್ ಮೇಲೆ ಪಾಲಿಕೆ ಸಿಬ್ಬಂದಿ ದಾಳಿ ಮಾಡಿ ನಿಷೇಧಿತ ಪ್ಲಾಸ್ಟಿಕ್ ವಸ್ತುಗಳನ್ನು ಸಿಜ್ ಮಾಡಿ 10 ಸಾವಿರ ರೂಪಾಯಿ ದಂಡ ವಿಧಿಸಿದೆ. ಮಹಾನಗರ ಪಾಲಿಕೆಯ ಆರೋಗ್ಯ ನಿರೀಕ್ಷಕರು ಗಳಾದ ಕಡ್ಲೆ ಬಸವರಾಜ್, ಅಮರೇಶ್, ಕುಮಾರಸ್ವಾಮಿ, ಸುಮಾರಾಣಿ, ಯುವರಾಜ್ ಈ ದಾಳಿಯಲ್ಲಿ ಪಾಲ್ಗೊಂಡಿದ್ದರು.

# ಬಸ್ ಬ್ರೇಕ್ ಫೇಲ್ ಹಣ್ಣಿನ ಅಂಗಡಿಗೆ ಡಿಕ್ಕಿ: ತಪ್ಪಿದ ಅನಾಹುತ



**ಮಲ್ಲಮ್ಮ ನುಡಿ ವಾರ್ತೆ ಬಳ್ಳಾರಿ**

ನಗರದ ಗವಿಯಪ್ಪ ಸರ್ಕಲ್ ನಲ್ಲಿ ಇಂದು ಬೆಳಿಗ್ಗೆ ಮಸ್ಕಿಯಿಂದ ನಗರಕ್ಕೆ ಬಂದ ಕೆಕೆಆರ್ ಟಿಸಿ ಬಸ್. ಸರ್ಕಲ್ ನಲ್ಲಿ ಪ್ರಸಯಾಣಿಕರನ್ನು ಇಳಿಸಿ. ಬಸ್ ನಿಲ್ದಾಣಕ್ಕೆ ತೆರಳವ ಮುನ್ನ ಬ್ರೇಕ್ ಫೇಲ್ ಆಗಿ ಅಲ್ಲಿಯೇ ಇದ್ದ ಹಣ್ಣಿನ ಅಂಗಡಿಗೆ ಡಿಕ್ಕಿ ಹೊಡೆದಿದೆ.ಇದರಿಂದಾಗಿ ಓರ್ವ ಮಹಿಳೆ ತೀವ್ರವಾಗಿ ಗಾಯಗೊಂಡಿದ್ದಾಳೆ. ಬಸ್ ಅಲ್ಲಿನ ಜಾಹಿರಾತು ಫಲಕಕ್ಕೆ ಗುದ್ದಿದ್ದರಿಂದ ಹೆಚ್ಚಿನ ಅಪಾಯ ತಪ್ಪಿದೆ . ಸಂಚಾರಿ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ

# ಸಾಹಿತಿ ರಾಮಕೃಷ್ಣ ಗುಂದಿಯವರಿಗೆ ದಿನಕರ ಪ್ರತಿಷ್ಠಾನದ ಗೌರವ

**ಮಲ್ಲಮ್ಮ ನುಡಿ ವಾರ್ತೆ ಅಂಕೋಲಾ**

ನಿವೃತ್ತ ಪ್ರಾಚಾರ್ಯ, ಕಥೆಗಾರ, ಯಕ್ಷಗಾನ ಕಲಾವಿದ ರಾಮಕೃಷ್ಣ ಗುಂದಿ ಅವರ 74 ನೇ ಜನ್ಮದಿನದ ನಿಮಿತ್ಯ ಅಂಕೋಲೆಯ ಡಾ. ದಿನಕರ ದೇಸಾಯಿ ಪ್ರತಿಷ್ಠಾನ ಅವರನ್ನು ಗೌರವಿಸಿತು. ಅಂಕೋಲೆಯ ಪುರಲಕ್ಕಿಬೇಣದಲ್ಲಿರುವ ಡಾ. ಗುಂದಿ ಅವರ ಸೌಗಂಧಿಕಾ ಮನೆಯಂಗಳದಲ್ಲಿ ದಿನಕರ ಪ್ರತಿಷ್ಠಾನದ ಪದಾಧಿಕಾರಿಗಳು, ಸದಸ್ಯರು ಗುಂದಿ ದಂಪತಿಗಳನ್ನು ಸನ್ಮಾನಿಸಿದರು.



ಸರಳವಾಗಿ ಜರುಗಿದ ಸಮಾರಂಭದಲ್ಲಿ ಪ್ರಾಸ್ತಾವಿಕವಾಗಿ ಮಾತನಾಡಿದ ಲೇಖಕ ಮಹಾಂತೇಶ ರೇವಡಿ ಅಂಕೋಲೆಯ ಸಾಂಸ್ಕೃತಿಕ ಸಿರಿವಂತಿಕೆ ಹೆಚ್ಚಿಸುವಲ್ಲಿ ಗುಂದಿಯವರ ಪಾತ್ರ ಮಹತ್ವದ್ದಾಗಿದೆ ಎಂದರು. ಪ್ರತಿಷ್ಠಾನದ ಕಾರ್ಯದರ್ಶಿ ಜಗದೀಶ ನಾಯಕ ಹೊಸ್ಕೇರಿ ಮಾತನಾಡಿ, ರಾಮಕೃಷ್ಣ ಗುಂದಿಯವರು ಯಕ್ಷಗಾನದ ಮೇರು ಕಲಾವಿದ, ಸಮರ್ಥ ಪ್ರಾಚಾರ್ಯ, ಪ್ರಬುದ್ಧ ಕತೆಗಾರರಾಗಿ ಗುರುತಿಸಿಕೊಂಡಿದ್ದಾರೆಂದರು. ಪ್ರಾಚಾರ್ಯ ಫಾಲ್ಗುಣ ಗೌಡ ಮಾತನಾಡಿ, ಗುಂದಿ ಅವರಿಂದ ಇನ್ನಷ್ಟು ಕಥಾಸಾಹಿತ್ಯ ಹೊರಬರಲಿ ಎಂದು ಆಶಿಸಿದರು. ಈ ಸಂದರ್ಭದಲ್ಲಿ ಪ್ರೊ. ಮೋಹನ ಹಬ್ಬು ಗುಂದಿಯವರೊಂದಿಗಿನ ಒಡನಾಟದ ಸವಿನೆನಪುಗಳನ್ನು ಹಂಚಿಕೊಂಡರು. ಮಕ್ಕಳ ಕವಿ ನಾಗೇಂದ್ರ ತೊ–ರ್ಕೆ ಶುಭಹಾರೈಸಿದರು. ಸನ್ಮಾನಿಸಿದಕ್ಕೆ ರಾಮಕೃಷ್ಣ ಗುಂದಿ ಕೃತಜ್ಞತೆ ವ್ಯಕ್ತಪಡಿಸಿದರು. ಶಿಕ್ಷಕ ಜಯಶೀಲ ಆಗೇರ ವಂದಿಸಿದರು. ಸಾಹಿತಿ ಜೆ. ಪ್ರೇಮಾನಂದ, ಪ್ರತಿಷ್ಠಾನದ ಉಪಾಧ್ಯಕ್ಷ ಗೋಪಾಲಕೃಷ್ಣ ನಾಯಕ, ವೇದಿಕೆಯ ಸದಸ್ಯರಾದ ಡಾ. ಅರ್ಚನಾ, ಲಲಿತಾ ನಾಯ್ಕ ಉಪಸ್ಥಿತರಿದ್ದರು.

# ಆಹಾರೋದ್ಯಮಿಗಳು ನೈರ್ಮಲ್ಯತೆ ಗುಣಮಟ್ಟದ ಬಗ್ಗೆ ಹೆಚ್ಚಿನ ನಿಗಾ ವಹಿಸಿ: ಶಂಕರ್ ರಾವ್

**ಮಲ್ಲಮ್ಮ ನುಡಿ ವಾರ್ತೆ ಕಾರವಾರ**

ಆಹಾರೋದ್ಯಮಿಗಳು ತಮ್ಮ ಉದ್ಯಮದಲ್ಲಿ ನೈರ್ಮಲ್ಯತೆ ಹಾಗೂ ಗುಣಮಟ್ಟದ ಬಗ್ಗೆ ಹೆಚ್ಚಿನ ನಿಗಾ ವಹಿಸುವಂತೆ ಹಾಗೂ ಸರ್ಕಾರದ ಮಾರ್ಗಸೂಚಿಗಳನ್ನು ಪಾಲಿಸಿ, ಕಾರ್ಯ ನಿರ್ವಹಿಸಬೇಕು ಎಂದು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಅಧಿಕಾರಿ ಡಾ.ಶಂಕರ ರಾವ್ ತಿಳಿಸಿದರು.ಅವರು ಮಂಗಳವಾರ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಸಭಾಭವನದಲ್ಲಿ, ಆಹಾರ ಸುರಕ್ಷತೆ ಮತ್ತು ಔಷಧಿ ಆಡಳಿತ ಹಾಗೂ ಆಹಾರ ಸುರಕ್ಷತಾ ತರಬೇತಿ ಪ್ರಮಾಣ ಪತ್ರ ಕೇಂದ್ರ ವತಿಯಿಂದ ಆಯೋಜಿಸಲಾದ ಆಹಾರ ಸುರಕ್ಷತಾ ತರಬೇತಿ ಪ್ರಮಾಣಪತ್ರ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದರು.



ಆಹಾರ ಸುರಕ್ಷತಾ ಅಧಿಕಾರಿ ರಾಜ್‌ರೆಡ್ಡಿ ಮಾತನಾಡಿ, ಈ ತರಬೇತಿಯಲ್ಲಿ ಪಾಲ್ಗೊಂಡ ಎಲ್ಲ ಆಹಾರ ವಹಿವಾಟುದಾರರು ಹೆಚ್ಚಿನ ನೈರ್ಮಲ್ಯ, ಶುಚಿತ್ವ ಹಾಗೂ ಗುಣಮಟ್ಟತೆಯನ್ನು ಅಳವಡಿಸಿಕೊಳ್ಳಬೇಕು ಎಂದರು. ತರಬೇತಿ ಕೇವಲ ಪ್ರಮಾಣಪತ್ರಕ್ಕೆ ಸೀಮಿತವಾಗದೇ ಇಲ್ಲಿ ತರಬೇತಿದಾರರಿಂದ ಪಡೆದುಕೊಳ್ಳುವ ತರಬೇತಿಯಿಂದ ನಿಮ್ಮ ಮುಂದಿನ ವ್ಯವಹಾರಗಳಲ್ಲಿ ಶುಚಿತ್ವ ಗುಣಮಟ್ಟತೆಯನ್ನು ಅಳವಡಿಸಿಕೊಳ್ಳುವಂತೆ ನಿವೃತ್ತ ಆಹಾರ ಸುರಕ್ಷತಾ ಅಧಿಕಾರಿ ಹಾಗೂ ಸಲಹೆಗಾರ ಅರುಣ ಕಾಸಿಭಟ್ಟ ತಿಳಿಸಿದರು. ಉತ್ತರ ಕನ್ನಡ ಜಿಲ್ಲಾ ಸಂಯೋಜಕ ಮನೋಜ ನಾಯಕ ಮಾತನಾಡಿ, ಜಿಲ್ಲೆಯ ಎಲ್ಲ ತಾಲೂಕುಗಳಲ್ಲಿ ಈ ತರಬೇತಿ ಕಾರ್ಯಕ್ರಮಗಳು ನಡೆ–ಯುತ್ತಿದ್ದು, ಕಡ್ಡಾಯವಾಗಿ FOS-TAC. ತರಬೇತಿ ಪ್ರಮಾಣಪತ್ರದ ಪ್ರಯೋಜನವನ್ನು ಎಲ್ಲಾ ಆಹಾರ ವಹಿವಾಟುದಾರರು ಪಡೆದುಕೊಳ್ಳಬೇಕು ಎಂದರು.ಕಾರ್ಯಕ್ರಮದಲ್ಲಿ ಆಹಾರ ಸುರಕ್ಷತಾ ತರಬೇತಿ ಪ್ರಮಾಣ ಪತ್ರ ಕೇಂದ್ರದ ರಾಜ್ಯ ಮೇಲ್ವಿಚಾರಕ ಪಂಡಿತ ರಾಜ್, ತರಬೇತಿದಾರ ಯಶವಂತ ಅರುಣ, ಆಹಾರ ಸುರಕ್ಷತಾ ಪ್ರಮಾಣ ಪತ್ರ ಕೇಂದ್ರ, ಭಾರತ ಸರಕಾರ ಇವರು ಎಲ್ಲಾ ವಹಿವಾಟುದಾರರಿಗೆ ವಹಿವಾಟುಗಳ ನಿರ್ವಹಣೆ, ಸುರಕ್ಷತಾ ಕ್ರಮ ಶುಚಿತ್ವ, ಕಲಬೆರಕೆ, ಅನಾವಶ್ಯಕ ಖರ್ಚು ನಿಯಂತ್ರಣ ಮತ್ತು ಕಡ್ಡಾಯ ಪ್ರಮಾಣ ಪತ್ರದ ಮಹತ್ವದ ಕುರಿತು ಮಾಹಿತಿ ಹಾಗೂ FOSTAC ತರಬೇತಿ ನೀಡಲಾಯಿತು. ಕಾರ್ಯಕ್ರಮವನ್ನು ವ್ಯವಸ್ಥಿತವಾಗಿ ನಿರ್ವಹಿಸಿದ ಕಾರವಾರ ತಾಲೂಕಾ ಸಂಯೋಜಕರಾದ ದೀಪಕ ನಾಯ್ಕ ಹಾಗೂ ದಿಯಾ ನಾಯ್ಕ ಅವರನ್ನು ಸನ್ಮಾನಿಸಲಾಯಿತು.

# ಕ್ಯಾನ್ಸರ್ ಜಾಗೃತಿ ಹಾಗೂ ತಪಾಸಣಾ ಕಾರ್ಯಗಾರ

**ಮಲ್ಲಮ್ಮ ನುಡಿ ವಾರ್ತೆ ಕಾರವಾರ**

ಭಾರತೀಯ ರೆಡ್ ಕ್ರಾಸ್ ಸಂಸ್ಥೆ, ಕರ್ನಾಟಕ ರಾಜ್ಯ ಶಾಖೆ ಬೆಂಗಳೂರು, ಭಾರತೀಯ ರೆಡ್ ಕ್ರಾಸ್ ಸಂಸ್ಥೆ, ಉತ್ತರ ಕನ್ನಡ ಜಿಲ್ಲಾ ಶಾಖೆ, ಕಾರವಾರ ವೈದ್ಯಕೀಯ ವಿಜ್ಞಾನಗಳ ಸಂಸ್ಥೆ (ಕ್ರಿಮ್ಸ್), ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಇವರ ಸಂಯುಕ್ತ ಆಶ್ರಯದಲ್ಲಿ ಭಾರತೀಯ ರೆಡ್ ಕ್ರಾಸ್ ಸಂಸ್ಥೆಯ ಶತಮಾನೋತ್ಸವದ ಸಂಭ್ರಮಾಚರಣೆಯ ಅಂಗವಾಗಿ ಮಾ.26 ರಂದು ಬೆಳಗ್ಗೆ 9 ಗಂಟೆಯಿಂದ ಸಂಜೆ 4 ಗಂಟೆಯವರೆಗೆ ಕ್ಯಾನ್ಸರ್ ಜಾಗೃತಿ ಹಾಗೂ ತಪಾಸಣಾ ಕಾರ್ಯಗಾರವನ್ನು ಕಾರವಾರ ವೈದ್ಯಕೀಯ ವಿಜ್ಞಾನಗಳ ಸಂಸ್ಥೆ (ಕ್ರಿಮ್ಸ್) ನಲ್ಲಿ ಹಮ್ಮಿಕೊಳ್ಳಲಾಗಿದೆ.

ಕಾರ್ಯಕ್ರಮವನ್ನು ಜಿಲ್ಲಾಧಿಕಾರಿ ಕೆ.ಲಕ್ಷ್ಮೀಪ್ರಿಯಾ ಉದ್ಘಾಟಿಸಲಿದ್ದು, ಕಾರವಾರ ವೈದ್ಯಕೀಯ ವಿಜ್ಞಾನಗಳ ಸಂಸ್ಥೆಯ ನಿರ್ದೇಶಕಿ ಹಾಗೂ ಡೀನ್ ಡಾ.ಪೂರ್ಣಿಮಾ.ಆರ್.ಟಿ ಅಧ್ಯಕ್ಷತೆ ವಹಿಸಲಿದ್ದಾರೆ.

ಕಾರ್ಯಕ್ರಮದಲ್ಲಿ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿ ಡಾ.ಶಂಕರ.ರಾವ್, ವೈದ್ಯಕೀಯ ವಿಜ್ಞಾನಗಳ ಸಂಸ್ಥೆಯ ಡಾ.ನರೇಶ.ಪಾವಸ್ಕರ್, ಭಾರತೀಯ ರೆಡ್ ಕ್ರಾಸ್ ಸಂಸ್ಥೆ ಉತ್ತರ ಕನ್ನಡ ಜಿಲ್ಲಾ ಶಾಖೆಯ ಸಭಾಪತಿ ವಿ.ಎಮ್.ಹೆಗಡೆ, ಉಪಸಭಾಪತಿ ನಜೀರ ಅಹಮ್ಮದ ಯು. ಶೇಖ್, ಭಾರತೀಯ ರೆಡ್ ಕ್ರಾಸ್ ಸಂಸ್ಥೆ ಕರ್ನಾಟಕ ಶಾಖೆ ಬೆಂಗಳೂರಿನ ಆಡಳಿತ ಮಂಡಳಿಯ ಸದಸ್ಯ ಸದಾನಂದ ಎಮ್.ನಾಯ್ಕ ಮತ್ತಿತರರು ಭಾಗವಹಿಸಲಿದ್ದಾರೆ.

# ಜಿಲ್ಲಾ ಮಟ್ಟದ ಮಹಿಳಾ ಪದಾಧಿಕಾರಿಗಳ ಹಾಗೂ ಕಾರ್ಯಕರ್ತರ ಸಮಾವೇಶ



**ಮಲ್ಲಮ್ಮ ನುಡಿ ವಾರ್ತೆ ಬಳ್ಳಾರಿ**

ನಗರದ ಡಾ. ಬಿ. ಆರ್. ಅಂಬೇಡ್ಕರ್ ಭವನದಲ್ಲಿ ಕರ್ನಾಟಕ ದಲಿತ ಮಹಿಳಾ ಒಕ್ಕೂಟ ವತಿಯಿಂದ ಆಯೋಜಿಸಿದ್ದ ಬಳ್ಳಾರಿ ಜಿಲ್ಲಾ ಮಟ್ಟದ ಮಹಿಳಾ ಪದಾಧಿಕಾರಿಗಳ ಹಾಗು ಕಾರ್ಯಕರ್ತರ ಸಮಾವೇಶ ಹಾಗು ತ್ಯಾಗಮಯಿ ಮಾತೆ ರಾಮಾಭಾಯಿ ಅಂಬೇಡ್ಕರ್ ಮತ್ತು ಸಾವಿತ್ರಿ ಬಾಪುಲೆ ರವರ ಜನ್ಮ ದಿನಾಚರಣೆ ಕಾರ್ಯಕ್ರಮ ಉದ್ಘಾಟನೆಯನ್ನು ಡಾ. ಬಾಬು ಜಗಜೀವನ್ ಚರ್ಮ ಕೈಗಾರಿಕಾ ಅಭಿರುದ್ದಿ ನಿಗಮದ ಅಧ್ಯಕ್ಷರು ಹಾಗು ರಾಜ್ಯದ ಹಿರಿಯ ದಲಿತ ನಾಯಕರಾದ ಮುಂಡ್ರಿಗಿ ನಾಗರಾಜ್ ರವರು ನೆರವೇರಿಸಿ ಮಾತನಾಡಿದರು. ಈ ಸಂದರ್ಭದಲ್ಲಿ ಜವಳಿ ನಿಗಮದ ಮಾಜಿ ಉಪಾಧ್ಯಕ್ಷರು ಶ್ರೀಮತಿ ಕಮಲಮ್ಮ ರವರು, ದಲಿತ ಸಾಹಿತಿ ವೆಂಕಮ್ಮ ರವರು, ಸಂಘಟನೆಯ ಮಹಿಳಾ ಸಂಚಾಲಕರು ಭಾಗ್ಯಮ್ಮ ನಾರಾಯಣ ಸ್ವಾಮಿ ರವರು, ಹೆಗ್ಗರೆ ರಾಮಣ್ಣ ರವರು, ಶ್ರೀ ಕೋಲಾರ ನಾರಾಯಣ ಸ್ವಾಮಿ ರವರು, ಶ್ರೀ ಸೋಮನಹಳ್ಳಿ ಅಂದಾನಿ ರವರು, ಯಾದಗಿರಿ ಜಿಲ್ಲೆಯ ಶ್ರೀನಿವಾಸ್ ನಾಯಕ ರವರು, ಬಳ್ಳಾರಿ ಜಿಲ್ಲಾ ಸಂಚಾಲಕರು ರಾಮಣ್ಣ ರವರು, ಮಹಿಳಾ ಜಿಲ್ಲಾ ಸಂಚಾಲಕರು ಮಲ್ಲೇಶ್ವರಿ ಅತಾವುಲ್ಲ ರವರು, ಕಬ್ಬಳಿ ಮೈಲಪ್ಪ ರವರು,ದಲಿತ ಮುಖಂಡರು, ಮಹಿಳೆಯರು ಇನ್ನು ಮೊದಲಾದವರು ಹಾಜರಿದ್ದರು.

# ಮಹಿಳೆಯರು ಮತ್ತು ಮಕ್ಕಳ ಸಮಸ್ಯೆಗಳ ಪರಿಹಾರಕ್ಕಾಗಿ ಸೂಕ್ತ ಕ್ರಮ ಕೈಗೊಳ್ಳಲು ಆಗ್ರಹಿಸಿ ಮನವಿ




**ಮಲ್ಲಮ್ಮ ನುಡಿ ವಾರ್ತೆ ಬಳ್ಳಾರಿ**

ಮಹಿಳೆಯರು ಮತ್ತು ಮಕ್ಕಳ ಮೇಲಿನ ಅಪರಾಧಗಳ ವಿರುದ್ಧ ಸಮರ ಹೂಡಲು ರಾಜ್ಯವ್ಯಾಪಿ ಆಂದೋಲನದ ಸಮಾರೋಪ ಕಾರ್ಯಕ್ರಮದ ಭಾಗವಾಗಿ ಇಂದು ಜಿಲ್ಲಾಧಿಕಾರಿಗಳ ಮೂಲಕ ರಾಜ್ಯದಲ್ಲಿ ಮಹಿಳೆಯರು ಮತ್ತು ಮಕ್ಕಳ ಸಮಸ್ಯೆಗಳ ಪರಿಹಾರಕ್ಕಾಗಿ ಸೂಕ್ತ ಕ್ರಮಗಳನ್ನು ಕೈಗೊಳ್ಳಲು ಆಗ್ರಹಿಸಿ ಮುಖ್ಯಮಂತ್ರಿಗಳಿಗೆ ಮನವಿ ಪತ್ರವನ್ನು ಸಲ್ಲಿಸಲಾಯಿತು.

ಈ ಸಂದರ್ಭದಲ್ಲಿ ಎ ಐ ಎಂ ಎಸ್ ಎಸ್ ನ ಜಿಲ್ಲಾಧ್ಯಕ್ಷರಾದ ಶ್ರೀಮತಿ ಕೆ.ಎಂ. ಈಶ್ವರಿ ಮಾತನಾಡಿ "ಅಖಿಲ ಭಾರತ ಮಹಿಳಾ ಸಾಂಸ್ಕೃತಿಕ ಸಂಘಟನೆಯ ಕರ್ನಾಟಕ ರಾಜ್ಯ ಸಮಿತಿಯು *25 ನವೆಂಬರ್ 2025 ರಿಂದ 25 ಮಾರ್ಚ್ 2026ರ* ವರೆಗೆ *ಮಹಿಳೆಯರು ಮತ್ತು ಮಕ್ಕಳ ಮೇಲಿನ ಅಪರಾಧಗಳ ವಿರುದ್ಧ ಸಮರ ಹೂಡಲು* ರಾಜ್ಯವ್ಯಾಪಿ ಆಂದೋಲನದ ಭಾಗವಾಗಿ ಸಹಿ ಸಂಗ್ರಹಣಾ ಅಭಿಯಾನವನ್ನು ಕೈಗೆತ್ತಿ–ಕೊಂಡಿತ್ತು. ಈ ಹೋರಾಟಕ್ಕೆ ಸ್ಪಂದಿಸಿದ ರಾಜ್ಯದ ಸುಚಿಂತಕರು, ಪ್ರಗತಿಪರರು, ಎಲ್ಲಾ ವಯೋಮಾನದ ಎಲ್ಲಾ ವರ್ಗದ ಜನತೆಯು ಮುಂದಿಟ್ಟ ತಮ್ಮ ಮನ:ಪೂರ್ವ ಆಶಯ ಮತ್ತು ಒತ್ತಾಸೆಗೆ ಸ್ಪಂದಿಸಿ ಸರ್ಕಾರ ಕೆಲವು ಕಾರ್ಯ ಸೂಚಿಗಳನ್ನು ಮಾಡಿದೆ. ರಾಜ್ಯದಲ್ಲಿ ಮರ್ಯಾದೆಗೇಡು ಹತ್ಯೆಗಳನ್ನು ತಡೆಗಟ್ಟಲು "ಇವ ನಮ್ಮವ" ಕಾಯ್ದೆಯನ್ನು ಜಾರಿಗೊಳಿಸಿದೆ, 16 ವರ್ಷಕ್ಕಿಂತ ಕಡಿಮೆ ವಯಸ್ಸಿನ ಮಕ್ಕಳಿಗೆ ಸಾಮಾಜಿಕ ಮಾಧ್ಯಮಗಳ ಬಳಕೆಯನ್ನು ನಿರ್ಬಂಧಿಸಿದೆ. ಈ ಕ್ರಮಗಳು ಸ್ವಾಗತಾರ್ಹ. ಇದು ಜನಾಭಿಪ್ರಾಯಕ್ಕೆ ಸಂದ ಜಯ. ಈ ಕಾನೂನುಗಳು ಪರಿಣಾಮಕಾರಿಯಾಗಿ ತಳಮಟ್ಟದವರೆಗೂ ಕಾರ್ಯನಿರ್ವಹಿಸುವಂತೆ ಮಾಡಲು ಸೂಕ್ತ ಕ್ರಮಗಳನ್ನು ಕೈಗೊಳ್ಳಬೇಕು.ಎಂದರು.

ಈ ಸಂದರ್ಭದಲ್ಲಿ ಎ ಐ ಎಂ ಎಸ್ ಎಸ್ ನ ಪದಾಧಿಕಾರಿಗಳಾದ ವಿಜಯಲಕ್ಷ್ಮಿ, ಪದ್ಮ, ಗಿರಿಜಾ, ವಿದ್ಯಾ, ಸೌಮ್ಯ ಸದಸ್ಯರಾದ ಸೌಮ್ಯ, ಶೋಭಾ, ಕರಿಬಸಮ್ಮ ಉಪಸ್ಥಿತರಿದ್ದರು.

# ಕಾಂಗ್ರೆಸ್ ಮುಖಂಡ ಗೋಪಾಲಕೃಷ್ಣ ನಾಯಕ ಹತ್ಯೆಗೆಯತ್ನ: ಕೂದಲಳತೆಯಲ್ಲಿ ಪಾರು

**ಮಲ್ಲಮ್ಮ ನುಡಿ ವಾರ್ತೆ ಅಂಕೋಲಾ**

ಕಾಂಗ್ರೆಸ್ ಮುಖಂಡ ಗೋಪಾಲಕೃಷ್ಣನಾಯಕ ಇವರ ಮೇಲೆ ಬುಧವಾರ ಬೆಳಗಿನ ಸಮಯ ಕೊಲೆ ಯತ್ನ ನಡೆದಿದ್ದು, ಆಗಂತುಕರಿಂದ ತಪ್ಪಿಸಿಕೊಂಡು ಓಡಿ ಪ್ರಾಣ ಉಳಿಸಿಕೊಂಡ ಘಟನೆ ಈಗ ತಾಲೂಕನ್ನು ತಲ್ಲಣಗೊಳಿಸುವಂತೆ ಮಾಡಿದೆ.

ಗೋಪಾಲಕೃಷ್ಣನಾಯಕ ಈತನು ಕಾಂಗ್ರೆಸ್ ಪಕ್ಷದಲ್ಲಿದ್ದು,ಕಾಂಗ್ರೆಸ್‌ನಲ್ಲಿಯೂ ಕೂಡ ತನ್ನದೇ ಪ್ರತ್ಯೇಕ ಗುಂಪನ್ನು ಕಟ್ಟಿಕೊಂಡಿದ್ದರು.ಬುಧವಾರ ರಾಘವೇಂದ್ರ ನಾಯಕ ಎನ್ನುವವನ ಜತೆಗೆ ಬೆಳಿಗ್ಗೆ 9 ಗಂಟೆ ಸುಮಾರಿಗೆ ಆಗಮಿಸಿ ಹೇರ್‌ಕಟಿಂಗ್ ಮಾಡಿಸಿಕೊಂಡು ಹೊರ ಬಂದು ರಥಬೀದಿಯತ್ತ ನಿಂತಿ–




ದ್ದರು. ತಕ್ಷಣ ಅಲ್ಲಿಗೆ ಆಗಮಿಸಿದ ಆರು ಜನರು ಇತನ ಮೇಲೆ ದಾಳಿ ಆರಂಭಿಸಿದರು. ಚೆನ್ನಾಗಿ ಹೊಡೆದ ನಂತರ ಗೋಪಾಲಕೃಷ್ಣನಾಯಕ ಇತನು ತಪ್ಪಿಸಿಕೊಂಡು ಹೋಗಲು ಮುಂದೆ ಓಡುತ್ತಿದ್ದಾಗ ಆಯತಪ್ಪಿ ಕೆಳಗೆ ಬಿದ್ದಾಗ ಕೈಯಿಂದ ಕಬ್ಬಿಣದ ಸರಳಿಕೆ ಹಿಡಿದು ಕುತ್ತಿಗೆ ಭಾಗಗಕ್ಕೆ ಪಂಚ್ ಮಾಡಿದರು ಇದರಿಂದ ರಕ್ತದ ಮಡವಿನಲ್ಲಿ ಬಿದ್ದ ಗೋಪಾಲಕೃಷ್ಣನಾಯಕ ತಪ್ಪಿಸಿಕೊಂಡು ಮತ್ತೆ ಓಡಲು ಪ್ರಯತ್ನಿಸಿದಾಗ ಇಬ್ಬರೂ ಮತ್ತೆ ಎದುರಾದರು. ಇದನ್ನು ಗಮನಿಸಿದ ಗೋಪಾಲಕೃಷ್ಣ ನಾಯಕ ರಸ್ತೆಗೆ ಹೊಂದಿಕೊಂಡಿದ್ದ ಖಾಸಗಿ ಬ್ಯಾಂಕ್ ಒಳಗೆ ನುಗ್ಗಿ ನಂತರ ಕದ ಹಾಕಿಕೊಂಡನು ಎನ್ನಲಾಗಿದೆ.

ಗೋಪಾಲಕೃಷ್ಣನಾಯಕ ಇವರ ಜತೆಗೆ ಬಂದಿದ್ದ ರಾಘವೇಂದ್ರ ನಾಯಕ ಇತನ ಮೇಲೆಯೂ ಹಲ್ಲೆ ನಡೆದಿದೆ.ಆದರೆ ಇತನು ಟಾರ್ಗೆಟ್ ಇಲ್ಲದಿರುವುದರಿಂದ ತಕ್ಷಣ 6 ಜನರು ಸ್ಥಳದಿಂದ ನಾಪತ್ತೆಯಾದರು.ತಕ್ಷಣ ಪೊಲೀಸರು ಸ್ಥಳಕ್ಕೆ ಧಾವಿಸಿ ಗೋಪಾಲಕೃಷ್ಣನಾಯಕರನ್ನು ಆರ್ಯ ಆಸ್ಪತ್ರೆಗೆ ದಾಖಲಿಸಿದರು. ನಂತರ ಸ್ಕ್ಯಾನ್ ಮಾಡಲು ಹೊನ್ನಾವರಕ್ಕೆ ಕಳುಹಿಸಿದರು.ವಿಷಯ ತಿಳಿಯುತ್ತಿದ್ದಂತೆ ಆಸ್ಪತ್ರೆಗೆ ನೂರಾರು ಜನರು ಆಗಮಿಸಿದರು.ಆಂಬುಲೆನ್ಸ್ ಮೂಲಕ ಸ್ಕ್ಯಾನ್‌ಗಾಗಿ ಅವರನ್ನು ಸಾಗಿಸುತ್ತಿದ್ದ ಸಂದರ್ಭದಲ್ಲಿ ಆಂಬುಲೆನ್ಸ್ ಮೇಲೆ ನಿಂತು ಅಲ್ಲಿ ನೆರೆದ ಜನರಿಗೆ ಕೈ ಬೀಸಿ ದೇವರು ದೊಡ್ಡವನು ನನಗೇನು ಹಾನಿ ಆಗಿಲ್ಲಾ ಎಂದು ಹೇಳುತ್ತಲೆ ಕೈ ಮುಗಿದಿದ್ದಾನೆ. ತಕ್ಷಣ ಪೊಲೀಸರು ಆತನನ್ನು ಸುತ್ತುವರಿದು ಆಂಬುಲೆನ್ಸ್‌ನಲ್ಲಿ ಹಾಕಿ ಕರೆದುಕೊಂಡು ಸಾಗಿದರು.

ಆರೋಪಿಗಳು ತಂದಿದ್ದರು ಎನ್ನಲಾದ ಕಾರನ್ನು ಪೊಲೀಸರು ವಶಕ್ಕೆ ಪಡೆದಿದ್ದಾರೆ. ಹಾಗೆ ಕಾರವಾರದಿಂದ ಗೋವಾಕ್ಕೆ ತೆರಳುವ ನಾಕಾ ಬಂದಿಯಲ್ಲಿ 6 ಆರೋಪಿಗಳನ್ನು ಬಂದಿಸಿರುವುದಾಗಿ ಹೇಳಲಾಗಿದೆ. ಆದರೆ ಇದುವರೆಗೂ ಯಾವುದೇ ಮಾಹಿತಿ ಪೊಲೀಸ್ ನೀಡಿಲ್ಲ. 6 ಆರೋಪಿಗಳಲ್ಲಿ ಒಬ್ಬ ಅಂಕೋಲಾದವನು ಎನ್ನುವುದು ಕೂಡ ಕೇಳಿಬರುತ್ತಿರುವ ಮಾತಾಗಿದೆ. ಇದರಿಂದಾಗಿ ಅಂಕೋಲಾದಲ್ಲಿ ಈಗ ವಾತಾವರಣವೇ ಬದಲಾದಂತಾಗಿದೆ.2013ರಲ್ಲಿ ಉದ್ಯಮಿ ಆರ್.ಎನ್. ನಾಯಕ ಅವರನ್ನು ಕೂಡ ಸುಫಾರಿ ಕಿಲ್ಲರ್‌ಗಳು ದಾಳಿ ನಡೆಸಿ ಹತ್ಯೆ ಮಾಡಿದ್ದರು.ಹೀಗಾಗಿ ಗೋಪಾಲಕೃಷ್ಣ ನಾಯಕ ಅವರ ಹತ್ಯೆಗೂ ಸುಫಾರಿ ನೀಡಲಾಗಿದೆ ಎಂಬ ಅನುಮಾನದಟ್ಟವಾಗಿದೆ. ಘಟನಾಸ್ಥಳಕ್ಕೆ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ದೀಪನ್, ಡಿವೈಎಸ್‌ಪಿ ಗಿರೀಶ, ಪಿಐ ಚಂದ್ರಶೇಖರ ಮಠಪತಿ ಸ್ಥಳ ಪಂಚನಾಮೆ ನಡೆಸಿ ತನಿಖೆ ಕೈಗೊಂಡಿದ್ದಾರೆ.

# ಸಾಂಸ್ಕೃತಿಕ ಕಾರ್ಯಕ್ರಮ




**ಮಲ್ಲಮ್ಮ ನುಡಿ ವಾರ್ತೆ ಬಳ್ಳಾರಿ**

ಎರ್ರಿಸ್ವಾಮಿ ತೊಗಲುಗೊಂಬೆ ಕಲಾ ಮೇಳ ಟ್ರಸ್ಟ್ (ರಿ) ಬಳ್ಳಾರಿ. ವತಿಯಿಂದ, ಶ್ರೀ ವೀರಾಂಜನೇಯಸ್ವಾಮಿ ದೇವಸ್ಥಾನದ ಆವರಣ, ಗುಗ್ಗರಹಟ್ಟಿಯಲ್ಲಿ ( ಪವರ್ ಸ್ಟಾರ್ ಡಾ: ಪುನೀತ್ ರಾಜ್ ಕುಮಾರ್ ರವರ ಜನ್ಮದಿನದ ಪ್ರಯುಕ್ತ ) ಸಂಸ್ಕೃತಿಕ ಕಾರ್ಯಕ್ರಮಗಳನ್ನು ಏರ್ಪಡಿಸಲಾಗಿತ್ತು. ಪ್ರ.ಮು. ಗುರುಗಳು, ಹೆಚ್. ಕೆ.ತಿಪ್ಪೇಸ್ವಾಮಿ, ಕೆ. ಶಿವಶಂಕರ, , ಜಿ. ಶಿವಶಂಕರ್, ಮತ್ತು ಇತರರು ಗಣ್ಯಮಾನ್ಯರು,ಸಸಿಗೆ ನೀರು ಉಣಿಸುವ ಮುಖಾಂತರ ಉದ್ಘಾಟನೆಯನ್ನು ನೆರವೇರಿಸಿದರು. ಜಿ. ಶಿವಶಂಕರ್ ಮಾತನಾಡಿ, ಅಪ್ಪು ರವರು ಚಲನಚಿತ್ರ, ಕ್ಷೇತ್ರದಲ್ಲಿ ಮಾಡಿರುವ ನಟನೆ ಬಗ್ಗೆ, ಅವರ ಸಂದೇಶಗಳ ಬಗ್ಗೆ, ಸೇವೆಗಳ ಸಾಧನೆ ಬಗ್ಗೆ, ತುಂಬಾ ಅಚ್ಚುಕಟ್ಟಾಗಿ ವಿವರಿಸಿದರು, ಹಾಗೆಯೇ ನಮ್ಮ ಎರ್ರಿಸ್ವಾಮಿ ತೊಗಲುಗೊಂಬೆ ಕಲಾ ಮೇಳ ಟ್ರಸ್ಟಿನ, ಅಧ್ಯಕ್ಷರಾದ ವೈ.ಪ್ರಭು ರವರು ಇಂತಹ ಕಾರ್ಯಕ್ರಮವನ್ನು ಮಾಡಿರುವುದು ತುಂಬಾ ಸಂತೋಷದ ವಿಷಯ ಎಂದು ಅಭಿನಂದಿಸಿದರು. ವೇದಿಕೆ ಮೇಲೆ ಕೆ, ಶಿವಶಂಕರ, ಜಿ. ಶಿವಶಂಕರ್, ಕ್ಯಾದಿಗೆ ಓಬಳೇಶ್, ಜಿ ಹನುಮಂತ ರೆಡ್ಡಿ, ಎಂ. ಪುರುಷೋತ್ತಮ, ಜನಪದ ಗಾಯಕರಾದ ಜಡೇಶ ಎಮ್ಮಿಗನೂರು, ಮತ್ತು ಇತರರು ಗಣ್ಯ ಮಾನ್ಯರು ಉಪಸ್ಥಿತರಿದ್ದರು. ಆರಂಭದಲ್ಲಿ ಟ್ರಸ್ಟ್ ಅಧ್ಯಕ್ಷರಾದ ವೈ.ಪ್ರಭು ಪ್ರಾಸ್ತಾವಿಕ ನುಡಿದರು.ನಂತರ ಜಡೇಶ್ ಎಮ್ಮಿಗನೂರು, ಮತ್ತು ತಂಡದವರಿಂದ ಅಪ್ಪು ಹಾಡುಗಳು ಜನಮನ್ನಣೆ ಪಡೆದರು. ಕುಮಾರಿ, ಹರಿಪ್ರಿಯ, ರವರಿಂದ ಯುಗಳ ನೃತ್ಯ ಪ್ರದರ್ಶನ ಮಾಡಿದರು. ವೈ. ಉಮೇಶ್ ನಿರೂಪಣೆ ಮತ್ತು ಶ್ರೀಮತಿ ಪಿ.ರೇಖಾ ವಂದನಾರ್ಪಣೆ ಮಾಡಿದರು.

### ಮುದಗಲ್ ಕುಡಿಯುವ ನೀರಿನ ಸಮಸ್ಯೆ
# ನೀರಿನ ಬವಣೆ ನೀಗಿಸಲು ಜಿಲ್ಲಾಧಿಕಾರಿಗಳೊಂದಿಗೆ ಚರ್ಚೆ



ಮುದಗಲ್ : ಪಟ್ಟಣದಲ್ಲಿ ದಿನೇ ದಿನೇ ಕುಡಿಯುವ ನೀರಿನ ಸಮಸ್ಯೆ ಬಿಗಡಾಯಿಸಿದ್ದು ಬುಧವಾರ ಜಿಲ್ಲಾಧಿಕಾರಿಗಳೊಂದಿಗೆ ಲಿಂಗಸಗೂರು ಕ್ಷೇತ್ರದ ಮಾಜಿ ಶಾಸಕ ಡಿ.ಎಸ್.ಹೂಲಗೇರಿ ಭೇಟಿ ನೀಡಿ ಸಮಸ್ಯೆ ಬಗ್ಗೆ ಕ್ರಮಕ್ಕೆ ಒತ್ತಾಯಿಸಿ ಚರ್ಚಿಸಿದರು. 24*7 ನೀರಿನ ಕಾಮಗಾರಿ ರದ್ದಾಗಿದ್ದು ಮುದಗಲ್ ನಲ್ಲಿ ನೀರಿನ ಸಮಸ್ಯೆ ಹೆಚ್ಚುತ್ತಿರುವ ಹಿನ್ನಲೆಯಲ್ಲಿ ಕೂಡಲೇ ಟ್ಯಾಂಕ್ ನಿರ್ಮಾಣ ಕಾಮಗಾರಿಗೆ ಮತ್ತು ನೀರಿನ ಸಮಸ್ಯೆ ಪರಿಹರಿಸಲು ಅಗತ್ಯ ಕ್ರಮ ಕೈಗೊಳ್ಳುವಂತೆ ಜಿಲ್ಲಾಧಿಕಾರಿಗಳಿಗೆ ಸಮಜಾಯಿಸಿದರು. ಈಗಾಗಲೇ ಡಿ.ಎಂ.ಎಫ್ ಅನುದಾನದಡಿಯಲ್ಲಿ 1ಕೋಟಿ20 ಲಕ್ಷ ಅನುದಾನ ಮುದಗಲ್ ಕುಡಿಯುವ ನೀರಿಗಾಗಿ ಮೀಸಲಿರಿಸಿದ್ದು ತ್ವರಿತ ಗತಿಯಲ್ಲಿ ಕಾಮಗಾರಿ ಕೈಗೊಳ್ಳಲಾಗುವುದು ಜೊತೆಗೆ ಜಲ ಶುದ್ಧೀಕರಣ ಘಟಕದ ಉನ್ನತೀಕರಣಕ್ಕಾಗಿ 40 ಲಕ್ಷ 75 ಸಾವಿರ ಅನುದಾನ ಬಿಡುಗಡೆಯಾಗಿದ್ದು ಟೆಂಡರ್ ಪ್ರಕ್ರಿಯೆ ಹಂತದಲ್ಲಿದೆ ಎಂದು ಪ್ರತಿಕ್ರಿಯಿಸಿದರು. ಇದಲ್ಲದೇ ನವಲಿ ಜಾಕ್ ವೆಲ್ ನಲ್ಲಿ ಶಾಶ್ವತ ಕುಡಿಯುವ ನೀರಿನ ನಿರ್ವಹಣೆಗಾಗಿ ಮೋಟಾರ್ ಪಂಪ್ ಗಳಿಗೆ ಅಂದಾಜು 65 ಲಕ್ಷ ಹಣ ಮೀಸಲಿರಿಸಿದ್ದು ಅಧಿಕಾರಿಗಳಿಗೆ ಅಂದಾಜು ಪತ್ರಿಕೆ ಸಲ್ಲಿಸಲು ಸೂಚಿಸಿದರು. ಈ ಸಂದರ್ಭದಲ್ಲಿ ಪ್ರಮುಖರಾದ ತಮ್ಮಣ್ಣ ಗುತೇದಾರ, ಎಂ.ಡಿ.ರಫೀ ಲಿಂಗಸಗೂರು ಹಾಗೂ ಇತರರಿದ್ದರು.

# ವಿಪತ್ತು ನಿರ್ವಹಣೆಯ ಅಣುಕು ಪ್ರದರ್ಶನ: ಕ್ಯಾಪ್ಟನ್

• **ಮಲ್ಲಮ್ಮ ನುಡಿವಾರ್ತೆ ಕೊಪ್ಪಳ**

ರಾಷ್ಟ್ರೀಯ ವಿಪತ್ತು ನಿರ್ವಹಣಾ ಪಡೆ (ಎನ್.ಡಿ.ಆರ್.ಎಫ್) ಬೆಟಾಲಿಯನ್ 10ನೇ ತಂಡದಿಂದ ವಿಪತ್ತು ನಿರ್ವಾಹಣೆಯ ಅಣುಕು ಪ್ರದರ್ಶನ ಕಾರ್ಯಕ್ರಮವು ಮಾರ್ಚ್ 26ರಂದು ಬೆಳಿಗ್ಗೆ 8.30 ಗಂಟೆಗೆ ಜಿಲ್ಲೆಯ ಗಂಗಾವತಿ ತಾಲ್ಲೂಕಿನ ಸಾಣಾಪೂರ ಕೆರೆ ವ್ಯಾಪ್ತಿ ಪ್ರದೇಶದಲ್ಲಿ ನಡೆಯಲಿದೆ ಎಂದು ಕೊಪ್ಪಳ ಉಪ ವಿಭಾಗಾಧಿಕಾರಿ ಕ್ಯಾಪ್ಟನ್ ಮಹೇಶ ಮಾಲಗಿತ್ತಿ ಹೇಳಿದರು.

ಅವರು ಬುಧವಾರ ತಮ್ಮ ಕಚೇರಿ ಸಭಾಂಗಣದಲ್ಲಿ ನಡೆದ 2025-26ನೇ ಸಾಲಿನ ಸಂಭವನೀಯ ಅತೀವೃಷ್ಟಿ, ಪ್ರವಾಹದಿಂದ ಹಾನಿಗೊಳಗಾದ ಪ್ರದೇಶದಲ್ಲಿ ಮೊಕ್ ಡ್ರಿಲ್ ಕಾರ್ಯಕ್ರಮದ ಪೂರ್ವಭಾವಿ ಸಭೆಯ ಅಧ್ಯಕ್ಷತೆವಹಿಸಿ ಮಾತನಾಡಿದರು.

ಪ್ರಸಕ್ತಸಾಲಿನಸಂಭವನೀಯಅತೀವೃಷ್ಟಿ, ಪ್ರವಾಹದಿಂದ ಹಾನಿಗೊಳಗಾಗುವ ಪ್ರದೇಶಗಳಲ್ಲಿ ನೈಸರ್ಗಿಕ ವಿಪತ್ತು ಸಮಯದಲ್ಲಿ ಸಂಭವಿಸಬಹುದಾದ ಹಾನಿಯಿಂದ ರಕ್ಷಣೆ ಪಡೆಯುವುದು ಹೇಗೆ ಎಂಬುವುದರ ಕುರಿತಾಗಿ ಎನ್.ಡಿ.ಆರ್.ಎಫ್ ತಂಡ ಮತ್ತು ಕೊಪ್ಪಳ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಜಿಲ್ಲಾ ಪೊಲೀಸ್ ಇಲಾಖೆ, ಜಿಲ್ಲಾ ಅಗ್ನಿಶಾಮಕ ಇಲಾಖೆ ಹಾಗೂ ಇತರೆ ವಿವಿಧ ಇಲಾಖೆಗಳ ಸಹಯೋಗದಲ್ಲಿ ಅಣುಕು ಪ್ರದರ್ಶನದ ಮೂಲಕ ಸಾರ್ವಜನಿಕರಿಗೆ ವಿಶೇಷ ಜಾಗೃತಿ ಮೂಡಿಸಲಾಗುತ್ತಿದೆ. ಮಾ. 26ರ ಬೆಳಿಗ್ಗೆ 08-30ಕ್ಕೆ ಸಾಣಾಪೂರ ಕೆರೆ ವ್ಯಾಪ್ತಿಯ ಪ್ರದೇಶದಲ್ಲಿ ನಡೆಯಲಿರುವ ಎನ್.ಡಿ.ಆರ್. ಎಫ್ ತಂಡದ ಅಣುಕು ಪ್ರದರ್ಶನ ಮೊಕ್ ಡ್ರಿಲ್ ಕಾರ್ಯಕ್ರಮವನ್ನು ಅಚ್ಚುಕಟ್ಟಾಗಿ ಹಮ್ಮಿಕೊಳ್ಳಲು ಗಂಗಾವತಿ ತಾಲ್ಲೂಕು ಆಡಳಿತ, ತಾಲ್ಲೂಕು ಪಂಚಾಯತ್ ಮತ್ತು ಸಾಣಾಪೂರ ಗ್ರಾ.ಪಂ ಅಧಿಕಾರಿಗಳು ಅಗತ್ಯ ಕ್ರಮ ಕೈಗೊಳ್ಳಬೇಕು ಎಂದು ಸೂಚನೆ ನೀಡಿದರು.



ಈ ಕಾರ್ಯಕ್ರಮದಲ್ಲಿ ಪ್ರಥಮ ಚಿಕಿತ್ಸೆ, ಪ್ರವಾಹ ರಕ್ಷಣೆ, ಪ್ರಕೃತಿ ವಿಕೋಪದಿಂದ ಆಗುವ ಅನಾಹುತಗಳು, ಕಟ್ಟಡ ಕುಸಿತ, ರಾಸಾಯನಿಕ ಪದಾರ್ಥಗಳಿಂದ ಆಗುವ ಅನಾಹುತಗಳು ಮತ್ತು ಇನ್ನಿತರ ಅನಾಹುತಗಳಿಂದ ಪಾರಾಗಲು ಹಾಗೂ ಭೂಕಂಪ ಬಂದಾಗ ಹೇಗೆ ರಕ್ಷಣೆ ಮಾಡಬಹುದು ಎಂಬುವುದರ ಬಗ್ಗೆಯೂ ಸಹ ಎನ್.ಡಿ.ಆರ್.ಎಫ್ ತಂಡವು ವಿಶೇಷ ಅರಿವು ಮೂಡಿಸಲಿದ್ದು, ಆಸಕ್ತ ಸಾರ್ವಜನಿಕರು ಇದರ ಸದುಪಯೋಗಪಡೆದುಕೊಳ್ಳಬೇಕೆಂದು ಹೇಳಿದರು.

ಎನ್.ಡಿ.ಆರ್.ಎಫ್. ಡೆಪ್ಯುಟಿ ಕಮಾಂಡೆಂಟ್ ಅಖೀಲ್ ಕುಮಾರ್ ಚೌಬೆ ಅವರು ಮಾತನಾಡಿ, ಅಣುಕು ಪ್ರದರ್ಶನ ಮೂಲಕ ಪ್ರಕೃತಿ ವಿಕೋಪ, ಮಾನವ ನಿರ್ಮಿತ ವಿಕೋಪ, ಅನಿಲ ಸೋರಿಕೆ ತಡೆಗಟ್ಟುವಿಕೆ, ಸುನಾಮಿ, ಭೂಕಂಪ, ಅಗ್ನಿ ಅವಘಡ ಹಾಗೂ ಸಿಡಿಲು ಬಡಿತದಿಂದ ರಕ್ಷಣೆ ಸೇರಿದಂತೆ ಪ್ರಕೃತಿ ವಿಕೋಪ ಸಂದರ್ಭದಲ್ಲಿ ಸಾರ್ವಜನಿಕರು ಯಾವ ರೀತಿ ಮುಂಜಾಗೃತೆ ಕ್ರಮ ಕೈಗೊಳ್ಳಬೇಕು ಮತ್ತು ಇದರ ಜೊತೆಗೆ ರಕ್ತಶ್ರಾವ ತಡೆಗಟ್ಟುವ ಬಗ್ಗೆ, ಹೃದಯಘಾತ ಸಂದರ್ಭದಲ್ಲಿ ತಕ್ಷಣ ಕೈಗೊಳ್ಳಬೇಕಾದ ಕ್ರಮ, ಗಂಟಲಿನಲ್ಲಿ ಸಿಕ್ಕಿಕೊಂಡ ವಸ್ತುಗಳ ಹೊರ ತಗೆಯುವುಕೆ (ಎಫ್.ಪಿ.ಎ.ಓ), ಹಾವು ಮತ್ತು ಇತರೆ ಪ್ರಾಣಿ ಕಡಿತದಿಂದ ರಕ್ಷಣೆ ಮಾಡುಕೊಳ್ಳಬೇಕೆಂಬುವುದರ ಬಗ್ಗೆ ಜಾಗೃತಿ ಮೂಡಿಸಲಾಗುವುದು ಎಂದರು.

ಸಭೆಯಲ್ಲಿ ಜಿಲ್ಲಾ ಪಂಚಾಯತ್ ಉಪಕಾರ್ಯದರ್ಶಿ ಟಿ.ಕೃಷ್ಣಮೂರ್ತಿ, ಜಿಲ್ಲಾ ಅಗ್ನಿಶಾಮಕ ಅಧಿಕಾರಿ ರಾಮಪ್ಪ, ಗಂಗಾವತಿ ತಹಶೀಲ್ದಾರ ವಿಶ್ವನಾಥ ಮುರಡಿ, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ಸಹಾಯಕ ನಿರ್ದೇಶಕ ವಿಠ್ಠಲ್ ಜಾಬಗೌಡರ, ಪೊಲೀಸ್ ಇನ್ಸ್ಪೆಕ್ಟರ್ ಶಿವರಾಜ, ಸೇರಿದಂತೆ ಎನ್.ಡಿ.ಆರ್.ಎಫ್ ತಂಡ, ಗೃಹರಕ್ಷಕ ದಳದ ಹಾಗೂ ಇತರೆ ವಿವಿಧ ಇಲಾಖೆಯ ಅಧಿಕಾರಿಗಳು ಉಪಸ್ಥಿತರಿದ್ದರು.

# ವಿಶ್ವ ಕ್ಷಯರೋಗ: ಜಾಗೃತಿ ಅಗತ್ಯ



• **ಮಲ್ಲಮ್ಮ ನುಡಿ ಹುಣಸಗಿ**

ಎರಡು ಮೂರು ವಾರಗಳಿಂದ ನಿರಂತರ ಕೆಮ್ಮು, ಜ್ವರ, ಹೆಚ್ಚು ಬೆವರುವುದು ಹಾಗೂ ತೂಕ ಕಡಿಮೆಯಾಗುವಂತಹ ಲಕ್ಷಣಗಳು ಕಂಡುಬಂದಲ್ಲಿ ತಕ್ಷಣ ಸಮೀಪದ ಸರ್ಕಾರಿ ಆಸ್ಪತ್ರೆಗೆ ತೆರಳಿ ತಪಾಸಣೆ ಮಾಡಿಸಿಕೊಳ್ಳಬೇಕು ಎಂದು ಹಿರಿಯ ವೈದ್ಯಾಧಿಕಾರಿ ಡಾ. ಎಸ್. ಬಿ. ಪಾಟೀಲ್ ತಿಳಿಸಿದರು.

ಪಟ್ಟಣದ ಸಮುದಾಯ ಆರೋಗ್ಯ ಕೇಂದ್ರದಲ್ಲಿ ನಡೆದ ವಿಶ್ವ ಕ್ಷಯರೋಗ

ದಿನಾಚರಣೆ ಕಾರ್ಯಕ್ರಮದಲ್ಲಿ ಅವರು ಮಾತನಾಡಿ, ಕ್ಷಯರೋಗವು ಸಾಂಕ್ರಾಮಿಕ ರೋಗವಾಗಿರುವುದರಿಂದ ಜನರು ಜಾಗೃತರಾಗಿರಬೇಕು ಎಂದು ಸಲಹೆ ನೀಡಿದರು.

ಕಾರ್ಯಕ್ರಮದಲ್ಲಿ ಡಾ. ರವಿಕಿರಣ್, ಡಾ. ದಿನೇಶ್, ಪಿ. ಬಿ. ಗಸ್ತಿ, ಸುರೇಶ ಪಾಟೀಲ್, ದೇವರಾಜ್, ವೆಂಕಟೇಶ್, ಸೋಮಶಂಕರ್, ಮಂಜುನಾಥ್ ಸೇರಿದಂತೆ ಇತರರು ಉಪಸ್ಥಿತರಿದ್ದರು.

ಮಲ್ಲಿಕಾರ್ಜುನ್ ಕೋರಿ ಕಾರ್ಯಕ್ರಮ ನಿರೂಪಣೆ ಮಾಡಿದರು. ರಂಗನಾಥ್ ವಂದಿಸಿದರು.

# ಬಿಸಿಲಿನ ತಾಪದಿಂದ ಜಾನುವಾರುಗಳ ಆರೋಗ್ಯ ರಕ್ಷಣೆ, ಹಾಲಿನ ಇಳುವರಿ ಕಾಪಾಡಲು ಸಲಹೆ

• **ಮಲ್ಲಮ್ಮ ನುಡಿವಾರ್ತೆ ಕೊಪ್ಪಳ**

ಬಿಸಿಲಿನ ತಾಪ ಹೆಚ್ಚಾಗಿರುವುದರಿಂದ ಜಾನುವಾರುಗಳ ಆರೋಗ್ಯ ರಕ್ಷಣೆ ಹಾಗೂ ಅವುಗಳ ಹಾಲಿನ ಇಳುವರಿ ಕಾಪಾಡಲು ಅಗತ್ಯ ಮುಂಜಾಗ್ರತಾ ಕ್ರಮಗಳನ್ನು ಪಾಲಿಸುವಂತೆ ಪಶುಪಾಲನಾ ಮತ್ತು ಪಶುವೈದ್ಯಕೀಯ ಸೇವಾ ಇಲಾಖೆ ವತಿಯಿಂದ ರೈತರಿಗೆ ಕೆಲವು ಸಲಹೆಗಳನ್ನು ನೀಡಲಾಗಿದೆ.

ಜಾನುವಾರುಗಳನ್ನು ಮುಂಜಾನೆ ಮತ್ತು ಸಾಯಂಕಾಲದ ಸಮಯದಲ್ಲಿ ಮಾತ್ರ ಮೇಯಿಸಲು ಬಿಡಬೇಕು. ಅವುಗಳಿಗೆ ದಿನಕ್ಕೆ 2 ರಿಂದ 3 ಬಾರಿ ಶುದ್ಧವಾದ ನೀರನ್ನು ಕುಡಿಸಬೇಕು. ಮಧ್ಯಾಹ್ನದ ಸಮಯದಲ್ಲಿ ಜಾನುವಾರುಗಳನ್ನು ಕೊಟ್ಟಿಗೆಯಲ್ಲಿ ಅಥವಾ ಗಿಡದ ನೆರಳಿನಲ್ಲಿ ಕಟ್ಟಬೇಕು. ಜಾನುವಾರುಗಳಿಗೆ ದಿನದಲ್ಲಿ 1 ರಿಂದ 2 ಸಾರಿ ಮೈ ತೊಳೆಯಬೇಕು ಹಾಗೂ ಮಿಶ್ರತಳಿ ರಾಸು, ಎಮ್ಮೆಗಳಲ್ಲಿ ದೇಹದ ಉಷ್ಣತೆ ಕಾಪಾಡಲು ಗೋಣಿಚೀಲವನ್ನು ನೀರಿನಲ್ಲಿ ತೋಯಿಸಿ ಮೈ ಮೇಲೆ ಹಾಕಬೇಕು. ದನದ ಕೊಟ್ಟಿಗೆಯನ್ನು ತಂಪಾಗಿ ಇಡಲು ಕೊಟ್ಟಿಗೆಯ ಮೇಲೆ ತೆಂಗಿನ ಗರಿ ಅಥವಾ ಹುಲ್ಲನ್ನು ಹಾಕಿ, ಕಿಟಕಿಗಳಿಗೆ ಗೋಣಿ ಚೀಲಗಳನ್ನು ಕಟ್ಟಿ ನೀರನ್ನು ಸಿಂಪಡಿಸುತ್ತಿರಬೇಕು. ಜಮೀನು ಉಳುಮೆ ಮಾಡಲು ಎತ್ತುಗಳನ್ನು ಮುಂಜಾನೆ ಅಥವಾ ಸಾಯಂಕಾಲದ ಸಮಯದಲ್ಲಿ ಮಾತ್ರ ಕೆಲಸಕ್ಕೆ ಉಪಯೋಗಿಸಬೇಕು. ಕುರಿ ಮತ್ತು ಆಡುಗಳನ್ನು ಸಹ ತಂಪಾದ ಸಮಯದಲ್ಲಿ ಮೇಯಿಸಿ ಮಧ್ಯಾಹ್ನದ ವೇಳೆ ಗಿಡದ ನೆರಳಿನಲ್ಲಿ ನಿಲ್ಲಿಸಬೇಕು. ವಲಸೆ ಕುರಿಗಳು ದೂರದ ಸ್ಥಳಗಳಿಗೆ ಹೋಗುವುದಿದ್ದರೆ, ಮುಂಜಾನೆ ಅಥವಾ ಸಾಯಂಕಾಲದ ಸಮಯದಲ್ಲಿ ಹೊಡೆದುಕೊಂಡು ಹೋಗಬೇಕು. ಕರು, ಕುರಿ, ಮೇಕೆ ಮರಿಗಳಿಗೆ ಸರಿಯಾದ ಪ್ರಮಾಣದಲ್ಲಿ ಹಾಲನ್ನು ಕುಡಿಸಬೇಕು ಹಾಗೂ ನೀರನ್ನು ಸಹ 2 ರಿಂದ 3 ಸಾರಿ ಕುಡಿಸಬೇಕು.

ಹೈನು ರಾಸುಗಳಿಗೆ ಸಾಧ್ಯವಾದಷ್ಟು ಪೌಷ್ಠಿಕ ಆಹಾರ ಹಾಗೂ ಲಭ್ಯವಿರುವ ಹಸಿರು ಮೇವನ್ನು ಕೊಡಬೇಕು. ಪೌಷ್ಠಿಕ ಆಹಾರ ಅಥವಾ ಕುಡಿಯುವ ನೀರಿನಲ್ಲಿ ಲವಣ ಮಿಶ್ರಣ, ಉಪ್ಪು ಹಾಗೂ ಬೆಲ್ಲವನ್ನು ನಿಗದಿತ ಪ್ರಮಾಣದಲ್ಲಿ ಕೊಡಬೇಕು. ಕೊಟ್ಟಿಗೆಯ ಸುತ್ತಮುತ್ತ ತೋಟ, ಹೊಲದ ಬದವುಗಳಲ್ಲಿ ಮೇವಿನ ಮರಗಳನ್ನು ಬೆಳೆಸುವುದರಿಂದ ಜಾನುವಾರುಗಳಿಗೆ ತಂಪಾದ ನೆರಳು ಹಾಗೂ ಪೌಷ್ಠಿಕ ಆಹಾರವಾಗಿ ಹಸಿರು ಸೊಪ್ಪು ತಿನ್ನಿಸಲು ಅನುಕೂಲವಾಗುತ್ತದೆ. ಜಾನುವಾರುಗಳಿಗೆ ಮುಂಜಾಗ್ರತೆಯಾಗಿ ಇಲಾಖೆಯಿಂದ ಉಚಿತವಾಗಿ ನೀಡುವ ಸಾಂಕ್ರಾಮಿಕ ರೋಗಗಳ ಲಸಿಕೆಗಳನ್ನು ಕಾಲಕಾಲಕ್ಕೆ ಹಾಕಿಸಬೇಕು. ಅವುಗಳಿಗೆ ಜಂತುನಾಶಕ ಔಷಧಿಯನ್ನು ವರ್ಷದಲ್ಲಿ 2 ರಿಂದ 3 ಸಾರಿ ಕುಡಿಸಬೇಕು. ಯಾವುದೇ ಸಮಯದಲ್ಲಿ ಕಾಯಿಲೆಯಿಂದ ಬಳಲುವ ಜಾನುವಾರುಗಳನ್ನು ಹತ್ತಿರದ ಪಶುವೈದ್ಯಕೀಯ ಸಂಸ್ಥೆಗಳಲ್ಲಿ ಚಿಕಿತ್ಸೆ ಕೊಡಿಸಬೇಕು. ನಿರ್ಜಲೀಕರಣಗೊಂಡ ಜಾನುವಾರುಗಳಿಗೆ ಉಪ್ಪು, ಅಡುಗೆ ಸೋಡಾ, ಬೆಲ್ಲ ಹಾಗೂ ಲಿಂಬೆಹಣ್ಣಿನ ರಸವನ್ನು ನೀರಿನಲ್ಲಿ ಮಿಶ್ರಣ ಮಾಡಿ ದಿನದಲ್ಲಿ 3 ರಿಂದ 4 ಸಾರಿ ಕುಡಿಸಬೇಕು. ರೈತರು ತಮ್ಮ ಜಮೀನಿನಲ್ಲಿರುವ ಮೇವನ್ನು ಯಾವುದೇ ಕಾರಣಕ್ಕೂ ಸುಟ್ಟು ಹಾಕದೆ ಬಣವೆ ಹಾಕಿ ಅಥವಾ ಸುರಳಿ ಸುತ್ತಿಕೊಂಡು (ಬೇಲಿಂಗ್) ಮೇವನ್ನು ಸಂಗ್ರಹಿಸಬೇಕು. ಇದರಿಂದ ಭೂಮಿಯ ಫಲವತ್ತತೆ ಹಾಳಾಗದಂತೆ ತಡೆಯುವುದರ ಜೊತೆಗೆ ವಾಯುಮಾಲಿನ್ಯ ನಿಯಂತ್ರಣ ಮತ್ತು ಜಾನುವಾರುಗಳಿಗೆ ಮೇವಿನ ಕೊರತೆಯನ್ನು ನಿಗಿಸಬಹುದು. ರೈತರು ಮೇವನ್ನು ಯಾವುದೇ ಕಾರಣಕ್ಕೂ ಹೊರ ಜಿಲ್ಲೆಗಳಿಗೆ ಅಥವಾ ಹೊರ ರಾಜ್ಯಗಳಿಗೆ ಮಾರಾಟ ಮಾಡಬಾರದು.

ಹೆಚ್ಚಿನ ಮಾಹಿತಿಗಾಗಿ ಪಶುಪಾಲನಾ ಮತ್ತು ಪಶುವೈದ್ಯಕೀಯ ಸೇವಾ ಇಲಾಖೆಯ ಉಪನಿರ್ದೇಶಕರ ಕಚೇರಿ ದೂರವಾಣಿ ಸಂಖ್ಯೆ: 08539-221408, ಕೊಪ್ಪಳ ಪಾಲಿಕ್ಲಿನಿಕ್ ಮೊ.ನಂ: 9844187842 ಕೊಪ್ಪಳ ಪಶು ಆಸ್ಪತ್ರೆ ಮೊ.ನಂ: 9886309968, ಗಂಗಾವತಿ ಪಶು ಆಸ್ಪತ್ರೆ ಮೊ.ನಂ: 9448601226, ಕುಷ್ಟಗಿ ಪಶು ಆಸ್ಪತ್ರೆ ಮೊ.ನಂ: 9663154018, ಯಲಬುರ್ಗಾ ಪಶು ಆಸ್ಪತ್ರೆ ಮೊ.ನಂ: 9620022851, ಕನಕಗಿರಿ ಪಶು ಆಸ್ಪತ್ರೆ ಮೊ.ನಂ: 9591637222, ಕಾರಟಗಿ ಪಶು ಆಸ್ಪತ್ರೆ ಮೊ.ನಂ: 9986243808 ಹಾಗೂ ಕುಕನೂರು ಪಶು ಆಸ್ಪತ್ರೆ ಮೊ.ನಂ: 9449641224 ಗೆ ಸಂಪರ್ಕಿಸಬಹುದು ಎಂದು ಕೊಪ್ಪಳ ಪಶುಪಾಲನಾ ಮತ್ತು ಪಶುವೈದ್ಯಕೀಯ ಸೇವಾ ಇಲಾಖೆಯ ಉಪ ನಿರ್ದೇಶಕ ಡಾ. ಪಿ.ಎಂ. ಮಲ್ಲಯ್ಯ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ರಾಯಚೂರು ಒಪೆಕ್ ಆಸ್ಪತ್ರೆಗೆ ಮಾನವ
# ಹಕ್ಕುಗಳ ಆಯೋಗ ಭೇಟಿ; ಪರಿಶೀಲನೆ

• **ಮಲ್ಲಮ್ಮ ನುಡಿ ವಾರ್ತೆ ರಾಯಚೂರು**

ರಾಯಚೂರು ಪ್ರವಾಸದಲ್ಲಿ ಮಾರ್ಚ 25ರಂದು ವಿವಿಧೆಡೆ ಭೇಟಿ ಕೈಗೊಂಡ ಕರ್ನಾಟಕ ರಾಜ್ಯ ಮಾನವ ಹಕ್ಕುಗಳ ಆಯೋಗದ ಅಧ್ಯಕ್ಷರು ಹಾಗೂ ಸದಸ್ಯರು ಸಂಜೆ 6 ಗಂಟೆ ವೇಳೆಗೆ ನಗರದ ರಾಜೀವಗಾಂಧಿ ಸೂಪರ್ ಸ್ಪೆಷಾಲಿಟಿ ಆಸ್ಪತ್ರೆಗೆ ತೆರಳಿ ಆಸ್ಪತ್ರೆಯಲ್ಲಿನ ಸೌಕರ್ಯಗಳ ಬಗ್ಗೆ ಖುದ್ದು ಪರಿಶೀಲಿಸಿ ಮಾಹಿತಿ ಪಡೆದುಕೊಂಡರು.

ಆಸ್ಪತ್ರೆ ಪ್ರವೇಶದ ವೇಳೆ, ಒಬ್ಬ ರೋಗಿಯು ಟ್ರಾಲಿ ಮೇಲೆ, ಮತ್ತೊಬ್ಬರು ನೆಲದ ಮೇಲೆ ಮಲಗಿರುವುದನ್ನು

ಅಧ್ಯಕ್ಷರು ಹಾಗೂ ಸದಸ್ಯರು ನೋಡಿ, ರೋಗಿಗಳ ಅಹವಾಲು ಆಲಿಸಿದರು.

ನಾವು ನೆನ್ನೆಯೇ ಬಂದಿದ್ದೇವೆ. ಇದುವರೆಗೆ ಬೆಡ್ ನೀಡಿಲ್ಲ. ಮರುದಿನ ಬೆಳಗ್ಗೆ ರಕ್ತ ಪರೀಕ್ಷೆ ಮಾಡಿದ್ದಾರೆ ಎಂದು ರೋಗಿಯೊಬ್ಬರು ತಿಳಿಸಿದರು.

ಇದುವರೆಗೆ ಯಾಕೆ ಬೆಡ್ ನೀಡಿಲ್ಲ? ಈ ರೀತಿ ನಿರ್ಲಕ್ಷ್ಯ ಮಾಡಬೇಡಿ ಎಂದು ವೈದ್ಯರ ಕಾರ್ಯವೈಖರಿಗೆ

ಅಧ್ಯಕ್ಷರು ಅಸಮಾಧಾನ ವ್ಯಕ್ತಪಡಿಸಿದರು. ರಿಮ್ಸ್ ನಿರ್ದೇಶಕರಾದ ಡಾ.ರಮೇಶ, ಒಪೆಕ್ ಆಸ್ಪತ್ರೆಯ ವಿಶೇಷಾಧಿಕಾರಿ ಡಾ.ರಮೇಶ ಸಾಗರ್ ಅವರು ಆಗಮಿಸಿ ಆಯೋಗಕ್ಕೆ ಮಾಹಿತಿ ನೀಡಿದರು. ಈ ವೇಳೆ ಡಾ.ಮುರಳೀರಾವ್, ಡಾ.ಗೋಪಿನಾಥ, ಡಾ.ಮಂಜುನಾಥ ಹಟ್ಟಿ, ಡಾ.ವೀರೇಶ ಇದ್ದರು.

# ರಾಷ್ಟ್ರೀಯ ಕ್ಷಯರೋಗ ನಿರ್ಮೂಲನೆ: ಸಾಧಕರಿಗೆ ಪಶಸ್ತಿ ಪ್ರದಾನ

• **ಮಲ್ಲಮ್ಮ ನುಡಿವಾರ್ತೆ ಕೊಪ್ಪಳ**

ವಿಶ್ವ ಕ್ಷಯರೋಗ ದಿನಾಚರಣೆ ಅಂಗವಾಗಿ ಕೊಪ್ಪಳ ಜಿಲ್ಲಾ ಕೇಂದ್ರದಲ್ಲಿ ಮಂಗಳವಾರದಂದು ಜಾಗೃತಿ ಜಾಥಾ ಮೂಲಕ ವಿಶೇಷ ಅರಿವು ಮೂಡಿಸಲಾಯಿತು ಮತ್ತು ವೇದಿಕೆ ಕಾರ್ಯಕ್ರಮದಲ್ಲಿ ರಾಷ್ಟ್ರೀಯ ಕ್ಷಯರೋಗ ನಿರ್ಮೂಲನಾ ಕಾರ್ಯಕ್ರಮದಡಿ ಸಾಧನೆಗೈದ ಸಾಧಕರಿಗೆ ಪಶಸ್ತಿ ಪ್ರಧಾನ ಮಾಡಲಾಯಿತು.



ನಗರದ ಹಳೇ ಜಿಲ್ಲಾ ಆಸ್ಪತ್ರೆ ಆವರಣದಲ್ಲಿ ಏರ್ಪಡಿಸಲಾದ ಜಿಲ್ಲಾಮಟ್ಟದ ವಿಶ್ವ ಕ್ಷಯರೋಗ ದಿನಾಚರಣೆಯ ಜಾಗೃತಿ ಜಾಥಾ ಕಾರ್ಯಕ್ರಮಕ್ಕೆ ಜಿಲ್ಲಾ ಕ್ಷಯರೋಗ ನಿರ್ಮೂಲನಾಧಿಕಾರಿ ಡಾ. ಎ.ಶಶಿಧರ ಅವರು ಹಸಿರು ನಿಶಾನೆ ತೋರಿಸುವ ಮೂಲಕ ಚಾಲನೆ ನೀಡಿದರು. ಜಾಥವು ಹಳೇ ಜಿಲ್ಲಾ ಆಸ್ಪತ್ರೆ ಆವರಣದಿಂದ ಪ್ರಾರಂಭಗೊಂಡು, ನಗರದ ಕೇಂದ್ರೀಯ ಬಸ್ ನಿಲ್ದಾಣ, ಡಾ. ಸಿಂಪಿ ಲಿಂಗಣ್ಣ ರಸ್ತೆ, ದಿವಟರ್ ವೃತ್ತ, ಜವಾಹಾರ ರಸ್ತೆ ಮಾರ್ಗವಾಗಿ ಸಾಹಿತ್ಯ ಭವನದವರೆಗೆ ನಡೆಯಿತು.

*ವೇದಿಕೆ ಕಾರ್ಯಕ್ರಮ:* ಕೊಪ್ಪಳ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಜಿಲ್ಲಾ ಕ್ಷಯರೋಗ ನಿರ್ಮೂಲನಾ ಕೇಂದ್ರ, ತಾಲ್ಲೂಕು ಆರೋಗ್ಯಾಧಿಕಾರಿಗಳ ಕಾರ್ಯಾಲಯ ಹಾಗೂ ವಿವಿಧ ಇಲಾಖೆಗಳು ಮತ್ತು ಸಂಘ ಸಂಸ್ಥೆಗಳ ಸಹಯೋಗದಲ್ಲಿ ನಗರದ ಸಾಹಿತ್ಯ ಭವನದಲ್ಲಿ ಹಮ್ಮಿಕೊಳ್ಳಲಾಗಿದ್ದ ಜಿಲ್ಲಾ ಮಟ್ಟದ ವಿಶ್ವ ಕ್ಷಯರೋಗ ದಿನಾಚರಣೆ ಕಾರ್ಯಕ್ರಮದಲ್ಲಿ ಹಾಸ್ಯ ಕಲಾವಿದರೂ ಹಾಗೂ ಕ್ಷಯರೋಗ ನಿರ್ಮೂಲನ ಕಾರ್ಯಕ್ರಮದ ರಾಯಭಾರಿಗಳಾದ ಗಂಗಾವತಿ ಪ್ರಾಣೇಶ ಅವರು ಭಾಗವಹಿಸಿ ಮಾತನಾಡಿ, ಹಿಂದಿನ ಕಾಲದಲ್ಲಿ ಕ್ಷಯರೋಗವು ಒಂದು ಮಾರಣಾಂತಿಕ ರೋಗವಾಗಿದ್ದು,ಅನೇಕ ಜನರು ಕ್ಷಯರೋಗದಿಂದ ಸಾವನ್ನಪ್ಪುತ್ತಿದ್ದರು. ಆದರೆ, ಈಗ ಕ್ಷಯರೋಗದ ಅರಿವು ಮತ್ತು ಜಾಗೃತಿ ಜನರಲ್ಲಿ ಹೆಚ್ಚಾಗಿ ಮೂಡುತ್ತಿದ್ದು, ಕ್ಷಯರೋಗ ಚಿಕಿತ್ಸೆಯನ್ನು ಪಡೆದಲ್ಲಿ ಸಂಪೂರ್ಣ ಗುಣಮುಖವಾಗಬಹುದಾಗಿದೆ ಎಂದರು.

ಜಿಲ್ಲಾ ಕ್ಷಯರೋಗ ನಿರ್ಮೂಲನ ಅಧಿಕಾರಿಗಳಾದ ಡಾ.ಶಶಿಧರ ಎ. ಅವರು ಪ್ರಾಸ್ತಾವಿಕವಾಗಿ ಮಾತನಾಡಿ, 2026ರ ವಿಶ್ವಕ್ಷಯರೋಗ ದಿನಾಚರಣೆ ಕಾರ್ಯಕ್ರಮವನ್ನು "ಹೌದು, ಭಾರತದ ನೇತೃತ್ವದಲ್ಲಿ, ಜನರ ಶಕ್ತಿಯೊಂದಿಗೆ ನಾವು ಕ್ಷಯರೋಗವನ್ನು ನಿರ್ಮೂಲನೆ ಮಾಡಬಹುದು" ಎಂಬ ಘೋಷವಾಕ್ಯದೊಂದಿಗೆ ಆಚರಿಸಲಾಗುತ್ತಿದೆ. 2025ನೇ ಸಾಲಿನಲ್ಲಿ ಕ್ಷಯರೋಗಿಗಳ ಪತ್ತೆ ವಿಶೇಷವಾಗಿ ಸರ್ಕಾರಿ ಮತ್ತು ಖಾಸಗಿ ವಲಯದಿಂದ ಕಫದಲ್ಲಿ ದೃಢಪಟ್ಟ ಕ್ಷಯರೋಗಿಗಳನ್ನು ಪತ್ತೆ ಹಚ್ಚುವಲ್ಲಿ ವಿಶೇಷ ಸಾಧನೆ ಮಾಡಿದ್ದು, ಜಿಲ್ಲೆಯಲ್ಲಿರುವ 8 ತ್ವರಿತ ಮತ್ತು ಪ್ರಾಥಮಿಕ ಹಂತದಲ್ಲಿ ಕ್ಷಯವನ್ನು ಪತ್ತೆ ಹಚ್ಚುವ ಸಿಬಿನಾಟ್ ಯಂತ್ರಗಳು ಹಾಗೂ 16 ಟ್ರೂನಾಟ್ ಯಂತ್ರಗಳ ಕಫ ಪರೀಕ್ಷೆಯ ಜೊತೆಗೆ ಕ್ಷ-ಕಿರಣ ಮುಖಾಂತರ ಪತ್ತೆ ಹಚ್ಚಿದ್ದರಿಂದ 2025ನೇ ಸಾಲಿನಲ್ಲಿ ಉತ್ತಮ ಸಾಧನೆ ಮಾಡಲು ಅನುಕೂಲವಾಗಿದೆ. ಇದಕ್ಕೆ ಮುಖ್ಯ ಕಾರಣ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಕ್ಷಯರೋಗದ ಹರಡುವಿಕೆಯನ್ನು ತಡೆಗಟ್ಟಲು ಹಮ್ಮಿಕೊಂಡಿರುವ ಅನೇಕ ಯೋಜನೆಗಳಾದ ವಿಭಿನ್ನ ಆರೈಕೆ ಮಾದರಿ, ಆಸ್ಪತ್ರೆಗಳಲ್ಲಿ ಒಳರೋಗಿಗಳ ತಪಾಸಣೆ ಕಾರ್ಯಕ್ರಮ, ಟಿ.ಬಿ. ಗುರುವಾರ, ನಿಕ್ಷಯ್ ದಿವಸ, ಕ್ಷಯ ಮುಕ್ತ ಶಾಲೆ ಮತ್ತು ಕ್ಷಯಮುಕ್ತ ಕಾರ್ಯಸ್ಥಳ ಆಗಿವೆ ಎಂದರು.

ಇದಲ್ಲದೇ ಜಿಲ್ಲಾಧಿಕಾರಿಗಳು, ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು ಹಾಗೂ ಜಿಲ್ಲಾ ಪೋಲಿಸ್ ವರಿಷ್ಠಾಧಿಕಾರಿಗಳು, ತಲಾ ಇಬ್ಬರು ಕ್ಷಯರೋಗಿಗಳನ್ನು ದತ್ತು ಪಡೆದು ಚಿಕಿತ್ಸೆಯನ್ನು ಪೂರೈಸುವವರೆಗೂ ಆರು ತಿಂಗಳ ಕಾಲ 1000 ಮುಖಬೆಲೆಯ ಪೌಷ್ಟಿಕ ಆಹಾರದ ಕಿಟ್‌ಗಳನ್ನು ನೀಡುವ ಮೂಲಕ ಎಲ್ಲರಿಗೂ ಮಾದರಿಯಾಗುವ ಮೂಲಕ ರಾಷ್ಟ್ರೀಯ ಕ್ಷಯರೋಗ ನಿರ್ಮೂಲನ ಕಾರ್ಯಕ್ರಮಕ್ಕೆ ಸಹಕಾರ ನೀಡಿದ್ದಾರೆ. ಇದಕ್ಕಾಗಿ ಈ ವೇದಿಕೆಯ ಮುಖಾಂತರ ಅವರಿಗೆ ಧನ್ಯವಾದಗಳನ್ನು ಸಲ್ಲಿಸುತ್ತೇನೆ ಎಂದು ಹೇಳಿದರು.

ಮುಕುಂದ ಸುಮಿ ಸ್ಪೇಷಲ್ ಸ್ಟೀಲ್ಸ್ ಲಿಮಿಟೆಡ್, ಹೊಸ ಕನಕಾಪುರ ಕಾರ್ಖಾನೆಯವರು 10,00,000 ರೂಪಾಯಿಗಳ 1000 ಪೌಷ್ಟಿಕ ಆಹಾರದ ಕಿಟ್‌ಗಳನ್ನು ಕ್ಷಯರೋಗಿಗಳಿಗೆ ನೀಡುವ ಮೂಲಕ ರಾಷ್ಟ್ರೀಯ ಕ್ಷಯರೋಗ ನಿರ್ಮೂಲನಾ ಕಾರ್ಯಕ್ರಮಕ್ಕೆ ಮಹತ್ವದ ಕೊಡುಗೆಯನ್ನು ನೀಡಿದ್ದಾರೆ ಎಂದು ತಿಳಿಸಿದರು.

ಕಾರ್ಯಕ್ರಮ ಅಧ್ಯಕ್ಷತೆಯನ್ನು ವಹಿಸಿದ್ದ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿ ಡಾ. ಟಿ.ಲಿಂಗರಾಜು ಅವರು ಮಾತನಾಡಿ, ಆರೋಗ್ಯ ಇಲಾಖೆಯ ಅಧಿಕಾರಿಗಳು ಮತ್ತು ಸಿಬ್ಬಂದಿಗಳು ಒತ್ತಡದಿಂದ ಕರ್ತವ್ಯ ನಿರ್ವಹಿಸುತ್ತಿದ್ದರೂ ತಮ್ಮ ಹವ್ಯಾಸಗಳಿಗೆ ಕನಿಷ್ಟ ಸಮಯವನ್ನು ನೀಡುವ ಮೂಲಕ ಒತ್ತಡವನ್ನು ಕಡಿಮೆ ಮಾಡಬಹುದಾಗಿದೆ. ಕಲ್ಯಾಣ ಕರ್ನಾಟಕ ಗ್ರಾಮೀಣ ಅಭಿವೃದ್ಧಿ ಮಂಡಳಿಯ ಅನುದಾನದಲ್ಲಿ 4 ಸಿಬಿನಾಟ್ ಯಂತ್ರಗಳನ್ನು ಜಿಲ್ಲಾ ಆಡಳಿತ ಕೊಡಿಸಿರುವುದರಿಂದ ಕ್ಷಯರೋಗ ಪತ್ತೆಯ ಪ್ರಮಾಣ ಹೆಚ್ಚಾಗಿರುವುದರಿಂದ ಈ ಹಿಂದೆ ಜಿಲ್ಲಾಧಿಕಾರಿಗಳಾಗಿದ್ದ ನಳಿನ್ ಅತುಲ್ ಮತ್ತು ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳಾಗಿದ್ದ ರಾಹುಲ್ ರತ್ನಂ ಪಾಂಡೆಯ ರವರಿಗೆ ಈ ವೇದಿಕೆಯ ಮುಖಾಂತರ ಕೃತಜ್ಞತೆಯನ್ನು ಸಲ್ಲಿಸಿದರು. ಜಿಲ್ಲೆಯಲ್ಲಿ ಕ್ಷೇತ್ರಮಟ್ಟದಿಂದ ಎಲ್ಲಾ ಸಿಬ್ಬಂದಿಗಳು ಕ್ಷಯರೋಗ ನಿರ್ಮೂಲನೆಯಲ್ಲಿ ತೊಡಗುವ ಮೂಲಕ ಕ್ಷಯರೋಗ ಪತ್ತೆಯಲ್ಲಿ ರಾಜ್ಯಕ್ಕೆ ಪ್ರಥಮ ಸ್ಥಾನ ಪಡೆದಿರುವುದಾಗಿ ತಿಳಿಸಿದರು.

ಮುಕುಂದ ಸುಮಿ ಸ್ಪೇಷಲ್ ಸ್ಟೀಲ್ಸ್ ಲಿಮಿಟೆಡ್, ಹೊಸ ಕನಕಾಪುರ ಕಾರ್ಖಾನೆಯ ಪ್ಲಂಟ್ ಮುಖ್ಯಸ್ಥರು ಓಂ ಪ್ರವಾಲ ಸಿಂಗ್ ಅವರು ಮಾತನಾಡುತ್ತಾ ಜಾಗತಿಕ ಮಟ್ಟದಲ್ಲಿ ಭಾರತವು ಟಿಬಿ ಖಾಯಿಲೆಯಲ್ಲಿ ಹೆಚ್ಚಾಗಿ ಆವರಿಸಿದೆ. ಜಾಗತಿಕ ಮಟ್ಟದಲ್ಲಿ 2030ರ ಒಳಗೆ ಕ್ಷಯ ಮುಕ್ತ ಮಾಡಲಾಗುವುದು ಎಂದು ತಿಳಿಸುವ ಮೂಲಕ ಆರೋಗ್ಯ ಇಲಾಖೆ ಮುಖ್ಯಸ್ಥರಿಗೆ ಈ ಅವಕಾಶ ಕಲ್ಪಿಸಿದ್ದಾಕ್ಕಾಗಿ ಕೃತಜ್ಞತೆಯನ್ನು ಸಲ್ಲಿಸುತ್ತೇನೆ ಎಂದರು.

ಇದೇ ಕಾರ್ಖಾನೆಯ ಟೆಟ್ ಸುಯ ಹೋರಿ (ಕೋ-ಸಿಇಒ ಜಪಾನ್) ಅವರು ಮಾತನಾಡುತ್ತಾ ಕ್ಷಯರೋಗ ನಿರ್ಮೂಲನೆಯಲ್ಲಿ ನಮ್ಮನ್ನು ತೊಡಗಿಸಿಕೊಂಡಿದ್ದಕ್ಕೆ ಧನ್ಯವಾದಗಳನ್ನು ಸಲ್ಲಿಸುತ್ತಾ ಮುಂದಿನ ದಿನಗಳಲ್ಲಿ ನಮ್ಮ ಸಂಸ್ಥೆಯ ಸಹಕಾರ ಮುಂದುವರೆಸುವುದಾಗಿ ತಿಳಿಸಿದರು. ರಾಷ್ಟ್ರೀಯ ಕ್ಷಯರೋಗ ನಿರ್ಮೂಲನಾ ಕಾರ್ಯಕ್ರಮದಡಿ ಸಾಧಕರಿಗೆ ಪಶಸ್ತಿ ಪ್ರಧಾನ:* ಇದೇ ಸಂದರ್ಭದಲ್ಲಿ ರಾಷ್ಟ್ರೀಯ ಕ್ಷಯರೋಗ ನಿರ್ಮೂಲನ ಕಾರ್ಯಕ್ರಮದಡಿಯಲ್ಲಿ ಉತ್ತಮ ಸಾಧನೆ ಮಾಡಿರುವ ಆರೋಗ್ಯ ಇಲಾಖೆ ಸಿಬ್ಬಂದಿಗಳಿಗೆ, ಖಾಸಗಿ ವೈದ್ಯರಿಗೆ, ನಿಕ್ಷಯ್ ಮಿತ್ರರವರಿಗೆ ಮತ್ತು ಇತರಿಗೆ ಪಶಸ್ತಿ ಪ್ರಧಾನ ಮಾಡಿ ಪುರಸ್ಕರಿಸಲಾಯಿತು.

ಕಾರ್ಯಕ್ರಮದಲ್ಲಿ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಜಿಲ್ಲಾ ಅನುಷ್ಠಾನ ಅಧಿಕಾರಿ ಡಾ. ರವೀಂದ್ರನಾಥ ಎಂ.ಹೆಚ್., ಜಿಲ್ಲಾ ಆರ್.ಸಿ.ಹೆಚ್. ಮತ್ತು ಕುಟುಂಬ ಕಲ್ಯಾಣ ಅಧಿಕಾರಿ ಡಾ. ಪ್ರಕಾಶ ವಿ., ಅಸಂಕ್ರಾಮಿಕ ರೋಗಗಳ ನಿಯಂತ್ರಣಾಧಿಕಾರಿ ಡಾ. ಪ್ರಕಾಶ ಹೆಚ್., ಜಿಲ್ಲಾ ಸರ್ವೇಕ್ಷಣಾ ಮತ್ತು ರೋಗ ವಾಹಕ ಆಶ್ರೀತ ರೋಗಗಳ ನಿಯಂತ್ರಣಾಧಿಕಾರಿ ಡಾ. ನಂದಕುಮಾರ, ಜಿಲ್ಲಾ ಯೋಜನಾ ಅಭಿವೃದ್ಧಿ ಅಧಿಕಾರಿ ಡಾ. ಗೋನಾಳು ಕುಮಾರಸ್ವಾಮಿ, ಗಂಗಾವತಿ ತಾಲ್ಲೂಕು ಆರೋಗ್ಯಾಧಿಕಾರಿ ಡಾ. ಗೌರಿಶಂಕರ, ಯಲಬುರ್ಗಾ ತಾಲ್ಲೂಕು ಆರೋಗ್ಯಾಧಿಕಾರಿ ಡಾ. ನೇತ್ರಾವತಿ ಹಿರೇಮಠ, ಗಂಗಾವತಿ ಉ.ವಿ.ಆಸ್ಪತ್ರೆ ಫಿಜಿಷಿಯನ್ ಡಾ. ಸೋಮಶೇಖರ ಕಬ್ಬೇರ, ಮುನಿರಾಬಾದ ಸ.ಆ.ಕೇಂದ್ರದ ವೈದ್ಯಾಧಿಕಾರಿ ಡಾ. ಕೆ.ಹೆಚ್. ತೊಗರಿ ಸೇರಿದಂತೆ ಮತ್ತಿತರರು ಉಪಸ್ಥಿತರಿದ್ದರು.

# ಪರೀಕ್ಷಾ ಕೇಂದ್ರಗಳಿಗೆ ಭೇಟಿ



**ವಿಜಯಪುರ:** ನಗರದ ಮರಾಠಿ ವಿದ್ಯಾಲಯ ಹಾಗೂ ಹೇಮರಡ್ಡಿ ಮಲ್ಲಮ್ಮ ಪ್ರೌಢ ಶಾಲೆಗಳ ಎಸ್ಸೆಸ್ಸೆಲ್ಸಿ ಪರೀಕ್ಷಾ ಕೇಂದ್ರಕ್ಕೆ ಜಿಲ್ಲಾಧಿಕಾರಿಗಳಾದ ಡಾ.ಆನಂದ ಕೆ ಅವರು ಬುಧವಾರ ಭೇಟಿ ನೀಡಿ, ಪರಿಶೀಲನೆ ನಡೆಸಿದರು.

ಈ ಸಂದರ್ಭದಲ್ಲಿ ಪರೀಕ್ಷೆ ಸುಸೂತ್ರವಾಗಿ ನಡೆಸುವ ನಿಟ್ಟಿನಲ್ಲಿ ಪರೀಕ್ಷಾ ಮಾರ್ಗಸೂಚಿಯನ್ವಯ ಕಾರ್ಯ ನಿರ್ವಹಿಸುವಂತೆಯೂ, ಯಾವುದೇ ಸಮಸ್ಯೆ ಬಾರದ ರೀತಿಯಿಂದ ಅತ್ಯಂತ ಜಾಗ್ರತೆಯಿಂದ ಕಾರ್ಯನಿರ್ವಹಿಸಿ ಸುಸೂತ್ರ ಪರೀಕ್ಷೆ ನಡೆಯುವ ನಿಟ್ಟಿನಲ್ಲಿ ಕಾರ್ಯೋನ್ಮುಖವಾಗುವಂತರ ಪರೀಕ್ಷೆಗೆ ನಿಯೋಜಿತ ಅಧಿಕಾರಿಗಳಿಗೆ ಸೂಚನೆ ನೀಡಿದರು.

ಈ ಸಂದರ್ಭ ಪರೀಕ್ಷಾ ಕೇಂದ್ರದಲ್ಲಿ ಒದಗಿಸಿರುವ ಮೂಲಭೂತ ಸೌಲಭ್ಯ,ಭದ್ರತೆ ಕುಡಿಯುವ ನೀರು,ಅಳವಡಿಸಿರುವ ಸಿಸಿಟಿವಿ ಎಲ್ಲ ವ್ಯವಸ್ಥೆಗಳನ್ನು ಪರಿಶೀಲನೆ ನಡೆಸಿದ ಅವರು ಸಮರ್ಪಕವಾಗಿ ಇರುವಂತೆ ನೋಡಿಕೊಳ್ಳಿ,ಕಟ್ಟುನಿಟ್ಟಾಗಿ ಮೇಲ್ವಿಚಾರಣೆ ಇರಬೇಕು.ಸಮಯಪಾಲನೆ ಅನುಸರಿಸಿಪರೀಕ್ಷೆಗೆ ನಿಯೋಜಿತ ಅಧಿಕಾರಿ,ಸಿಬ್ಬಂದಿ ವಹಿಸಿರುವ ಜವಾಬ್ದಾರಿ ಅಚ್ಚುಕಟ್ಟಾಗಿ ಬಹು ಎಚ್ಚರಿಕೆಯಿಂದ ನಿಭಾಯಿಸಿ ಎಂದು ಸೂಚನೆ ನೀಡಲಾಯಿತು. ಈ ಸಂದರ್ಭದಲ್ಲಿ ಪರೀಕ್ಷೆಗೆ ನಿಯೋಜಿತ ಅಧಿಕಾರಿ,ಸಿಬ್ಬಂದಿ ಇದ್ದರು.

# ಪತ್ರಕರ್ತರ ಸಮ್ಮೇಳನಕ್ಕೆ ಮುಖ್ಯಮಂತ್ರಿಗೆ ಆಹ್ವಾನ



ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘವು (KUWJ)ಬೀದರ್ ನಲ್ಲಿ ಏಪ್ರಿಲ್ 11&12 ರಂದು ಏರ್ಪಡಿಸಲಿರುವ 40ನೇ ರಾಜ್ಯ ಪತ್ರಕರ್ತರ ಸಮ್ಮೇಳನಕ್ಕೆ ಸಿದ್ದಗೊಳ್ಳುತ್ತಿರುವ ಪತ್ರಕರ್ತ ವಿಶೇಷ ಸಂಚಿಕೆಗೆ ಸಂದೇಶ, ವಿಶೇಷ ಲೇಖನ ಕೊಡುವಂತೆ ಸಿಎಂ ಸಿದ್ದರಾಮಯ್ಯ ಅವರನ್ನು ಸಂಘದ ರಾಜ್ಯಾಧ್ಯಕ್ಷರಾದ ಶಿವಾನಂದ ತಗಡೂರು ವಿನಂತಿಸಿ ವಿಧಾನಸೌಧದಲ್ಲಿ ಮನವಿ ಸಲ್ಲಿಸಿದರು ಮತ್ತು ಸಮ್ಮೇಳನಕ್ಕೆ ಆಹ್ವಾನಿಸಿದರು.

# ಕೊರತೆ ಇರುವ ಪಾಲಿಕೆಗೆ ನೆರವು



**ಬೆಂಗಳೂರು:**"ಬಜೆಟ್ ಮಂಡನೆಗೆ ಹಣಕಾಸಿನ ಕೊರತೆ ಇರುವ ಪಾಲಿಕೆಗಳಿಗೆ ರಾಜ್ಯ ಸರ್ಕಾರ ನೆರವು ನೀಡಲಿದೆ" ಎಂದು ಡಿಸಿಎಂ ಡಿ.ಕೆ. ಶಿವಕುಮಾರ್ ಅವರು ತಿಳಿಸಿದರು. ವಿಧಾನಸೌಧದ ಆವರಣದಲ್ಲಿ ಬೆಂಗಳೂರು ನಗರಾಭಿವೃದ್ಧಿ ಸಚಿವರೂ ಆಗಿರುವ ಶಿವಕುಮಾರ್ ಅವರು ಮಾಧ್ಯಮಗಳ ಪ್ರಶ್ನೆಗೆ ಬುಧವಾರ ಪ್ರತಿಕ್ರಿಯೆ ನೀಡಿದರು. ಪಾಲಿಕೆ ಬಜೆಟ್ ವಿಚಾರವಾಗಿ ಕೇಳಿದಾಗ, "ಬೆಂಗಳೂರಿನ ಐದು ಪಾಲಿಕೆಗಳು ಪ್ರತ್ಯೇಕ ಬಜೆಟ್ ಮಂಡಿಸಲಿದ್ದು, ಉತ್ತಮ ಯೋಜನೆ ರೂಪಿಸಲಾಗಿದೆ. ಈ ಬಗ್ಗೆ ಶಾಸಕರ ಜತೆಗೂ ಚರ್ಚೆ ಮಾಡಲಾಗಿದೆ. ವಿಕೇಂದ್ರಿಕರಣದಿಂದಾಗಿ ಆಯಾ ಪಾಲಿಕೆಗಳ ಅನುದಾನ ಬೇರೆಡೆಗೆ ವರ್ಗಾವಣೆ ಆಗುವುದಿಲ್ಲ" ಎಂದು ಹೇಳಿದರು.

# ಜಯಂತಿ ಆಚರಣೆಗೆ ನಿರ್ಧಾರ



**ಯಲಬುರ್ಗಾ:** ಹಸಿರು ಕ್ರಾಂತಿಯ ಹರಿಕಾರ ಡಾ. ಬಾಬು ಜಗಜೀವನ ರಾಂ ಹಾಗೂ ಸಂವಿಧಾನ ಶಿಲ್ಪಿ ಡಾ. ಬಿಆರ್ ಅಂಬೇಡ್ಕರ ಮಹನೀಯರ ಜಯಂತಿಯನ್ನು ಅರ್ಥಪೂರ್ಣವಾಗಿ ಆಚರಣೆ ಮಾಡುವ ಕುರಿತು ಪಟ್ಟಣದ ಕಂದಾಯ ಭವನದಲ್ಲಿ ಪೂರ್ವಭಾವಿ ಸಭೆಯಲ್ಲಿ ತಹಶೀಲ್ದಾರ ಪ್ರಕಾಶ ನಾಶಿ ಅವರು ಅಧ್ಯಕ್ಷತೆ ವಹಿಸಿ ಮಾತನಾಡಿ, ತಾಲೂಕ ಆಡಳಿತದಿಂದ ಏ. 5 ರಂದು ಬಾಬು ಜಗಜೀವನ್ ರಾಂ ಅವರ119 ನೆಯ ಜಯಂತಿ, ಮತ್ತು ಏ. 14ರಂದು ಡಾ. ಬಿಆರ್ ಅಂಬೇಡ್ಕರ ಅವರ 135 ನೆಯ ಜಯಂತಿ ಆಚರಣೆಯಲ್ಲಿ ಅಧಿಕಾರಿಗಳು ಸೇರಿದಂತೆ ಸರ್ವಮುಖಂಡರು ಭಾಗವಹಿಸಿ ಯಶಸ್ವಿಗೊಳಿಸಬೇಕು ಎಂದರು. ಈ ಮಹನೀಯರ ಜಯಂತಿಯನ್ನು ಪ್ರತ್ಯೇಕವಾಗಿ ಅರ್ಥಪೂರ್ಣವಾಗಿ ಆಚರಣೆ ಮಾಡುವುದರಿಂದ ಕಾರ್ಯಕ್ರಮಕ್ಕೆ ಉತ್ತಮ ಮೆರುಗು ಬರುತ್ತದೆ ಮತ್ತು ಉಪನ್ಯಾಸಕರಿಗೆ ಹೆಚ್ಚಿನ ಸಮಯ ಕೊಟ್ಟಾಗ ಅವರ ಆಚಾರ ವಿಚಾರಗಳನ್ನು ಸಮಗ್ರವಾಗಿ ಉಪನ್ಯಾಸಕರಿಂದ ಅರಿತುಕೊಳ್ಳುವುದಕ್ಕೆ ಸಾಧ್ಯವಾಗುತ್ತದೆ ಎಂಬ ಹಿತದೃಷ್ಟಿಯಿಂದ, ಉತ್ತಮ ಅಭಿಪ್ರಾಯವನ್ನು ಸಭೆಯಲ್ಲಿ ಸಂಘಟಿಕರು ಸಭೆಯಲ್ಲಿ ತಮ್ಮ ಮನದಾಳದ ಮಾತನ್ನು ಬಿಚ್ಚಿಇಟ್ಟರು, ಏಪ್ರಿಲ್ 5 ಮತ್ತು 14ರಂದು ಆಚರಣೆ ಮಾಡುವ ಕಾರ್ಯಕ್ರಮವು ಪಟ್ಟಣ ಪಂಚಾಯತಿ ಇಂದ ಪ್ರಾರಂಭವಾಗಿ ಮಹನೀಯರ ಭಾವಚಿತ್ರದ ಮೆರವಣಿಗೆಯ ಮುಖಾಂತರವಾಗಿ ,ಸಕಲವಾದ್ಯಗಳೊಂದಿಗೆ ವಿವಿಧ ವೃತದ ಮೂಲಕ ಸಾಗಿ ಬಂದ ಬಳಿಕ ವೇದಿಕೆ ಕಾರ್ಯಕ್ರಮದಲ್ಲಿ ವಿಶೇಷ ಉಪನ್ಯಾಸ ಜರಗುವುದು.ಈ ವೇಳೆ ವಿದ್ಯಾರ್ಥಿಗಳಿಗೆ ಹಾಗು ಸಾದಕರಿಗೆ ಸನ್ಮಾನ ಕಾರ್ಯಕ್ರಮ ಜರುಗುವದು ಎಂದು ತಿಳಿಸಿದರು.

# ಆನೆ, ಕಾಡೆಮ್ಮೆ ಹಾವಳಿ ನಿಯಂತ್ರಣಕ್ಕೆ ಕ್ರಮ

• ಮಲ್ಲಮ್ಮ ನುಡಿ ವಾರ್ತೆ ಬೆಂಗಳೂರು

ಭದ್ರಾ ಅಭಯಾರಣ್ಯದ ಪರಿಸರ ಸೂಕ್ಷ್ಮ ವಲಯ ಪ್ರದೇಶವನ್ನು ನಿಗದಿ ಪಡಿಸುವ ಕುರಿತಂತೆ ಚಿಕ್ಕಮಗಳೂರು ಜಿಲ್ಲೆಯ ಜನಪ್ರತಿನಿಧಿಗಳೊಂದಿಗೆ ಸಭೆ ನಡೆಸಲಾಗಿದ್ದು, ಕೇಂದ್ರ ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸಲಾಗುವುದು ಎಂದು ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ ಸಚಿವ ಈಶ್ವರ ಬಿ ಖಂಡ್ರೆ ತಿಳಿಸಿದರು.

ವಿಕಾಸಸೌಧದಲ್ಲಿಂದು ಚಿಕ್ಕಮಗಳೂರು ಜಿಲ್ಲೆ ಖಾಂಡ್ಯ ಹೋಬಳಿಯ ಗ್ರಾಮಸ್ಥರ ನಿಯೋಗವು ಕಾಡಾನೆ ಸೆರೆ, ಕಾಡುಕೋಣ ಮತ್ತು ಕಾಡುಹಂದಿಗಳ ಉಪಟಳ ನಿಯಂತ್ರಿಸುವಂತೆ ಕೋರಿ ಸಲ್ಲಿಸಿದ ಮನವಿ ಸ್ವೀಕರಿಸಿ ಮಾತನಾಡಿದ ಅವರು, 2011ರಲ್ಲಿ ಹಳ್ಳಿಗಳನ್ನೂ ಬಫರ್ ವಲಯದಲ್ಲಿ ಸೇರಿಸಲಾಗಿದೆ. ಅದೇ ರೀತಿ ಹಿಂದಿನ ಬಿಜೆಪಿ ಸರ್ಕಾರ ಡೀಮ್ಡ್ ಅರಣ್ಯ ವಿಚಾರದಲ್ಲೂ ವೈಜ್ಞಾನಿಕವಾಗಿ ಸಮೀಕ್ಷೆ ನಡೆಸದೆ, ಸಲ್ಲಿಸಿರುವ ಪ್ರಮಾಣ ಪತ್ರದಿಂದ ಗೊಂದಲವಾಗಿದ್ದು, ಈಗ ಆ ಸಮಸ್ಯೆಯನ್ನೂ ಪರಿಹರಿಸಲು ತಾವು ಪ್ರಾಮಾಣಿಕ ಪ್ರಯತ್ನ ಮಾಡುತ್ತಿರುವುದಾಗಿ ತಿಳಿಸಿದರು.

2022ರಲ್ಲಿ ಹಿಂದಿನ ಬಿಜೆಪಿ ಸರ್ಕಾರದಲ್ಲಿ ಅಧಿಕಾರಿಗಳು ಸ್ಥಳ ಪರಿಶೀಲನೆ ಮಾಡದೆ ಕುಳಿತಲ್ಲೇ ಮನೆ, ಪಟ್ಟಾ ಜಮೀನು, ಸರ್ಕಾರಿ ಕಚೇರಿ, ಶಾಲೆ, ಆಸ್ಪತ್ರೆ ಎಲ್ಲವನ್ನೂ ಡೀಮ್ಡ್ ಅರಣ್ಯದ ವ್ಯಾಪ್ತಿಗೆ



ಸೇರಿಸಿದ್ದಾರೆ. ಈಗ ಎಲ್ಲೆಲ್ಲಿ ಇಂತಹ ಸಮಸ್ಯೆ ಇದೆಯೋ ಅದಕ್ಕೆ ಪರ್ಯಾಯವಾಗಿ ಬೇರೆ ಭೂಮಿ ಗುರುತಿಸಿ, ಡೀಮ್ಡ್ 2ರಲ್ಲಿ ಸಲ್ಲಿಸಿರುವ ಪ್ರಮಾಣಪತ್ರದಲ್ಲಿರುವ ಅರಣ್ಯ ಪ್ರದೇಶದ ಪ್ರಮಾಣ ಉಳಿಸಿಕೊಂಡು ಸುಪ್ರೀಂಕೋರ್ಟ್ ಗೆ ಪ್ರಮಾಣ ಪತ್ರ ಸಲ್ಲಿಸಲಾಗುವುದು ಎಂದರು.

**ಆನೆ ಹಾವಳಿಗೆ ಶಾಶ್ವತ ಪರಿಹಾರ:**

ಗ್ರಾಮಗಳಿಗೆ ನುಗ್ಗಿ ಬೆಳೆಹಾನಿ, ಜೀವಹಾನಿ ಮಾಡುತ್ತಿರುವ ಆನೆಗಳ ಸೆರೆಗೆ ಆದೇಶ ನೀಡಿದ್ದು, ಈಗಾಗಲೇ 2 ಆನೆ ಸೆರೆ ಹಿಡಿಯಲಾಗಿದೆ. ಇನ್ನೂ ಎರಡು ಆನೆಗಳನ್ನು ಸೆರೆ ಹಿಡಿಯಲು ಮುಖ್ಯ ವನ್ಯಜೀವಿ ಪರಿಪಾಲಕರಿಗೆ ಸೂಚಿಸಲಾಗಿದೆ ಎಂದು ತಿಳಿಸಿದರು.

ಚಿಕ್ಕಮಗಳೂರು, ಕೊಡಗು ಮತ್ತು ಹಾಸನದ ಕೆಲವು ಭಾಗದಲ್ಲಿ ಕಾಡಿನ ಹೊರಗೆ 100ಕ್ಕೂ ಹೆಚ್ಚು ಆನೆಗಳಿದ್ದು, ಅವುಗಳಿಗೆ ಕಾಫಿ ತೋಟ ಯಾವುದು, ಅರಣ್ಯ ಯಾವುದು ಎಂದು ತಿಳಿಯುವುದಿಲ್ಲ. ಇದಕ್ಕೆ ಶಾಶ್ವತ ಪರಿಹಾರ ಕಲ್ಪಿಸಲು ಆನೆಧಾಮ ನಿರ್ಮಿಸಲು 53 ಕೋಟಿ ರೂ. ಮಂಜೂರು ಮಾಡಿಸಿದ್ದೇನೆ, ಆನೆ ಕಂದಕ ನಿರ್ವಹಣೆ, ಟೆಂಟಕಲ್ ಫೆನ್ಸಿಂಗ್, ಸೌರ ತಂತಿ ಬೇಲಿ ಅಳವಡಿಕೆ ಮಾಡಲಾಗಿದೆ, ಸಮಗ್ರ ಕಮಾಂಡ್ ಸೆಂಟರ್ ಮಾಡಿ ಸಾರ್ವಜನಿಕರಿಗೆ ವನ್ಯಜೀವಿ ಸಂಚಾರದ ಬಗ್ಗೆ ಮಾಹಿತಿ ನೀಡಲಾಗುತ್ತಿದೆ. 12 ಕೋಟಿ ರೂ.ವೆಚ್ಚದಲ್ಲಿ ನಿಮ್ಮ ಭಾಗದಲ್ಲಿ ರೈಲ್ವೆ ಹಳಿ ತಡೆಗೋಡೆ ನಿರ್ಮಿಸಲಾಗುತ್ತಿದೆ ಎಂದು ಈಶ್ವರ ಖಂಡ್ರೆ ತಿಳಿಸಿದರು.

ಕಾಡುಕೋಣ, ಕಾಡೆಮ್ಮೆ ನಿಯಂತ್ರಣ-ಕ್ಕೆ ಇಲಾಖೆಯ ಸಿಬ್ಬಂದಿ ತರಬೇತಿ ಪಡೆದು ಬಂದಿದ್ದು, ಕಾಡುಪ್ರಾಣಿಗಳಿಗಾಗಲೀ, ಕಾಡಿನಂಚಿನ ಗ್ರಾಮಸ್ಥರಿಗಾಗಲೀ ತೊಂದರೆ ಆಗದಂತೆ ಹಾಗೂ ಜೀವ, ಜೀವನೋಪಾಯ ಎರಡನ್ನೂ ಉಳಿಸಲು ಪ್ರಕೃತಿ ಪರಿಸರ ರಕ್ಷಣೆಯೊಂದಿಗೆ ಸುಸ್ಥಿರ ಅಭಿವೃದ್ಧಿಗೆ ಕ್ರಮ ವಹಿಸಲಾಗುವುದು ಎಂದರು.

ಕಾಡಿನಂಚಿನ ಗ್ರಾಮಗಳಲ್ಲಿ ಜನ ಸಂಪರ್ಕ ಸಭೆ ನಡೆಸುವ ಮೂಲಕ ಗ್ರಾಮಗಳ ಮೂಲಸೌಲಭ್ಯ ಮತ್ತು ಗ್ರಾಮೀಣ ಜನರ ಕೌಶಲ್ಯವರ್ಧನೆಯಂತಹ ಕಾರ್ಯಕ್ರಮಗಳನ್ನೂ ಇಲಾಖೆಯ ವತಿಯಿಂದ ಹಮ್ಮಿಕೊಳ್ಳಲಾಗುತ್ತಿದೆ ಎಂದರು.

ಶೃಂಗೇರಿ ಶಾಸಕ ರಾಜೇಗೌಡ, ಭದ್ರಾ ಅಚ್ಚುಕಟ್ಟು ಅಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷರಾದ ಡಾ. ಅಂಶುಮಂತಗೌಡ, ಅರಣ್ಯ ಇಲಾಖೆ ಪ್ರಧಾನ ಕಾರ್ಯದರ್ಶಿ ಮನೋಜ್ ಕುಮಾರ್ ಮತ್ತಿತರರು ಪಾಲ್ಗೊಂಡಿದ್ದರು.

# ಕೇಂದ್ರದ ವಿರುದ್ಧ ಪ್ರತಿಭಟನೆ..!

• ಮಲ್ಲಮ್ಮ ನುಡಿ ವಾರ್ತೆ ವಿಜಯಪುರ

ಕೇಂದ್ರ ಸರ್ಕಾರ ಜಾರಿಗೊಳಿಸಲು ಮುಂದಾಗಿರುವ ಟ್ರಾನ್ಸಜೆಂಡರ ಹಕ್ಕುಗಳ ತಿದ್ದುಪಡಿ ಮಸೂದೆ 2026 ಕ್ಕೆ ವಿಜಯಪುರದ ರಾಷ್ಟ್ರೀಯ ಲಿಂಗತ್ವ ಮತ್ತು ಲೈಂಗಿಕ ಅಲ್ಪಸಂಖ್ಯಾತ ಮತ್ತು ಟ್ರಾನ್ಸಜೆಂಡರ್ ಗಳ ಒಕ್ಕೂಟದಿಂದ ತೀವ್ರ ಆಕ್ರೋಶ ವ್ಯಕ್ತವಾಗಿದೆ. ವಿಜಯಪುರದ ಜಿಲ್ಲಾಧಿಕಾರಿ ಡಾ.ಆನಂದ ಕೆ ಅವರ ಮನೆಯ ಎದುರು ಪ್ರತಿಭಟನೆ ನಡೆಸಿ ಆಕ್ರೋಶ ಹೊರ ಹಾಕಿದರು.

ಹೌದು ಅಂಬೇಡ್ಕರ್ ವೃತ್ತದಲ್ಲಿ ಜಮಾವಣೆಗೊಂಡ ಇನ್ನೂರಕ್ಕೂ ಹೆಚ್ಚು ಲೈಂಗಿಕ ಅಲ್ಪಸಂಖ್ಯಾತರಿಂದ ಅರ್ಧ ಗಂಟೆಗೂ ಹೆಚ್ಚು ಕಾಲ ಜಿಲ್ಲಾಧಿಕಾರಿ ಮನೆಯ ಮುಂಭಾಗದಲ್ಲಿ ಕುಳಿತು ಪ್ರತಿಭಟನೆ ನಡೆಸಿ ಆಕ್ರೋಶ ಹೊರ ಹಾಕಿದರು. ಕೇಂದ್ರ ಸರ್ಕಾರದ 2026 ರ ತಿದ್ದುಪಡಿ ಕಾಯ್ದೆ ಕೈ ಬಿಡುವಂತೆ ಆಗ್ರಹಿಸಿ ಕೇಂದ್ರ ಸರ್ಕಾರದ ವಿರುದ್ಧ ಘೋಷಣೆ




ಕೂಗಿ ತಮ್ಮ ಆಕ್ರೋಶ ವ್ಯಕ್ತಪಡಿಸಿದರು. ಈ ವೇಳೆ ಪ್ರತಿಭಟನಾ ನಿರತರು 2026 ರ ಲೈಂಗಿಕ ಅಲ್ಪಸಂಖ್ಯಾತ ಕಾಯಿದೆ ತಿದ್ದುಪಡಿ ಪತ್ರದ ನಕಲು ಪ್ರತಿಗಳಿಗೆ ಅಂಬೇಡ್ಕರ್ ವೃತ್ತದಲ್ಲಿ ಬೆಂಕಿ ಹಚ್ಚುವ ಮೂಲಕ ತಮ್ಮ ಆಕ್ರೋಶ ಹೊರ ಹಾಕಿದರು.

ಬಳಿಕ ಜಿಲ್ಲಾಧಿಕಾರಿ ಗಳ ಕಚೇರಿಗೆ ತೆರಳಿ ಜಿಲ್ಲಾಧಿಕಾರಿಗಳ ಮೂಲಕ ರಾಷ್ಟ್ರಪತಿ ಹಾಗೂ ಪ್ರಧಾನಮಂತ್ರಿ ಅವರಿಗೆ ಮನವಿ ಸಲ್ಲಿಸಿದರು.

# ವಿದ್ಯಾ ಕೇಂದ್ರದಲ್ಲಿ ಶಹೀದ್ ದಿವಸ್

• ಮಲ್ಲಮ್ಮ ನುಡಿ ವಾರ್ತೆ ಹಗರಿಬೊಮ್ಮನಹಳ್ಳಿ

ವಿಜಯನಗರ ಜಿಲ್ಲೆ ಹಗರಿಬೊಮ್ಮನಹಳ್ಳಿಯಲ್ಲಿ ಇರುವ ರಾಷ್ಟ್ರೋತ್ಥಾನ ವಿದ್ಯಾಕೇಂದ್ರ ಸಿಬಿಎಸ್ಇ ಯಲ್ಲಿ ಬುಧವಾರದಂದು ಭಾರತದ ಸ್ವಾತಂತ್ರ್ಯ ಸಂಗ್ರಾಮದಲ್ಲಿ ಅಪ್ರತಿಮ ಧೈರ್ಯ ತೋರಿದ ಮೂವರು ಯುವ ಕ್ರಾಂತಿಕಾರಿಗಳಾದ ಭಗತ್ ಸಿಂಗ್, ಸುಖ್‌ದೇವ್ ಥಾಪರ್ ಮತ್ತು ಶಿವ ರಾಮ್ ರಾಜ್‌ಗುರು ಅವರು ಬ್ರಿಟಿಷ್ ಸರ್ಕಾರದಿಂದ ಗಲ್ಲಿಗೇರಿಸಲ್ಪಟ್ಟ ದಿನವಾದ 'ಶಹೀದ್ ದಿವಸ್' ಆಚರಿಸಲಾಯಿತು.

ಪ್ರಾಥಮಿಕ ವಿಭಾಗದ ಶೈಕ್ಷಣಿಕ ಸಂಯೋಜಕರಾದ ಶ್ರೀಮತಿ.ರೇಣುಕಾ. ಎಸ್ ರವರು ಮಾರ್ಚ್ 23ರ ಶಹೀದ್ ದಿವಸ್ ಸ್ಮರಣಾರ್ಥವಾಗಿ ವಿದ್ಯಾರ್ಥಿಗಳಿಗೆ ಆ ದಿನದ ಹಿನ್ನೆಲೆ ಮತ್ತು ಘಟನೆಗಳನ್ನು ತಿಳಿಸಿದರು. ಅವರು ಮಾತನಾಡಿ "1928ರಲ್ಲಿ ಲಾಲಾ ಲಜಪತ್ ರಾಯ್ ಅವರ ಸಾವಿಗೆ ಕಾರಣವಾದ ಬ್ರಿಟಿಷ್ ಅಧಿಕಾರಿ ಜೆ.ಪಿ. ಸ್ಯಾಂಡರ್ಸ್‌ನನ್ನು ಕೊಂದಿದ್ದಕ್ಕಾಗಿ ಮತ್ತು ದೆಹಲಿಯ ಅಸೆಂಬ್ಲಿಯಲ್ಲಿ ಬಾಂಬ್ ಎಸೆದು



ಪ್ರತಿಭಟಿಸಿದ್ದಕ್ಕಾಗಿ ಈ ಮೂವರು ಕ್ರಾಂತಿಕಾರಿಗಳನ್ನು ಬಂಧಿಸಲಾಯಿತು. ಬ್ರಿಟಿಷ್ ಸರ್ಕಾರವು ಇವರಿಗೆ 1931ರ ಮಾರ್ಚ್ 24ರಂದು ಗಲ್ಲು ಶಿಕ್ಷೆ ವಿಧಿಸಿತ್ತು. ಆದರೆ ಸಾರ್ವಜನಿಕರ ಆಕ್ರೋಶಕ್ಕೆ ಹೆದರಿ, ನಿಗದಿತ ಸಮಯಕ್ಕಿಂತ 11 ಗಂಟೆ ಮುಂಚಿತವಾಗಿ ಅಂದರೆ 1931ರ ಮಾರ್ಚ್ 23ರಂದು ಸಂಜೆ 7:33ಕ್ಕೆ ಇವರನ್ನು ಲಾಹೋರ್ ಜೈಲಿನಲ್ಲಿ ರಹಸ್ಯವಾಗಿ ಗಲ್ಲಿಗೇರಿಸಲಾಯಿತು. ಗಲ್ಲುಗಂಬಕ್ಕೆ ಏರುವಾಗಲೂ ಈ ಮೂವರು ಯಾವುದೇ ಭಯವಿಲ್ಲದೆ "ಇಂಕ್ವಿಲಾಬ್ ಜಿಂದಾಬಾದ್" ಎಂಬ ಘೋಷಣೆ ಕೂಗುತ್ತಾ, ನಗುನಗುತ್ತಾ ಸಾವನ್ನು ಸ್ವಾಗತಿಸಿದರು" ಎಂದು ಹೇಳಿದರು.

# ಸತ್ಯಕ್ಕೆ ದೂರವಾದ ಮಾತು: ಸಿಎಂ ಸಿದ್ದರಾಮಯ್ಯ

• ಮಲ್ಲಮ್ಮ ನುಡಿ ವಾರ್ತೆ ಬೆಂಗಳೂರು

ಸಾಲದ ಮೇಲೆ ಸರ್ಕಾರ ನಡೆಯುತ್ತಿದೆ ಎಂಬ ಟೀಕೆ ಬಂದಿದೆ. ಆದರೆ ನಮ್ಮ ಸರ್ಕಾರ 1.32 ಲಕ್ಷ ಕೋಟಿ ಸಾಲ ಮಾಡಿದ್ದು, ಬಜೆಟ್ ಗಾತ್ರ 4,48,0004 ಕೋಟಿ ಇದ್ದಾಗ ಸಾಲದ ಬಜೆಟ್ ಹೇಗೆ ಆಗಲು ಸಾಧ್ಯ ಸಾಲ ಮೇಲೆ ಸರ್ಕಾರ ನಡೆ-ಯುತ್ತಿದೆ ಎನ್ನುವುದು ಸತ್ಯಕ್ಕೆ ದೂರವಾದ ಮಾತು ಎಂದು ಸಿಎಂ ಸಿದ್ದರಾಮಯ್ಯ ಹೇಳಿದ್ದಾರೆ.

ಯಾವುದೇ ರಾಜ್ಯ ಅಥವಾ ದೇಶವಾಗಲಿ ಸಾಲ ಮಾಡದಿರಲು ಸಾಧ್ಯವಿಲ್ಲ, ಸಮಾಜ ಕಲ್ಯಾಣ ಹಾಗೂ ಅಭಿವೃದ್ಧಿಗಾಗಿ ಸಾಲ ಮಾಡಬೇಕು. ಸರ್ಕಾರ ಸಾಲವನ್ನು ನಿಯಮದ ಮಿತಿಯೊಳಗೆ ಮಾಡಲಾಗಿದೆ. ರಾಜ್ಯದ ಸಾಲದ ಮೊತ್ತ 8,24,000 ಕೋಟಿ ರೂ.ಗಳಷ್ಟಿದೆ ಎಂದು ತಿಳಿಸಿದ್ದಾರೆ.

2008 ರಿಂದ 2013 ರವರೆಗೆ ಇದ್ದ ಬಿಜೆಪಿಯೂ ಸಾಲ ಮಾಡಿದೆ. ಐದು ವರ್ಷಕ್ಕೊಮ್ಮೆ ಸಾಲ ದುಪ್ಪಟ್ಟು ಆಗುತ್ತದೆ. ಮೋದಿಯವರು ಪ್ರಧಾನಿಯಾದ ನಂತರ 165 ಲಕ್ಷ ಕೋಟಿ ಸಾಲ ಮಾಡಿದ್ದಾರೆ. ಜಿಡಿಪಿ ಬೆಳವಣಿಗೆಯಲ್ಲಿ ರಾಜ್ಯಕ್ಕಿಂತ ದೇಶ ಕಡಿಮೆ ಇದೆ. ಡೆಕ್ಕನ್ ಹೆರಾಲ್ಡ್ ಪತ್ರಿಕೆಯಲ್ಲಿ ನ ವರದಿಯಲ್ಲಿ , ದಕ್ಷಿಣ ಭಾರತದ ರಾಜ್ಯಗಳು, ದೇಶದ ಜಿಡಿಪಿಗೆ ಹೆಚ್ಚಿನ ಕೊಡುಗೆ ನೀಡುತ್ತಿದ್ದು, ಅದರಲ್ಲಿ ಕರ್ನಾಟಕ ಮುಂಚೂಣಿಯಲ್ಲಿದೆ. ಗ್ಯಾರಂಟಿಗಳಿಂದ ಸಾಲ ಹೆಚ್ಚಿದೆ ಎಂದು ಟೀಕಿಸಲಾಗಿದೆ. ಇದುವರೆಗೆ 1.31 ಲಕ್ಷ ಕೋಟಿ ಗ್ಯಾರಂಟಿಗಳಿಗೆ ವೆಚ್ಚ ಮಾಡಲಾಗಿದೆ. ಮಹಾರಾಷ್ಟ್ರ ಸರ್ಕಾರ, ಜನಕಲ್ಯಾಣ ಯೋಜನೆಗಳಿಗೆ ವರ್ಷದಿಂದ ವರ್ಷಕ್ಕೆ ಅನುದಾನ ಕಡಿಮೆ ಮಾಡಿದೆ. ಆದರೆ ನಮ್ಮ ಸರ್ಕಾರ ಗ್ಯಾರಂಟಿಗಳಿಗೆ ಪ್ರತಿ ವರ್ಷ ಒಂದೇ ರೀತಿಯಲ್ಲಿ ಅನುದಾನ ನೀಡಿದ್ದೇವೆ. ಯುವನಿಧಿಯಡಿ 600 ಕೋಟಿ ರೂ. ಮೀಸಲಿಡಲಾಗಿದ್ದು, ಈ ಯೋಜನೆಯನ್ನು ಖಂಡಿತವಾಗಿಯೂ ಸ್ಥಗಿತಗೊಳಿಸಿಲ್ಲ ಎಂದು ಸ್ಪಷ್ಟಪಡಿಸಿದ್ದಾರೆ. ನಮ್ಮ ಬಜೆಟ್ ರಿವಿನ್ಯೂ ಡಿಫಿಸಿಟ್ ಆಗಿದೆ. 2026-27ರ ಬಜೆಟ್ ನ್ನು ರೆವಿನ್ಯೂ ಸರ್ಪ್ಲಸ್ ಮಾಡಬೇಕೆಂಬ ಇಚ್ಛೆಯಿದ್ದರೂ, ಕೇಂದ್ರಸರ್ಕಾರದ ಅಸಹಕಾರದಿಂದ ಅದು ಸಾಧ್ಯವಾಗಲಿಲ್ಲ. ರಾಜ್ಯದ ಜಿಎಸ್ ಟಿ ಯಲ್ಲಿ 10% ಬೆಳವಣಿಗೆಯಿತ್ತು, ಆದರೆ ಕೇಂದ್ರಸರ್ಕಾರ, ಜಿಎಸ್ಟಿ ದರವನ್ನು ಕಡಿತಗೊಳಿಸಿದ್ದರಿಂದ , ಜಿಎಸ್ ಟಿ ಬೆಳವಣಿಗೆ 4% ಗೆ ಕುಸಿಯಿತು. ದೇಶದ ಏಳು ರಾಜ್ಯಗಳು ಕೇಂದ್ರದ ಈ ನೀತಿಯನ್ನು ವಿರೋಧಿಸಿ, ಪರಿಹಾರ ಕೇಳಿದ್ದೇವೆ. ಜಿಎಸ್ ಟಿ ಜಾ-ರಿಯಾದ ನಂತರದಿಂದ 2023-24ರವೆಗೆ ಕೇಂದ್ರ , ಪರಿಹಾರವನ್ನು ನೀಡಿದ್ದು, ನಂತರ ಕಾಂಗ್ರೆಸ್ ಸರ್ಕಾರ ರಾಜ್ಯದಲ್ಲಿ ಅಧಿಕಾರಕ್ಕೆ ಬಂದಾಗ, ಈ ಪರಿಹಾರ ನೀಡಲಾಗಿಲ್ಲ. ಇದರಿಂದ ರಾಜ್ಯದ ಬೊಕ್ಕಸಕ್ಕೆ 10 ಸಾವಿರ ಕಡಿಮೆಯಾಗಿ, 2026-27 ರಲ್ಲಿ 15 ಸಾವಿರ ಕೋಟಿ ನಷ್ಟವಾಗಲಿದೆ. ಕೇಂದ್ರ ಈ ಧೋರಣೆಯಿಂದ ರಾಜ್ಯಕ್ಕೆ ನಷ್ಟವುಂಟಾಗಿದೆ ಎಂದಿದ್ದಾರೆ.



# ನಂಬುಗೆ: ಬದುಕಿನ ಚೈತನ್ಯ ಮತ್ತು ಭರವಸೆಯ ಬೆಳಕು



**ಬದುಕು-ಬೆಳಕು**

ಡಾ.ಯಂಕನಗೌಡ ಪಾಟೀಲ್
ಉಪನ್ಯಾಸಕರು ಮಾಳಹಳ್ಳಿ

ನಂಬಿಕೆ ಎಂಬುದು ಮನುಷ್ಯನ ಅಂತರಂಗದ ಅರಮನೆ. "ನಂಬಿ ಕೆಟ್ಟವರಿಲ್ಲವೋ ರಂಗಯ್ಯನ" ಎಂಬ ದಾಸವಾಣಿಯಂತೆ, ನಂಬಿಕೆಯು ವ್ಯಕ್ತಿಯನ್ನು ದಾಸ್ಯದಿಂದ ಮತ್ತು ಆತಂಕದಿಂದ ಬಿಡುಗಡೆ ಮಾಡುತ್ತದೆ. ನಂಬಿಕೆ ಎಂದರೆ ಕೇವಲ ಒಂದು ಪದವಲ್ಲ; ಅದು ವ್ಯಕ್ತಿ, ವಸ್ತು ಅಥವಾ ವಿಷಯದ ಮೇಲಿರುವ ಅಚಲವಾದ ವಿಶ್ವಾಸ, ಭರವಸೆ ಮತ್ತು ಸಕಾರಾತ್ಮಕ ನಿರೀಕ್ಷೆ. ಇದು ಸತ್ಯ ಮತ್ತು ಪ್ರಾಮಾಣಿಕತೆಯನ್ನು ಆಧರಿಸಿದ್ದು, ಯಾವುದೇ ಸಂದೇಹವಿಲ್ಲದೆ ಒಂದು ವಿಷಯವನ್ನು ನಿಜವೆಂದು ಒಪ್ಪಿಕೊಳ್ಳುವ ಉದಾತ್ತ ಮನೋಭಾವವಾಗಿದೆ.

ಜೀವನದ ಯಶಸ್ಸು ಎಂಬುದು ಒಂದೇ ದಿನದಲ್ಲಿ ಒಲಿಯುವ ಚಮತ್ಕಾರವಲ್ಲ; ಅದು ಪ್ರತಿದಿನದ ಪ್ರಯತ್ನ ಮತ್ತು ಆತ್ಮವಿಶ್ವಾಸದಲ್ಲಿ ಹುಟ್ಟುತ್ತದೆ. "ನೀನು ನಿನ್ನನ್ನು ಮೊದಲು ನಂಬಿದರೆ, ಇಡೀ ಲೋಕವೇ ನಿನ್ನನ್ನು ನಂಬುತ್ತದೆ" ಎನ್ನುವಂತೆ, ನಂಬಿಕೆಯು ವ್ಯಕ್ತಿಯ ಬದ್ಧತೆ, ನಿಷ್ಠೆ ಮತ್ತು ಪ್ರಬುದ್ಧತೆಯನ್ನು ಜಗತ್ತಿಗೆ ತೋರಿಸುತ್ತದೆ. ನಮ್ಮ ಬದುಕಿನ ಪ್ರತಿ ಹಂತದಲ್ಲೂ ಹಾಸುಹೊಕ್ಕಾಗಿರುವ ಈ ನಂಬಿಕೆಯು ಸುಖದ ರಹದಾರಿಯಾಗಿದ್ದು, ನಮ್ಮನ್ನು ಉತ್ತುಂಗ



ಶಿಖರಕ್ಕೆ ಕೊಂಡೊಯ್ಯುವ ಶಕ್ತಿಯನ್ನು ಹೊಂದಿದೆ.

ಈ ನಂಬಿಕೆಯ ಪಯಣವು ಮೊದಲಿಗೆ ದೇವರ ಮೇಲಿನ ಅಚಲ ವಿಶ್ವಾಸದಿಂದ ಆರಂಭವಾಗುತ್ತದೆ. ಅದೃಶ್ಯ ಸೃಷ್ಟಿಕರ್ತನಲ್ಲಿನ ಆಳವಾದ ಶರಣಾಗತಿಯು ಜೀವನದ ಸಂಕಷ್ಟಗಳಲ್ಲಿ ನಮಗೆ ಸಾಂತ್ವನ ನೀಡುತ್ತದೆ. ಕಷ್ಟದ ಸಮಯದಲ್ಲಿಯೂ "ಒಳ್ಳೆಯದಾಗುತ್ತದೆ" ಎಂಬ ಧನಾತ್ಮಕ ದೃಷ್ಟಿಕೋನವನ್ನು ಬೆಳೆಸುವ ಮೂಲಕ ದೈನಂದಿನ ಬದುಕಿಗೆ ಇದು ಆನೆಬಲವನ್ನು ತುಂಬುತ್ತದೆ. ಇಂತಹ ಆಧ್ಯಾತ್ಮಿಕ ನಂಬಿಕೆಯ ಜೊತೆಗೆ, ನಮ್ಮ ಲೌಕಿಕ ಜೀವನದ ಬುನಾದಿ ಇರುವುದು ಮಾತಾಪಿತರ ಮೇಲಿನ ನಂಬಿಕೆಯಲ್ಲಿ. ತಂದೆ-ತಾಯಿಯ ತ್ಯಾಗವನ್ನು ಗೌರವಿಸಿ, ಅವರ ಮಾತುಗಳಿಗೆ ಬೆಲೆ ನೀಡುವುದು ಮನೆಯನ್ನು ಸ್ವರ್ಗವಾಗಿಸುತ್ತದೆ. ಇದು ಮಕ್ಕಳ ಭವಿಷ್ಯದ ಬೆಳವಣಿಗೆಗೆ ಭದ್ರವಾದ ಅಡಿಪಾಯವನ್ನು ಒದಗಿಸುತ್ತದೆ.

ಬದುಕು ಕೇವಲ ಕುಟುಂಬಕ್ಕೆ ಸೀಮಿತವಲ್ಲ, ಅದು ಗೆಳೆತನದ ಸವಿಯನ್ನೂ ಒಳಗೊಂಡಿದೆ. ಸ್ನೇಹಿತರ ನಡುವಿನ ನಂಬಿಕೆಯು ಪರಸ್ಪರ ಗೌರವ ಮತ್ತು ಕಷ್ಟಕಾಲದ ಬೆಂಬಲದ ಮೇಲೆ ನಿರ್ಮಿತವಾದ ಆತ್ಮೀಯ ಅಡಿಪಾಯವಾಗಿದೆ. ನಿಜವಾದ ಗೆಳೆಯರು ಗೌಪ್ಯತೆಯನ್ನು ಕಾಪಾಡುವ ಮೂಲಕ ಭಾವನಾತ್ಮಕ ಶಕ್ತಿಯಾಗಿ ನಿಲ್ಲುತ್ತಾರೆ. ಇನ್ನು ದಾಂಪತ್ಯ ಜೀವನಕ್ಕೆ ಬಂದರೆ, ಗಂಡ ಮತ್ತು ಹೆಂಡತಿಯ ನಡುವಿನ ನಂಬಿಕೆಯೇ ಆ ಸಂಬಂಧದ ಜೀವಾಳ. ಮುಕ್ತ ಸಂವಹನ, ಪ್ರಾಮಾಣಿಕತೆ ಮತ್ತು ಅನುಮಾನವನ್ನು ದೂರವಿಟ್ಟು ಕಷ್ಟ-ಸುಖಗಳಲ್ಲಿ ಜೊತೆಯಾಗಿ ನಿಲ್ಲುವುದರಿಂದ ಸಂಸಾರವು ಹಾಲು-ಜೇನಿನಂತೆ ಸವಿಯಾಗುತ್ತದೆ.

ಅಂತಿಮವಾಗಿ, ಒಂದು ಸಂಸ್ಥೆಯ ಅಥವಾ ದೇಶದ ಯಶಸ್ಸು ಅಲ್ಲಿನ ನಾಯಕರ ಮೇಲಿನ ನಂಬಿಕೆಯನ್ನು ಅವಲಂಬಿಸಿದೆ. ಒಬ್ಬ ನಾಯಕನ ಕಠಿಣ ಪರಿಶ್ರಮ, ಸಮಗ್ರತೆ ಮತ್ತು ದೂರದೃಷ್ಟಿಯು ಜನರಲ್ಲಿ ವಿಶ್ವಾಸವನ್ನು ಮೂಡಿಸುತ್ತದೆ. ಹೀಗೆ ನಮ್ಮ ಬದುಕಿನ ಅವಿಭಾಜ್ಯ ಅಂಗವಾಗಿರುವ ನಂಬಿಕೆಯು, ಅಂತರಂಗದ ಆತ್ಮವಿಶ್ವಾಸದಿಂದ ಹಿಡಿದು ಬಾಹ್ಯ ಜಗತ್ತಿನ ಭರವಸೆಯವರೆಗೆ ಎಲ್ಲವನ್ನೂ ವ್ಯಾಪಿಸಿದೆ. ಒಟ್ಟಾರೆಯಾಗಿ ಹೇಳುವುದಾದರೆ, ನಂಬಿಕೆಯೇ ಬದುಕಿನ ಬೆಳಕು ಮತ್ತು ಭವಿಷ್ಯದ ಭರವಸೆ.

Printed, Published and Owned by: Ramesh Reddy and Printed at Metropolitan Media Company Ltd., Plot No.224, in Sy.No.41/2, 41/B & 42, Kapnoor 2nd stage, Industrial Area, Kalburagi-585104. Published at Sy.No. 466, TMC No. 22-405, First Floor, Gada Complex, Opp. Inspection Bungalow, Humnabad-585330.Editor: Ramesh Reddy, Office Ph. No: +91 9449732000.

PRGI NO. 120927
(RNINO:KARKAN/2011/48371)